RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 95 ಪುಟ: 06 ಸೋಮವಾರ 10-03-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu

ಬೆಂಗಳೂರು | ಬೆಂ.ಗ್ರಾಮಾಂತರ ತುಮಕೂರು ಚಿತ್ರದುರ್ಗ ಮೈಸೂರು ಮಂಡ್ಯ ರಾಮನಗರ ಚಾ.ನಗರ ಹಾಸನ ಚಿಕ್ಕಬಳ್ಳಾಪುರ ಕೋಲಾರ

Honourary Editor: Venkatesh



ಬೈದವರಿಗೆಲ್ಲರಿಗೂ ಬ್ಯಾಟಲ್ಲೇ ಉತ್ತರ ನೀಡಿದ ರಾಹುಲ್

ತೆಲುಗು ಸಿನಿಮಾದಿಂದ ಹೊರಬಂದ ರುಕ್ಮಿಣಿ ವಸಂತ್

ಇದೆಲ್ಲ ನಮಗೆ ಹೊಸದಲ್ಲ ಪುಟ 6

# ಉಭಯ ಸದನಗಳಲ್ಲಿ ಪ್ರತಿಧ್ವನಿಸಿದ ರನ್ಯಾ ಕೇಸ್

## ಪ್ರಕರಣದ ಹಿಂದೆ ಇರುವ ಸಚಿವರು, ಅಧಿಕಾರಿಗಳ ಹೆಸರು ಬಹಿರಂಗ ಪಡಿಸಲು ಬಿಜೆಪಿ ಪಟ್ಟು: ತನಿಖೆ ಮಾಡ್ತೀವಿ ಎಂದ ಸರ್ಕಾರ

**ಬೆಂಗಳೂರು:** ಮಾಣಿಕ್ಯ ಚಿತ್ರದ ನಟಿ ರನ್ಯಾ ಸ್ಮಗ್ಲಿಂಗ್ ಪ್ರಕರಣ ದಿನೆ ದಿನೇ ಹೊಸ ತಿರುವು ಪಡೆದುಕೊಳ್ಳುತ್ತಿದ್ದು, ಸೋಮವಾರ ಉಭಯ ಸದನಗಳಲ್ಲೂ ಇದೇ ವಿಷಯ ಪ್ರತಿಧ್ವನಿಸಿತು.

ಅಕ್ರಮ ಚಿನ್ನ ಸಾಗಾಣಿಕೆ ಸಂಬಂಧಿಸಿದಂತೆ ಡಿಆರ್ ಐ ಮತ್ತು ಸಿಬಿಐ ಸುಳಿಯಲ್ಲಿ ಸಿಲುಕಿರುವ ರನ್ಯಾ ಹಿಂದೆ ತನಿಖೆ ವೇಳೆ ಈಕೆಯೊಂದಿಗೆ ಕೆಲ ಸಚಿವರು ಹಾಗೂ ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂಬ ವಿಷಯ ವಿಧಾನಸಭೆ ಮತ್ತು ವಿಧಾನಪರಿಷತ್‌ನಲ್ಲಿ ತೀವ್ರ ಚರ್ಚೆಗೆ ಕಾರಣವಾಯಿತು.

ತನಿಖೆ ವೇಳೆ ಆಕೆಯ ಮೊಬೈಲ್‌ನಲ್ಲಿ ಕೆಲವು ಹಾಲಿ ಹಾಗೂ ಮಾಜಿ ಸಚಿವರುಗಳ ದೂರವಾಣಿ ಸಂಖ್ಯೆಗಳು ಮತ್ತು ಕೆಲ ಹಿರಿಯ ಪೊಲೀಸ್ ಅಧಿಕಾರಿಗಳ ನಂಬರ್‌ಗಳು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಈ ಹಗರಣದಲ್ಲಿ ಅವರುಗಳು ಭಾಗಿಯಾಗಿರಬಹುದು ಎಂದು ತನಿಖಾಧಿಕಾರಿಗಳು ಸಂಶಯ ವ್ಯಕ್ತಪಡಿಸಿರುವ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಗೊಂಡ ವರದಿಯನ್ನಾಧರಿಸಿ ಭಾರತೀಯ ಜನತಾ ಪಕ್ಷ ಎರಡೂ ಸದನಗಳಲ್ಲಿ ವಿಷಯವನ್ನು ಪ್ರಸ್ತಾಪಿಸಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿತು.

ಇದಕ್ಕೆ ಪ್ರತಿಯಾಗಿ ಉತ್ತರ ನೀಡಿದ ಸರ್ಕಾರ ವಿಮಾನ ನಿಲ್ದಾಣ ಪ್ರಾಧಿಕಾರ ಮತ್ತು ಸಿಬಿಐ ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಆಗೆಂದ ಮಾತ್ರಕ್ಕೆ ಪ್ರಕರಣದ ತನಿಖೆ ನಡೆಸದೇ ಬಿಡುವುದಿಲ್ಲ ಎಂದು ಸಮಾಜಾಯಿಷಿ ನೀಡಿತು.

ಈವಿಷಯ ಎರಡೂ ಸದನಗಳಲ್ಲಿ ಪ್ರಸ್ತಾಪಗೊಂಡು ತೀವ್ರ ಚರ್ಚೆ ನಡೆಯಿತು,

ವಿಧಾನಸಭೆಯಲ್ಲಿ ವಿಷಯವನ್ನು ಪ್ರಸ್ತಾಪಿಸಿದ ಬಿಜೆಪಿ ಶಾಸಕ ಸುನೀಲ್‌ಕುಮಾರ್, ಸ್ಮಗ್ಲಿಂಗ್ ಹಗರಣದ ಹಿಂದೆ ದೊಡ್ಡ ಮಾಫಿಯಾವೇ ಇದೆ. ಈಗ ಸಚಿವರು ಹಾಗೂ ಅಧಿಕಾರಿಗಳ ಹೆಸರುಗಳು ಕೂಡ ಕೇಳಿಬಂದಿವೆ. ಅವರುಗಳು ಯಾರು ಎಂಬುದನ್ನು ಬಹಿರಂಗಗೊಳಿಸಿ, ಅಂತಹವರ ವಿರುದ್ಧ ಕ್ರಮಕೈಗೊಳ್ಳಬೇಕು. ರಾಜ್ಯ ಸರ್ಕಾರವೇ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹಿಸಿದರು.

ಪತ್ರಿಕೆಗಳಲ್ಲಿ ಕೆಲ ಸಚಿವರುಗಳು ಭಾಗಿಯಾಗಿದ್ದಾರೆ ಎಂಬ ವರದಿ ಪ್ರಕಟಗೊಂಡಿದೆ. ಆ ಸಚಿವರು ಯಾರು ಎಂಬುದು ಜನರಿಗೆ ಗೊತ್ತಾಗಬೇಕು ಇಂತಹ ಮಾಫಿಯಾವನ್ನು ಮಟ್ಟಹಾಕಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಧನಿಗೂಡಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ನಟಿ ಚಿನ್ನ ಸಾಗಾಣೆ ಮಾಡುವ ಸಂಧರ್ಭದಲ್ಲಿ ನಟಿ ಪ್ರಭಾವಿ ಅಧಿಕಾರಿಗಳ ಮಗಳು ಎಂಬ ಕಾರಣಕ್ಕೆ ಪ್ರೋಟೋಕಾಲ್ ಉಲ್ಲಂಘಿಸಿದ್ದಲ್ಲದೇ,




ಆಕೆಗೆ ಭದ್ರತೆ ಕೂಡ ನೀಡಿದ್ದಾರೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕುಎಂದು ಆಗ್ರಹಿಸಿದರು.

ಇದಕ್ಕೆ ಉತ್ತರಿಸಿದ ಗೃಹ ಸಚಿವ ಜಿ.ಪರಮೇಶ್ವರ್ ಅವರು, ವಿಮಾನ ನಿಲ್ದಾಣ ಪ್ರಾಧಿಕಾರ ಮತ್ತು ಸಿಬಿಐ ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಈ ಬಗ್ಗೆ ಡಿಆರ್‌ಐ ಅಧಿಕಾರಿಗಳು ಹಾಗೂ ಸಿಬಿಐ ಅಧಿಕಾರಿಗಳು ಪ್ರಕರಣವನ್ನು ದಾಖಲಿಸಿಕೊಂಡಿದ್ದಾರೆ ಎಂಬ ಸುದ್ದಿಯನ್ನು ನಾವು ಕೂಡ ಪತ್ರಿಕೆಗಳಲ್ಲಿಯೇ ಓದು ತಿಳಿದುಕೊಂಡಿದ್ದೇವೆ. ಆಗೆಂದ ಮಾತ್ರಕ್ಕೆ ಅದನ್ನು ಸ್ಮಗ್ಲಿಂಗ್ ಅಲ್ಲ ಎಂದು ಒಪ್ಪಲು ನಮ್ಮ ಸರ್ಕಾರ ಸಿದ್ಧವಿಲ್ಲ. ಪ್ರಕರಣದ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದರು.

ಪ್ರೋಟೋಕಾಲ್ ವಿಷಯ ಬಂದಾಗ ಆಕೆ ಡಿಐಜಿ ಅಧಿಕಾರಿಯೊಬ್ಬರ ಮಗಳು ಎಂಬ ಕಾರಣಕ್ಕೆ ತಪಾಸಣೆಗೊಳಪಡಿಸದೇ ಕಳುಹಿಸಿದ್ದಾರೆ ಎಂಬ ಆರೋಪಗಳು ಕೇಳಿಬಂದಿದ್ದು, ಈ ಸಂಬಂಧ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.


ಇದೇ ವಿಷಯ ವೀಧಾನಪರಿಷತ್‌ನಲ್ಲೂ ಕೂಡ ಚರ್ಚೆಗೆ ಬಂದು ವಿಷಯ ಪ್ರಸ್ತಾಪಿಸಿದ ಛಲವಾದಿ ನಾರಾಯಣ ಸ್ವಾಮಿ, ಈ ಪ್ರಕರಣದಲ್ಲಿ ಪುಟ 2ಚಿ




ಬೆಂಗಳೂರಿನಲ್ಲಿ ಆಯೋಜಿಸಿದ್ದ 16ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಅಂಗವಾಗಿ ಕೊಡಮಾಡುವ ಜೀವಮಾನ ಸಾಧನೆ ಪ್ರಶಸ್ತಿಯನ್ನು ಭಾರತೀಯ ಚಿತ್ರರಂಗದ ಮೇರು ನಟಿ, ಬಹುಭಾಷಾ ಕಲಾವಿದೆ ಶ್ರೀಮತಿ ಶಬಾನಾ ಆಜ್ಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ನೀಡಿ ಗೌರವಿಸಿದರು. ಪ್ರಶಸ್ತಿ ಮತ್ತು 10 ಲಕ್ಷದ ಚೆಕ್ ನೀಡಲಾಯಿತು.

## 'ಮೈಕ್ರೋ ಫೈನಾನ್ಸ್' ವಿಧೇಯಕ ಅಂಗೀಕಾರ

**ಬೆಂಗಳೂರು:** ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಕಡಿವಾಣ ಹಾಕಲು ಸರ್ಕಾರ ಜಾರಿಗೆ




ತರಲು ಮುಂದಾಗಿರುವ 'ಮೈಕ್ರೋ ಫೈನಾನ್ಸ್' ವಿಧೇಯಕವನ್ನು ಸೋಮವಾರ ವಿಧಾನಸಭೆಯಲ್ಲಿ ಅಂಗೀಕಾರ ಮಾಡಲಾಯಿತು. ಇತ್ತೀಚಿಗೆ ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ಮೈಕ್ರೋ ಫೈನಾನ್ಸ್ ತಡೆಗೆ ಮಸೂದೆಯನ್ನು ಮಂಡನೆ ಮಾಡಿದ್ದರು. ಪುಟ 2ಚಿ

## ಸಂಸತ್ತಿನ ಬಜೆಟ್ ಅಧಿವೇಶನ ಪುನರಾರಂಭ: ಮಣಿಪುರ ಹಿಂಸೆ, ಅಮೆರಿಕ ಸುಂಕ ಪ್ರಸ್ತಾಪ

**ನವದೆಹಲಿ:** ಇಂದಿನಿಂದ ಕೇಂದ್ರ ಬಜೆಟ್ ಅಧಿವೇಶನ ಪುನರಾರಂಭವಾಗಲಿದೆ. ಎಪಿಕ್(ಇಕಋಅ) ಸಂಖ್ಯೆ, ಮತದಾನ ಪಟ್ಟಿ ಅಕ್ರಮ, ಮಣಿಪುರದಲ್ಲಿ ಮತ್ತೆ ಭುಗೆಲೆದ್ದಿರುವ ಹಿಂಸಾಚಾರ ಹಾಗೂ ಟ್ರಂಪ್ ಆಡಳಿತವನ್ನು ಭಾರತ ನಿಭಾಯಿಸುವ ಕುರಿತಂತೆ ಹಲವು ವಿಷಯಗಳನ್ನು ಚರ್ಚಿಸಿ ಆಡಳಿತ ಪಕ್ಷವನ್ನು ಕಟ್ಟಿ ಹಾಕಲು ವಿಪಕ್ಷಗಳು ಸಿದ್ಧತೆ ನಡೆಸಿವೆ.

ಅನುದಾನದ ಬೇಡಿಕೆ, ಮಣಿಪುರ ಬಜೆಟ್‌ಗೆ ಅನುಮೋದನೆ, ಬಜೆಟ್ ಪ್ರಕ್ರಿಯೆಯನ್ನು ಪೂರ್ಣ ಗೊಳಿಸುವುದು, ವಕ್ಫ್ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಘೋಷಣೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂಸತ್ತಿನ ಅನುಮೋದನೆ ಕೋರಿ ನಿರ್ಣಯ ಮಂಡಿಸುವ ನಿರೀಕ್ಷೆ ಇದೆ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಮಣಿಪುರದ



ಬಜೆಟ್ ಮಂಡಿಸುವ ಸಾಧ್ಯತೆ ಇದೆ.

ಇನ್ನು ವಿಪಕ್ಷಗಳು ನಕಲಿ ಮತದಾರರ ಗುರುತಿನ ಚೀಟಿ (ಎಪಿಕ್) ಸಂಖ್ಯೆಗಳ ವಿಚಾರ ಕುರಿತು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲು ಸಜ್ಜಾಗಿವೆ. ತೃಣಮೂಲ ಕಾಂಗ್ರೆಸ್ ಈ ವಿಚಾರವನ್ನು ಪ್ರಸ್ತಾಪಿಸಲು ಸಜ್ಜಾಗಿದೆ. ಪುಟ 2ಚಿ

## ಮದ್ಯ ಹಗರಣ: ಬಘೇಲ್ ಮನೆ ಸೇರಿ ಹಲವೆಡೆ ಇಡಿ ದಾಳಿ

ರಾಯ್‌ಪುರ: ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಮತ್ತು ಅವರ ಪುತ್ರ ಚೈತನ್ಯ ಬಘೇಲ್ ಅವರಿಗೆ ಸಂಬಂಧಿಸಿದ ಹಲವಾರು ಸ್ಥಳಗಳ ಮೇಲೆ ಜಾರಿ ನಿರ್ದೇಶನಾಲಯ ಸೋಮವಾರ ದಾಳಿ ನಡೆಸಿದೆ. ಮದ್ಯ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಈ ದಾಳಿ ನಡೆದಿದೆ. ಭಿಲಾಯಿಯಲ್ಲಿರುವ ಪುಟ 2ಚಿ

## ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ: ಚರ್ಚೆ

**ಬೆಂಗಳೂರು:** ಬೆಂಗಳೂರಿನಲ್ಲಿ ಸೋಮವಾರ ಸಂಜೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ನಗರದ ಖಾಸಗಿ ಹೋಟೆಲ್ ನಲ್ಲಿ ಸಂಜೆ 6 ಗಂಟೆಗೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಜಾತಿ ಗಣತಿ, ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆ ವಿಚಾರ ಕುರಿತು ಚರ್ಚೆಯಾಗುವ ಸಾಧ್ಯತೆ ಇದೆ. ಬಜೆಟ್ ಪುಟ 2ಚಿ

## ಅರ್ಜೆಂಟೀನಾದಲ್ಲಿ ಪ್ರವಾಹ: 16 ಜನ ಸಾವು

ಬ್ಯೂನಸ್ ಐರಿಸ್: ಅರ್ಜೆಂಟೀನಾದಲ್ಲಿ ಕರಾವಳಿಯಲ್ಲಿ ಭಾರೀ ಮಳೆಯಿಂದ ಉಂಟಾಗಿರುವ ಭೀಕರ ಪ್ರವಾಹದಲ್ಲಿ ಸುಮಾರು 16 ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವಾರು ಮಂದಿ ಕಣ್ಮರೆಯಾಗಿದ್ದಾರೆ. ಇತ್ತೀಚಿನ ದಿನಗಳಲ್ಲಿ ಅರ್ಜೆಂಟೀನಾದ ಪೂರ್ವ ಕರಾವಳಿಯ ರಭಸ ಮಳೆಯಿಂದ ನಗರಗಳು ಪುಟ 2ಚಿ

## ಕಾಂಗ್ರೆಸ್‌ನಲ್ಲಿ ಒಗ್ಗಟ್ಟಿಲ್ಲ ಎಂದು ಖರ್ಗೆಯವರೇ ಒಪ್ಪಿಕೊಂಡಿದ್ದಾರೆ

**ಹುಬ್ಬಳ್ಳಿ:** ಡಿಕೆ ಶಿವಕುಮಾರ್-ಸಿದ್ದರಾಮಯ್ಯಗೆ ಒಗ್ಗಟ್ಟಾಗಿ ಹೋಗಬೇಕು ಅನ್ನೋ ಖರ್ಗೆ ಹೇಳಿಕೆಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಟಾಂಗ್ ಕೊಟ್ಟಿದ್ದಾರೆ.

ರಾಷ್ಟ್ರೀಯ ಅಧ್ಯಕ್ಷರು ಆ ಮಾತು ಹೇಳಿದ್ದಾರೆ ಅಂದ್ರೆ ಇವಾಗ ಒಗ್ಗಟ್ಟು ಇಲ್ಲ ಅಂತ ಅರ್ಥ, ನಾನು ಖರ್ಗೆ ಅವರ ವಿಡಿಯೋ ನೋಡಿದ್ದೇನೆ, ಅವರು ಒಗ್ಗಟ್ಟಿಲ್ಲ ರಾಷ್ಟ್ರೀಯ ನಾಯಕರು ಒಪ್ಪಿಕೊಂಡಿದ್ದಾರೆ ಎಂದು ಪ್ರಹ್ಲಾದ್ ಜೋಶಿ ಅವರು ಕುಟುಕಿದ್ದಾರೆ,

ನಮ್ಮ ಪೂಜ್ಯ ತಂದೆ ಇನ್ನುಮೂರು ಬಜೆಟ್ ಮಂಡನೆ ಮಾಡ್ತಾರೆ ಅಂತಾ ಸಿಎಂ ಪುತ್ರ ಹೇಳ್ತಾರೆ. ಮತ್ತೊಂದು ಕಡೆ ಡಿಕೆ ಶಿವಕುಮಾರ್ ಬಜೆಟ್ ಮಂಡನೆ ಮಾಡ್ತಾರೆ ಅಂತಾ ಕೆಲವರು ಹೇಳ್ತಾರೆ. ಖರ್ಗೆ ಹಿಂದೆಯೂ ಇದರ ಬಗ್ಗೆ ಮಾತಾಡಿದ್ರು. ಒಟ್ಟಾರೆ ಖರ್ಗೆ ಅವರ ಮಾತಿನ ಅರ್ಥ ಹಿಂದೆಯೂ ಒಗ್ಗಟ್ಟಾಗಿ ಹೋಗಿಲ್ಲ,

ಇವಾಗ ಒಗ್ಗಟ್ಟಾಗಿ ಹೋಗಲ್ಲ, ಮುಂದೆನೂ ಹೋಗಲ್ಲ ಎಂದು ಜೋಶಿ ವ್ಯಂಗ್ಯ ಮಾಡಿದರು.



ಕಾಂಗ್ರೆಸ್ ಸರ್ಕಾರ ತಮ್ಮ ಪೆಲ್ಯೂವರ್ ಮುಚ್ಚಿ ಕೊಳ್ಳಲು ತಡಕಾಡುತ್ತಿದ್ದಾರೆ. ಸ್ಟಾಲಿನ್ ಸರ್ಕಾರ ಕಡು ಭ್ರಷ್ಟ ಸರ್ಕಾರ. ಅವರಿಗೆ ಉದ್ಯೋಗ ಇಲ್ಲ, ಚರ್ಚೆ ಆಗಬೇಕಾಗಿರೋದು ಒನ್ ನೇಷನ್ ಒನ್ ಚುನಾವಣೆ ಅಲ್ಲ. ಗ್ಯಾರಂಟಿ ಬಗ್ಗೆ ಚರ್ಚೆ ಆಗಬೇಕು ಎಂದು ಹೇಳಿದರು.

## ಕುಂಭಮೇಳ:ಪ್ಯಾಕೇಜ್ ಹೆಸರಲ್ಲಿ ವಂಚನೆ: ಬಂಧನ

ಬೆಂಗಳೂರು: ಮಹಾ ಕುಂಭಮೇಳ ಪ್ರವಾಸದ ಪ್ಯಾಕೇಜ್ ಹೆಸರಿನಲ್ಲಿ ವಂಚಿಸಿದ್ದ ಓರ್ವ ಆರೋಪಿಯನ್ನು ಗೋವಿಂದರಾಜ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ರಾಘವೇಂದ್ರ ರಾವ್ ಬಂಧಿತ ಆರೋಪಿ.

ಟೂರ್ಸ್ ಆ್ಯಂಡ್ ಟ್ರಾವೆಲ್ಸ್ ಕಂಪನಿಯ ಪ್ರತಿನಿಧಿಯ ಹೆಸರಿನಲ್ಲಿ ಫೇಸ್‌ಬುಕ್ ಹಾಗೂ ವಾಟ್ಸ್‌ಆ್ಯಪ್ ಗ್ರೂಪ್‌ಗಳಲ್ಲಿ ನಕಲಿ ಜಾಹೀರಾತು ನೀಡಿದ್ದ ಆರೋಪಿ, ಸಾರ್ವಜನಿಕರಿಂದ ಹಣ ಪಡೆದು ಟಿಕೆಟ್ ಬುಕ್ ಮಾಡದೇ ವಂಚಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.


ಕುಂಭಮೇಳಕ್ಕೆ ತೆರಳಲು ಪ್ರವಾಸದ ಪ್ಯಾಕೇಜ್ ಹೆಸರಿನಲ್ಲಿ ಸಾರ್ವಜನಿಕರಿಂದ ಹಣ ಪಡೆಯುತ್ತಿದ್ದ ಆರೋಪಿ, ಕೆಲವರಿಗೆ ಟಿಕೆಟ್ ಬುಕ್ ಮಾಡಿ ನಂತರ ಕ್ಯಾನ್ಸಲ್ ಮಾಡುತ್ತಿದ್ದ. ಇನ್ನೂ ಕೆಲವರಿಗೆ ಪ್ರಯಾಗ್ ರಾಜ್ ತಲುಪಿದ ನಂತರ ರಿಟರ್ನ್ ಟಿಕೆಟ್ ಬುಕ್ ಮಾಡುತ್ತಿರಲಿಲ್ಲ. ಬಳಿಕ ಹಣ ನೀಡಿದ್ದವರ ಸಂಪರ್ಕಕ್ಕೆ ಸಿಗುತ್ತಿರಲಿಲ್ಲ. ಆರೋಪಿಯಿಂದ ವಂಚನೆಗೊಳಗಾದ ಅನೇಕರು ಗೋವಿಂದರಾಜ ನಗರ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಗೋವಿಂದರಾಜ ನಗರ ಠಾಣೆ ಪೊಲೀಸರು, ರಾಘವೇಂದ್ರ ರಾವ್ ಎಂಬಾತನನ್ನು ಪತ್ತೆ ಹಚ್ಚಿ ಬಂಧಿಸಿದ್ದಾರೆ.

ಅನೇಕ ಜನರಿಗೆ ವಂಚಿಸಿದ ಪರಿಣಾಮ ಬಂದ ಹಣದಲ್ಲಿ ಆರೋಪಿ ಬೆಟ್ಟಿಂಗ್ ಆಡಿದ್ದ ಎಂಬುದು ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ. ಸದ್ಯ ಬಂಧಿತನ ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ರನ್ಯಗೆ ಕೆಐಎಡಿಬಿ ಕೈಗಾರಿಕಾ ಭೂಮಿ ಮಂಜೂರು

**ಬೆಂಗಳೂರು:** ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕನ್ನಡ ಚಲನಚಿತ್ರ ನಟಿ, ಚಿನ್ನ ಕಳ್ಳಸಾಗಣೆ ಆರೋಪಿ ರನ್ಯ ರಾವ್ ಅವರಿಗೆ ಕೈಗಾರಿಕಾ ಭೂಮಿಯನ್ನು ಮಂಜೂರು ಮಾಡಲಾಗಿದೆ ಎಂಬ ವರದಿಗಳ ಬೆನ್ನಲ್ಲೇ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ಸ್ಪಷ್ಟನೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ



ಸರ್ಕಾರ ಅಧಿಕಾರಕ್ಕೆ ಬರುವ ಮೊದಲು ಜಾಗ ಮಂಜೂರು ಮಾಡಿರುವ ವಿಷಯವನ್ನು ಕೆಐಎಡಿಬಿ ಸ್ಪಷ್ಟಪಡಿಸಿದೆ. 2023ರ ಜನವರಿ 2ರಂದು ತುಮಕೂರು ಜಿಲ್ಲೆಯ ಶಿರಾ ಕೈಗಾರಿಕಾ ಪ್ರದೇಶದಲ್ಲಿ ಕ್ಷೀರೋಡಾ ಇಂಡಿಯಾ ಪ್ರೈವೇಟ್ ಲಿಮಿಟೆಡ್ಗೆ 12 ಎಕರೆ ಜಮೀನು ಮಂಜೂರು ಮಾಡಲಾಗಿದೆ ಎಂದು ಕೆಐಎಡಿಬಿ ಸಿಇಒ ಮಹೇಶ್ ತಿಳಿಸಿದ್ದಾರೆ. ಪುಟ 2ಚಿ

## ಅನರ್ಹ ಬಿಪಿಎಲ್ ಫಲಾನುಭವಿಗಳ ಪತ್ತೆಗೆ ಗ್ರಾಮ ಮಟ್ಟದಲ್ಲಿ ಸಮಿತಿ ರಚನೆ

**ಬೆಂಗಳೂರು:** ಅನರ್ಹ ಬಿಪಿಎಲ್ ಫಲಾನುಭವಿಗಳನ್ನು ಪತ್ತೆಹಚ್ಚಿ ತೆಗದು ಹಾಕಿ ಅರ್ಹರಿಗೆ ಸರ್ಕಾರಿ ಸೌಲಭ್ಯ ದೊರಕಿಸುವ ಸದುದ್ದೇಶದಿಂದ ಗ್ರಾಮ ಮಟ್ಟದಲ್ಲಿ ಸಮಿತಿಯನ್ನು ರಚನೆ ಮಾಡುವುದಾಗಿ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಪ್ರಶ್ನೆಗೆ ಉತ್ತರಿಸಿದ ಅವರು, ಅಧಿವೇಶನ ಮುಗಿದ ನಂತರ ಮೊದಲು ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಲಾಗುವುದು. ನಂತರ ಗ್ರಾಮ ಮಟ್ಟದಲ್ಲಿ ಕಂದಾಯ ನಿರೀಕ್ಷಕರು, ಗ್ರಾಮ ಲೆಕ್ಕಿಗರು, ಪಿಡಿಒ ಸೇರಿದಂತೆ ಮತ್ತಿತರರ ನೇತೃತ್ವದಲ್ಲಿ ಸಮಿತಿಯನ್ನು ರಚನೆ ಮಾಡಲಾಗುವುದು ಎಂದು ಹೇಳಿದರು.

ನಿಜವಾದ ಫಲಾನುಭವಿಗಳಿಗೆ ಸರ್ಕಾರದ ಸವಲತ್ತುಗಳು ಸಿಗಬೇಕೆಂಬುದು ಸರ್ಕಾರದ ಉದ್ದೇಶವಾಗಿದೆ. ಸದನದ ಸದಸ್ಯರೆಲ್ಲರೂ ಸಹಕಾರ ಕೊಟ್ಟರೆ ಬಿಪಿಎಲ್ ಪಡೆದುಕೊಂಡ ಅನರ್ಹ ಫಲಾನುಭವಿಗಳ ಪರಿಷ್ಕರಣೆ ಕಾರ್ಯ ಪ್ರಾರಂಭವಾಗಲಿದೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದರು.

ಈ ಹಿಂದೆ ಪರಿಷ್ಕರಣೆ ಮಾಡಲು ಹೊರಟಾಗ ದೊಡ್ಡ ವಿವಾದವೇ ಉಂಟಾಗಿತ್ತು. 99 ಎಪಿಎಲ್ ಕಾರ್ಡ್ ಗಳು ಬಿಪಿಎಲ್ ಸೇರ್ಪಡೆಯಾದರೆ ಯಾರೂ ಕೇಳುವುದಿಲ್ಲ. ಆದರೆ ಒಂದೇ ಒಂದು



ಬಪಿಎಲ್ ಕಾರ್ಡ್ ಬಿಟ್ಟು ಹೋದರೆ ದೊಡ್ಡ ವಿವಾದವನ್ನೇ ಸೃಷ್ಟಿ ಮಾಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಿಜವಾದ ಫಲಾನುಭವಿಗಳು ಸರ್ಕಾರಿ ಸವಲತ್ತುಗಳಿಂದ ವಂಚಿತರಾಗಬಾರದೆಂಬುದು ನಮ್ಮ ಉದ್ದೇಶ. ನಾವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಮಾಡಬೇಕು. ಹೀಗಾಗಿ ಪರಿಷ್ಕರಣೆ ಮಾಡಲು ಮುಂದಾಗಿದ್ದೇವೆ ಎಂದು ಸಚಿವರು ಸಮರ್ಥಿಸಿಕೊಂಡರು.

ರಾಜ್ಯದಲ್ಲಿ ಒಟ್ಟು 2,95,000 ಬಿಪಿಎಲ್ ಪಡಿತರ ಫಲಾನುಭವಿಗಳಿದ್ದರು. ಇದರಲ್ಲಿ ಪ್ರಸ್ತುತ 2,40,000 ಫಲಾನುಭವಿಗಳು ಸರ್ಕಾರದ ಸವಲತ್ತು ಪಡೆಯುತ್ತಿದ್ದಾರೆ. ಇದರಲ್ಲಿ ಕೆಲವು ಅನರ್ಹರು ಸೇರ್ಪಡೆಯಾಗಿದ್ದಾರೆ. ಪರಿಷ್ಕರಣೆ ನಂತರ ಎಪಿಎಲ್‌ಗೆ ಸೇರ್ಪಡೆಯಾಗಲಿದ್ದಾರೆ ಎಂದು ಹೇಳಿದರು.

ನಮಗೆ ಕೇಂದ್ರ ಸರ್ಕಾರು ಒಂದು ಕೋಟಿ ಹತ್ತು ಲಕ್ಷ ಫಲಾನುಭವಿಗಳನ್ನು ಮಾತ್ರ ಪಟ್ಟಿಗೆ ಸೇರ್ಪಡೆ ಮಾಡಲು ಅವಕಾಶ ನೀಡಿದ್ದಾರೆ. ರಾಜ್ಯದಲ್ಲಿ ಒಟ್ಟು ನಾಲ್ಕು ಕೋಟಿ 50 ಲಕ್ಷ ಫಲಾನುಭವಿಗಳಿಗೆ ಸವಲತ್ತು ನೀಡಲಾಗುತ್ತಿದೆ. ಬಿಪಿಎಲ್ ಪಟ್ಟಿಯಿಂದ 25 ಲಕ್ಷ ಪಡಿತರಚೀಟಿಗಳನ್ನು ತೆಗೆದು ಹಾಕಬೇಕಿದೆ. ಪರಿಷ್ಕರಣೆ ಮಾಡುವ ಸಂದರ್ಭದಲ್ಲಿ ಕೆಲವು ಗೊಂದಲಗಳು ಉಂಟಾಗುವುದು ಸಹಜ. ಅನರ್ಹರನ್ನು ತೆಗೆದು ಹಾಕಿ ಅರ್ಹರಿಗೆ ಸಿಗಬೇಕೆಂಬುದು ಪುಟ 2ಚಿ

# ಆರೋಗ್ಯ ನಿರ್ವಹಣಾ ಸಂಶೋಧನಾ ಸಂಸ್ಥೆ ಐಐಹೆಚ್ ಎಂಆರ್‌ನ 20ನೇ ಸಂಸ್ಥಾಪನಾ ದಿನ: ಹಳೆಯ ವಿದ್ಯಾರ್ಥಿಗಳ ಸಮಾವೇಶ

ಬೆಂಗಳೂರು: ಬೆಂಗಳೂರಿನ ಆರೋಗ್ಯ ನಿರ್ವಹಣಾ ಸಂಶೋಧನಾ ಸಂಸ್ಥೆಯ 20ನೇ ಸಂಸ್ಥಾಪನಾ ದಿನ ಮತ್ತು ಹಳೆಯ ವಿದ್ಯಾರ್ಥಿಗಳ ಸಮಾವೇಶ 2025 ಸಂಸ್ಥೆಯ ಕ್ಯಾಂಪಸ್ ನಲ್ಲಿ ಯಶಸ್ವಿಯಾಗಿ ನಡೆಯಿತು.




ಭಾರತೀಯ ಆರೋಗ್ಯ ನಿರ್ವಹಣಾ ಸಂಸ್ಥೆಯ ಹಳೆಯ ವಿದ್ಯಾರ್ಥಿ, ಎನ್ ಜಿ ಆರ್ ಇಂಟರ್ ನ್ಯಾಶನಲ್ ನ ಡಾ. ರಾಮ್ ಮಿಲನ್ ಶುಕ್ಲಾ, ಸೊಸೈಟಿಯ ಟ್ರಸ್ಟಿ ಕಾರ್ಯದರ್ಶಿ ಡಾ.ಎಸ್.ಡಿ.ಗುಪ್ತಾ, ಸಂಸ್ಥೆಯ ನಿರ್ದೇಶಕಿ ಡಾ.ಉಷಾ ಮಂಜುನಾಥ್, ಡಾ. ಜೇಸನ್ ಡಿ. ಉಗರ್ಗೋಲ್, ಬೆಂಗಳೂರು ಅಸೋಸಿಯೇಟ್ ಡೀನ್ ಅಕಾಡೆಮಿಕ್ಸ್, ಮತ್ತು ಐಐಹೆಚ್ ಎಂ ಆರ್ ನ ಬೆಂಗಳೂರು ಹಳೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಿರ್ದೇಶಕಿ ಉಷಾ ಮಂಜುನಾಥ್ ಮಾತನಾಡಿ,ಭಾರತದ ದಕ್ಷಿಣ ಭಾಗದಲ್ಲಿ ಆರೋಗ್ಯ ನಿರ್ವಹಣೆ, ಆಸ್ಪತ್ರೆ ನಿರ್ವಹಣೆ, ಸಂಶೋಧನೆ ಮತ್ತು ತರಬೇತಿಯಲ್ಲಿ ಸಂಸ್ಥೆ ತನ್ನದೇ ಕೊಡುಗೆ ನೀಡಿದೆ. ಬೆಂಗಳೂರು ಸಂಸ್ಥೆ ಹಲವಾರು ಪ್ರಶಂಸೆಗಳನ್ನು ಪಡೆದಿದ್ದು, ನ್ಯಾಕ್ 'ಒ' ಶ್ರೇಣಿ ಮಾನ್ಯತೆ ಹೊಂದಿದ್ದು, 2025ರ ಔಟ್ಲುಕ್ ಐಕೇರ್ ರ್‍ಯಾಂಕಿಂಗ್ ನಲ್ಲಿ ಬೆಂಗಳೂರಿನಲ್ಲಿ 10ನೇ ಸ್ಥಾನ ಪಡೆದ ಬಿ–ಸ್ಕೂಲ್ ಎಂಬ ಮಾನ್ಯತೆಯನ್ನು ಈ ಸಂಸ್ಥೆ ಪಡೆದುಕೊಂಡಿದೆ. ದಿ ವೀಕ್ ಮ್ಯಾಗಜೀನ್ 2025ರಲ್ಲಿ ಬೆಂಗಳೂರಿನಲ್ಲಿ 12ನೇ ಸ್ಥಾನ ಪಡೆದ ಅತ್ಯುತ್ತಮ ಬಿ–ಸ್ಕೂಲ್ ಎಂಬ ಶ್ರೇಣಿಯನ್ನೂ ಪಡೆದುಕೊಂಡಿದೆ. ಈ ಸಾಧನೆಗಳು ಸಂಸ್ಥೆಯ ಶೈಕ್ಷಣಿಕ ಶ್ರೇಷ್ಠತೆ, ಹೊಸ ತಂತ್ರಜ್ಞಾನಗಳ ಅಳವಡಿಕೆ, ಮತ್ತು ಆಕರ್ಷಕ ನಿರ್ವಹಣಾ ಅಧ್ಯಯನಗಳಿಗೆ ಸಾಕ್ಷಿಯಾಗಿವೆ ಎಂದರು.

ಸಂಸ್ಥೆಯ ಟ್ರಸ್ಟಿ ಕಾರ್ಯದರ್ಶಿ ಎಸ್.ಡಿ.ಗುಪ್ತಾ ಮಾತನಾಡಿ, ಇಡೀ ದೇಶದಲ್ಲಿ ಬೆಂಗಳೂರು ಆರೋಗ್ಯ ನಿರ್ವಹಣಾ ಅಧ್ಯಯನ ಸಂಸ್ಥೆ ಉತ್ತಮ ಹೆಸರು ಪಡೆದಿದೆ, ಇಲ್ಲಿ ಅಧ್ಯಯನ ನಡೆಸಿದ ವಿದ್ಯಾರ್ಥಿಗಳು ಬೇರೆ,ಬೇರೆ ದೇಶಗಳ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ,ದೇಶದ ಆರೋಗ್ಯ ನಿರ್ವಹಣೆಯಲ್ಲಿ ತನ್ನದೇ ಪಾತ್ರ ವಹಿಸಿದೆ ಎಂದರು.

# ರಾಣಿ ಅಬ್ಬಕ್ಕ ಉತ್ಸವಕ್ಕೆ ಸರ್ಕಾರದಿಂದ ನೆರವಿಗೆ ಪ್ರಯತ್ನ; ಕೆ.ಗೋಪಾಲಯ್ಯ



**ಬೆಂಗಳೂರು:** ರಾಣಿ ಅಬ್ಬಕ್ಕ ಪ್ರತಿಷ್ಠಾನ, ಜಾರ್ಜ್ ಫರ್ನಾಂಡೀಸ್ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ರಾಣಿ ಅಬ್ಬಕ್ಕ ಉತ್ಸವದ ಸಾಂಸ್ಕೃತಿಕ ವೈಭವ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಮಹಾಲಕ್ಷ್ಮಿ ಲೇಔಟ್ ವಿಧಾನ ಸಭಾ ಕ್ಷೇತ್ರದ ಶಾಸಕ ಕೆ.ಗೋಪಾಲಯ್ಯ ಉದ್ಘಾಟಿಸಿ ಸಮಾಜದ ವಿವಿಧ ಗಣ್ಯರಿಗೆ ರಾಣಿ ಅಬ್ಬಕ್ಕ ಪ್ರಶಸ್ತಿ ಪ್ರಧಾನ ಮಾಡಿದರು.

ಶಾಸಕ ಗೋಪಾಲಯ್ಯ ಮಾತನಾಡಿ, ಉಳ್ಳಾಲ ರಾಣಿ ಅಬ್ಬಕ್ಕ ಅವರ ಹೆಸರಿನಲ್ಲಿ ಈ ಕ್ರೀಡಾಂಗಣವನ್ನು ನಿರ್ಮಾಣ ಮಾಡಬೇಕಾದರೆ ಸಾಕಷ್ಟು ಕಷ್ಟ ಪಟ್ಟಿದ್ದೇವೆ, ಪ್ರತಿ ವರ್ಷ ನಡೆಯುವ ರಾಣಿ ಅಬ್ಬಕ್ಕ ಉತ್ಸವಕ್ಕೆ ರಾಜ್ಯ ಸರ್ಕಾರದಿಂದ ಅಗತ್ಯ ನೆರವು, ಅನುದಾನ ನೀಡುವಂತೆ ಸದ್ಯದಲ್ಲೇ ವಿಧಾನ ಸಭಾಧ್ಯಕ್ಷರನ್ನು ಬೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ರಾಣಿ ಅಬ್ಬಕ್ಕ ವಂಶಸ್ಥರಾದ ಅನಿತಾ ಸುರೇಂದ್ರ ಕುಮಾರ್, ಹೇಮಲತಾ ಗೋಪಾಲಯ್ಯ, ಪುತ್ತೂರು ಶಾಸಕ ಅಶೋಕ್ ರೈ, ಕಾರ್ಮಿಕ ಮುಖಂಡ ಫೆಲಿಕ್ಸ್ ಡಿಸೋಜಾ, ಮಾಜಿ ಉಪ ಮೇಯರ್ ಎಸ್.ಹರೀಶ್, ಅಖಿಲ ಭಾರತ ತುಳು ಒಕ್ಕೂಟ ಮಾಜಿ ಅಧ್ಯಕ್ಷ ಧರ್ಮಪಾಲ್ ದೇವಾಂಗ,ರಾಣಿ ಚನ್ನಮ್ಮ ಪ್ರತಿಷ್ಠಾನ ಅಧ್ಯಕ್ಷ ಕೆ.ವಿ.ರಾಜೇಂದ್ರ ಕುಮಾರ್, ವೈದ್ಯರಾದ ಡಾ.ಬಲ್ಲಾಳ್ ಮತ್ತಿತರರು ಭಾಗವಹಿಸಿದ್ದರು.

# MES ಸಂಘಟನೆ ನಿಷೇಧಕ್ಕೆ ವಾಟಾಳ್ ನಾಗರಾಜ್ ಆಗ್ರಹ



**ಬೆಳಗಾವಿ:** ಕಂಡಕ್ಟರ್ ಮಹದೇವಪ್ಪ ಮೇಲೆ ಹಲ್ಲೆ ಖಂಡಿಸಿ ಎಂಇಎಸ್ ಸಂಘಟನೆಯುನ್ನು ನಿಷೇಧ ಮಾಡುವಂತೆ ಆಗ್ರಹಿಸಿ ಬೆಳಗಾವಿಯಲ್ಲಿ ಕನ್ನಡ ಪರ ಸಂಘಟನೆಗಳು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿವೆ.

ಬೆಳಗಾವಿಯ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಪ್ರತಿಭಟನೆ ನಡೆಯುತ್ತಿದ್ದು ಫಿಲ್ಮಂ ಛೇಂಬರ್ ಮಾಜಿ ಅಧ್ಯಕ್ಷ ಸಾ.ರಾ ಗೋವಿಂದು ಕರವೇ ರಾಜ್ಯಾಧ್ಯಕ್ಷ ಶಿವರಾಮೇಗೌಡ ಭಾಗಿಯಾಗಿದ್ದಾರೆ.

ಕಂಡಕ್ಟರ್ ಮಹದೇವಮಪ್ಪ ಮೇಲೆ ಹಲ್ಲೆ ಖಂಡಿಸಿರುವ ಪ್ರತಿಭಟನಾಕಾರರು ಎಂಇಎಸ್ ಸಂಘಟನೆ ನಿಷೇಧಿಸಬೇಕು. ಎಂಇಎಸ್ ಪುಂಡರನ್ನ ರಾಜ್ಯದಿಂದ ಗಡಿಪಾರು ಮಾಡಿರಿ ಎಂದು ಒತ್ತಾಯಿಸಿದ್ದಾರೆ. ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಲಾಗಿದ್ದು, ಮೂವರು ಎಸಿಪಿ ಸೇರಿ 100ಕ್ಕೂ ಹೆಚ್ಚು ಪೊಲೀಸರನ್ನು ನಿಯೋಜನೆ ಮಾಡಲಾಗಿದೆ.


# ರನ್ಯಾರಾವ್ ಪ್ರಕರಣದಲ್ಲಿ ಸಚಿವರ ಕೈವಾಡ ಆರೋಪ: ಬಿಜೆಪಿಗೆ ಚಲುವರಾಯಸ್ವಾಮಿ ತಿರುಗೇಟು

ಬೆಂಗಳೂರು: ನಟಿ ರನ್ಯಾರಾವ್ ಗೋಲ್ಡ್ ಸ್ಮಗ್ಲಿಂಗ್ ಕೇಸ್ ವಿಚಾರಕ್ಕೆ ಸಂಬಂಧಿಸಿದಂತೆ ಸಚಿವರಿಬ್ಬರ ಕೈವಾಡ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿಗೆ ಕೃಷಿ ಸಚಿವ ಚಲುವರಾಯಸ್ವಾಮಿ ತಿರುಗೇಟು ನೀಡಿದ್ದಾರೆ.

ಈ ಕುರಿತು ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಬಿಜೆಪಿಗರು ಜನರಿಗೆ ಉಪಯೋಗ ಆಗುವ ಕೆಲಸ ಮಾಡಿದ್ದಾರಾ.. ಅವರು ಒಂದೇ ಒಂದು ಸಲಹೆ ಕೊಟ್ಟಿಲ್ಲ. ಬರೀ ಟೀಕೆ ಟಿಪ್ಪಣಿ ಮಾಡುತ್ತಾರೆ ವಿರೋಧ ಪಕ್ಷದವರಿಗೆ ಸ್ಪಷ್ಟತೆ ಇಲ್ಲ. ಈ ಹಿಂದೆ ಯಾವುದ್ಯಾವುದನ್ನ ಹೇಳಿದ್ದರೂ ಅವೆಲ್ಲವೂ ಹುಸಿಯಾಗಿದೆ. ರನ್ಯಾರಾವ್ ಪ್ರಕರಣದಲ್ಲಿ ಸಚಿವರ ಕೈವಾಡ ಆರೋಪ ಸಂಬಂಧ ಸಿಬಿಐ ತನಿಖೆ ನಡೆಸಲಿ. ಅಮೇಲೆ ಸತ್ಯಾ ಗೊತ್ತಾಗಲಿದೆ ಎಂದರು.

ಗೋಲ್ಡ್ ಸ್ಮಗ್ಲಿಂಗ್ ಕೇಸ್ ನಲ್ಲಿ ಬಂಧನವಾದ ಬೆನ್ನಲ್ಲೆ ರನ್ಯಾರಾವ್ ಸಚಿವರಿಗೆ ಕರೆ ಮಾಡಿದ್ದಾರೆ ಅನ್ನೋದು ಗೊತ್ತಾಗಿದೆ. ಮೂವರು ಸಚಿವರ ಸಂಪರ್ಕದ ಬಗ್ಗೆಯೂ ಮಾತನಾಡುತ್ತಿದ್ದಾರೆ. ಸಿಬಿಐ ತನಿಖೆ ನಡೆಯುತ್ತಿದೆ. ಸತ್ಯಾಂಶ ಹೊರ ಬರಲಿ ಎಂದು ಬಿಜೆಪಿ ಶಾಸಕ ಭರತ್ ಶೆಟ್ಟಿ ಆರೋಪಿಸಿದ್ದರು.

# ಅಪಘಾತ: 8 ಮಂದಿ ಸಾವು, 13 ಮಂದಿಗೆ ಗಾಯ




ಮಧ್ಯ ಪ್ರದೇಶ: ಟ್ರಕ್ ಹಾಗೂ ಸ್ಪೋರ್ಟ್ಸ್ ಯುಟಿಲಿಟಿ ವೆಹಿಕಲ್ (ಎಸ್‌ಯುವಿ) ವಾಹನದ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಎಂಟು ಜನ ಮೃತಪಟ್ಟು, ಹದಿಮೂರು ಮಂದಿ ಗಾಯಗೊಂಡಿರುವ ಘಟನೆ ಮಧ್ಯ ಪ್ರದೇಶದ ಸಿಧಿ ಜಿಲ್ಲೆಯಲ್ಲಿ ಸೋಮವಾರ (ಮಾ.10) ಬೆಳಿಗ್ಗೆ ನಡೆದಿದೆ. ಸಿಧಿ–ಬಹ್ರಿ ರಸ್ತೆಯ ಉಪ್ನಿ ಪೆಟ್ರೋಲ್ ಪಂಪ್ ಬಳಿ ನಸುಕಿನ ಜಾವ ಈ ಘಟನೆ ನಡೆದಿದ್ದು, ಮೃತಪಟ್ಟವರ ವಿವರ ಇನ್ನಷ್ಟೇ ಲಭ್ಯವಾಗಬೇಕಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕುಟುಂಬ ಸದಸ್ಯರನ್ನು ಹೊತ್ತ ಎಸ್‌ಯುವಿ ವಾಹನ ಮೈಹರ್ ಕಡೆಗೆ ಹೋಗುತ್ತಿದ್ದಾಗ ಸಿಧಿಯಿಂದ ಬಹ್ರಿಗೆ ಬರುತ್ತಿದ್ದ ಟ್ರಕ್ ಮುಖಾಮುಖಿಯಾಗಿ ಡಿಕ್ಕಿಯಾಗಿವೆ. ದುರ್ಘಟನೆಯಲ್ಲಿ ಎಂಟು ಜನ ಮೃತಪಟ್ಟು, ಹದಿಮೂರು ಮಂದಿ ಗಾಯಗೊಂಡಿದ್ದಾರೆ. ಈ ಪೈಕಿ 7 ಜನರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ರೇವಾ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಮೃತರನ್ನು ದೇವೋರಿ ಮತ್ತು ಪಂಡಾರಿಯಾ ಬಹ್ರಿ ಗ್ರಾಮದ ನಿವಾಸಿಗಳೆಂದು ಗುರುತಿಸಲಾಗಿದ್ದು, ಇವರಲ್ಲಿ ಐದು ಮಹಿಳೆಯರು ಮತ್ತು ಮೂವರು ಪುರುಷರು ಸೇರಿದ್ದಾರೆ ಎಂದು ಪೊಲೀಸ್ ಉಪ ವರಿಷ್ಠಾಧಿಕಾರಿ ಗಾಯತ್ರಿ ತಿವಾರಿ ಮಾಹಿತಿ ನೀಡಿದ್ದಾರೆ.

ಸಿಧಿ ಜಿಲ್ಲೆಯ ಮತಿಹಾನಿ ಗ್ರಾಮದ 21 ಸದಸ್ಯರನ್ನು ಹೊತ್ತ ಎಸ್‌ಯುವಿ ವಾಹನ, ಮಗುವಿನ ಕೇಶ ಮುಂಡನ ಕಾರ್ಯಕ್ರಮಕ್ಕೆ ಮೈಹಾರ್‌ಗೆ ಹೋಗುತ್ತಿದ್ದರು. ಈ ವೇಳೆ ಉಪ್ನಿ ಗ್ರಾಮದ ಬಳಿ ಬಹ್ರಿಯತ್ತ ವೇಗವಾಗಿ ಬರುತ್ತಿದ್ದ ಟ್ರಕ್ ನಡುವೆ ಮುಖಾಮುಖಿಯಾಗಿ ಡಿಕ್ಕಿಯಾಗಿವೆ. ಡಿಕ್ಕಿ ರಭಸಕ್ಕೆ ಎಸ್‌ಯುವಿ ಸಂಪೂರ್ಣ ಜಖಂಗೊಂಡಿದೆ. ಕಿರುಚಾಟ ಮತ್ತು ಕೂಗಾಟ ಕೇಳಿ ಸ್ಥಳೀಯರು ನೀಡಿದ ಮಾಹಿತಿ ಮೇರೆಗೆ ಕೊತ್ವಾಲಿ ಪೊಲೀಸರು ದೌಡಾಯಿಸಿ ಪರಿಶೀಲಿಸಿದ್ದಾರೆ. ಎಲ್ಲ ಗಾಯಾಳುಗಳನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಕೆಲವರ ಸ್ಥಿತಿ ಗಂಭೀರವಾಗಿದ್ದರಿಂದ ರೇವಾ ವೈದ್ಯಕೀಯ ಕಾಲೇಜಿಗೆ ಕಳುಹಿಸಲಾಗಿದೆ. ಅಪಘಾತಕ್ಕೆ ಅತಿ ವೇಗ ಮತ್ತು ನಿರ್ಲಕ್ಷ್ಯವೇ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಪೊಲೀಸರು ಈ ಬಗ್ಗೆ ದೂರು ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆಯ ನಂತರ ಎಲ್ಲಾ ಮೃತರ ಶವಗಳನ್ನು ಅವರ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ ಎಂದು ಗಾಯತ್ರಿ ತಿವಾರಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಂತಾಪ: "ಸಿಧಿ ಜಿಲ್ಲೆಯ ಉಪ್ನಿ ಗ್ರಾಮದ ಬಳಿ ತಡರಾತ್ರಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಮೈಹರ್ ಮಾತಾಗೆ ಭೇಟಿ ನೀಡಲು ಹೋಗುತ್ತಿದ್ದ ಪ್ರಯಾಣಿಕ ವಾಹನ ಮತ್ತು ಟ್ರಕ್ ನಡುವೆ ಭೀಕರ ಡಿಕ್ಕಿಯಾಗಿ ಎಂಟು ಪ್ರಯಾಣಿಕರು ಮೃತಪಟ್ಟ ವಿಚಾರ ತುಂಬಾ ದುಃಖಕರ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ. ಗಾಯಗೊಂಡವರು ಬೇಗ ಗುಣಮುಖರಾಗಲಿ. ಮೃತ ವ್ಯಕ್ತಿಗಳ ಕುಟುಂಬಗಳಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಎಂದು ನಾನು ಭಗವಾನ್ ಮಹಾಕಾಲನಲ್ಲಿ ಪ್ರಾರ್ಥಿಸುತ್ತೇನೆ. ಸುದ್ದಿ ತಿಳಿಯುತ್ತಿದ್ದಂತೆ ತಡರಾತ್ರಿ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಸ್ಥಳೀಯರ ಸಹಾಯದಿಂದ ಗಾಯಾಳುಗಳಿಗೆ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡಿದ್ದಾರೆ. ಅಲ್ಲದೇ ಗಂಭೀರವಾಗಿ ಗಾಯಗೊಂಡ ಪ್ರಯಾಣಿಕರನ್ನು ರೇವಾ ಆಸ್ಪತ್ರೆಗೆ ಕಳುಹಿಸಿದ್ದಾರೆ. ರಸ್ತೆ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಮುಖ್ಯಮಂತ್ರಿಗಳ ವಿವೇಚನಾ ನಿಧಿಯಿಂದ ತಲಾ 2 ಲಕ್ಷ ರೂ, ಗಂಭೀರವಾಗಿ ಗಾಯಗೊಂಡವರಿಗೆ ತಲಾ 1 ಲಕ್ಷ ರೂ ಮತ್ತು ಸಣ್ಣಪುಟ್ಟ ಗಾಯಗೊಂಡವರಿಗೆ 50,000 ರೂಪಾಯಿಗಳ ಆರ್ಥಿಕ ಸಹಾಯವನ್ನು ನೀಡುವುದಾಗಿ ಮುಖ್ಯಮಂತ್ರಿ ತಿಳಿಸಿದ್ದಾರೆ.

# ಈಸ್ಟ್ ವೆಸ್ಟ್ ಸಂಸ್ಥಾಪಕ ಸಿ.ಎಂ.ನಾಗರಾಜ್ ಹುಟ್ಟುಹಬ್ಬ: ಆರೋಗ್ಯ ತಪಾಸಣಾ ಶಿಬಿರ




ಬೆಂಗಳೂರು: ಈಸ್ಟ್ ವೆಸ್ಟ್ ಏಜುಕೇಶನ್ ಸಮೂಹ ಸಂಸ್ಥೆಗಳ ಸಂಸ್ಥಾಪಕರು ಮತ್ತು ಮಾಜಿ ಮೇಯರ್ ಸಿ.ಎಂ.ನಾಗರಾಜ್ ಅವರ ಹುಟ್ಟು ಹಬ್ಬದ ಪ್ರಯುಕ್ತ ಕಿರಣ್ ಪೌಂಡೇಶನ್ ಈಸ್ಟ್ ವೆಸ್ಟ್ ಏಜುಕೇಶನ್ ಸಂಸ್ಥೆಗಳ ವಿವಿಧ ಶಾಲಾ, ಕಾಲೇಜುಗಳಲ್ಲಿ ಉಚಿತ ಬೃಹತ್ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಮಾಗಡಿ ರಸ್ತೆಯ ಬ್ಯಾಡರಹಳ್ಳಿಯ ಇಂಜಿನಿಯರಿಂಗ್ ಕಾಲೇಜು,ಯಲಹಂಕ ಇಂಜಿನಿಯರಿಂಗ್ ಕಾಲೇಜು,ಕುಣಿಗಲ್ ತಾಲ್ಲೂಕಿನ ಚಂದನಹಳ್ಳಿ ಗ್ರಾಮದಲ್ಲಿ ಉಚಿತ ಬೃಹತ್ ಆರೋಗ್ಯ ಶಿಬಿರ ಆಯೋಜಿಸಲಾಗಿತ್ತು.

ಕಿರಣ್ ಪೌಂಡೇಶನ್ ನ ಸಂಸ್ಥಾಪಕರಾದ ಡಾ.ರಶ್ಮಿ ರವಿಕಿರಣ್, ಕಾರ್ಯದರ್ಶಿ ಸಿ.ಆರ್ ತೇಜಸ್ ಕಿರಣ್ ನೇತೃತ್ವದಲ್ಲಿ ಈ ಶಿಬಿರ ಹಮ್ಮಿಕೊಳಲಾಗಿತ್ತು.

ನೂರಾರು ಮಂದಿ ಉಚಿತ ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ತಪಾಸಣೆಗೊಳ್ಳಪಟ್ಟು ವೈದ್ಯರಿಂದ ಸೂಕ್ತ ಸಲಹೆ ಪರಿಹಾರ ಕಂಡುಕೊಂಡರು.

ಪ್ರತಿವರ್ಷ ಸಂಸ್ಥಾಪಕ ಸಿ.ಎಂ.ನಾಗರಾಜ್ ಅವರ ಜನ್ಮದಿನಾಚರಣೆ ಅಂಗವಾಗಿ ಇಂತಹ ವಿಶೇಷ ಕಾರ್ಯಕ್ರಮ ಹಮ್ಮಿಕೊಳಲಾಗುತ್ತದೆ.

# ಪಶು ವೈದ್ಯಾಧಿಕಾರಿಗಳ ಹುದ್ದೆ ಭರ್ತಿಗೆ ಕ್ರಮ

**ಬೆಂಗಳೂರು:**ರಾಜ್ಯದಲ್ಲಿ ಖಾಲಿ ಇರುವ ಪಶು ವೈದ್ಯಾಧಿಕಾರಿಗಳ ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತ ಅವಧಿಯಲ್ಲಿ ಜೆಡಿಎಸ್‌ನ ಶರಣಗೌಡ ಕಂದಕೂರು ಹಾಗೂ ಕಾಂಗ್ರೆಸ್‌ನ ಗಣೇಶ್ ಜೆ.ಎನ್.ರವರ ಪ್ರತ್ಯೇಕ ಪ್ರಶ್ನೆಗಳಿಗೆ ಉತ್ತರ ನೀಡಿದ ಅವರು, 400 ಪಶು ವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ವಹಿಸಲಾಗಿದ್ದು, ಏಪ್ರಿಲ್‌ನಲ್ಲಿ ಪರೀಕ್ಷೆ ನಡೆಸಲು ತಾತ್ಕಾಲಿಕವಾಗಿ ದಿನಾಂಕಗಳನ್ನು ನಿಗದಿಪಡಿಸಿರುತ್ತದೆ.ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಪಶು ವೈದ್ಯಾಧಿಕಾರಿಗಳನ್ನು ನೇಮಕ ಮಾಡುವವರೆಗೂ ಗುತ್ತಿಗೆ ಆಧಾರದಲ್ಲಿ 400 ಪಶು ವೈದ್ಯಾಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ. ಹಾಗೆಯೇ ಪಶು ಪರೀಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಂಡಿದ್ದೇವೆ ಎಂದು ಅವರು ತಿಳಿಸಿದರು.

ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಿಕೊಂಡ 400 ಮಂದಿ ವೈದ್ಯಾಧಿಕಾರಿಗಳ ಪೈಕಿ 360 ವೈದ್ಯರು ಕರ್ತವ್ಯಕ್ಕೆ ಹಾಜರಾಗಿದ್ದಾರೆ. ಇನ್ನು 40 ಮಂದಿ ಕೆಲಸಕ್ಕೆ ಬಂದಿಲ್ಲ. ಇವರ ಮೇಲೆ ಕ್ರಮ ಕೈಗೊಳ್ಳಲು ಆಗಲ್ಲ. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುತ್ತೇವೆ ಎಂದರು.

ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಆರ್. ಅಶೋಕ್, ಕ್ರಮ ಕೈಗೊಳ್ಳಲ್ಲ ಎಂದು ಹೇಳುವುದು ಸರಿ ಹೋಗಲ್ಲ. ಅವರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವಾಗ ಪ್ರಮಾಣ ಪತ್ರಗಳನ್ನು ಪಡೆದುಕೊಂಡು ನೇಮಕ ಮಾಡಿ ಎಂದು ಸಲಹೆ ನೀಡಿದರು.

# ಮೈಸೂರು ಮತ್ತು ಹುಬ್ಬಳ್ಳಿಯಲ್ಲಿ ಬಿಎಂಎಟಿ ಕೇಂದ್ರಗಳ ಸ್ಥಾಪನೆ: ಸಚಿವ ಶರಣಪ್ರಕಾಶ್ ಪಾಟೀಲ್

**ಬೆಂಗಳೂರು:** ಮಕ್ಕಳಲ್ಲಿ ವರ್ಷದಿಂದ ವರ್ಷಕ್ಕೆ ವ್ಯಾಪಕವಾಗಿ ಹೆಚ್ಚಾಗುತ್ತಿರುವ ಬಿಎಂಎಟಿ(ಬೋನ್ ಮ್ಯಾರೊ ಆಸ್ಪಿರೇಷನ್ ಅಂಡ್ ಟ್ರೆಫಿನ್ ಬಯಾಪ್ಸಿ) ಸಂಸ್ಥೆಗಳನ್ನು ಮೈಸೂರು ಮತ್ತು ಹುಬ್ಬಳ್ಳಿಯಲ್ಲಿ ಪ್ರಾರಂಭಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದ್ದಾರೆ.

ವಿಧಾನಪರಿಷತ್‌ನಲ್ಲಿ ಸದಸ್ಯೆ ಉಮಾಶ್ರೀ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದ ಎಲ್ಲಾ ಹೋಬಳಿಗಳಲ್ಲೂ ಈ ಕೇಂದ್ರಗಳನ್ನು ಸ್ಥಾಪಿಸಬೇಕೆಂಬ ಉದ್ದೇಶವಿದೆ. ಪ್ರಾರಂಭಿಕ ಹಂತದಲ್ಲಿ ಹುಬ್ಬಳ್ಳಿ ಮತ್ತು ಮೈಸೂರಿನಲ್ಲಿ ಎರಡು ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದರು.

ಈಗಾಗಲೇ ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯಲ್ಲಿ ಕ್ಯಾನ್ಸರ್ ತಪಾಸಣಾ ಘಟಕ ಕಾರ್ಯ ನಿರ್ವಹಿಸುತ್ತಿದೆ. ಇದೇ ರೀತಿ ಕಲಬುರಗಿಯಲ್ಲೂ ಕೇಂದ್ರವನ್ನು ಪ್ರಾರಂಭ ಮಾಡಿದ್ದೇವೆ. ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆಯಲ್ಲೂ ಇದನ್ನು ತೆರೆಯಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.



ಮಕ್ಕಳಲ್ಲಿ ಇತ್ತೀಚೆಗೆ ಕ್ಯಾನ್ಸರ್ ಕಂಡುಬರುತ್ತಿರುವುದು ಅತ್ಯಂತ ಆತಂಕಕಾರಿ ವಿಷಯ. ಇದರ ಬಗ್ಗೆ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲೂ ಸಾರ್ವಜನಿಕರಿಗೆ ಶಿಬಿರಗಳನ್ನು ಆಯೋಜಿಸುವ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡುತ್ತಿದ್ದೇವೆ. ಸರ್ಕಾರದ ಮಟ್ಟದಲ್ಲೂ ಪ್ರತಿ ವರ್ಷ ಕಾರ್ಯಕ್ರಮಗಳನ್ನು ಆಯೋಜಿಸುತ್ತೇವೆ. ಆದರೂ ಕ್ಯಾನ್ಸರ್ ಹೆಚ್ಚಳವಾಗುತ್ತಿರುವುದು ಆತಂಕ ಸೃಷ್ಟಿಸಿದೆ ಎಂದು ವಿಷಾದಿಸಿದರು.

ಪ್ರತಿ ವರ್ಷ 1533 ಕ್ಯಾನ್ಸರ್ ಪಚ್ರೆಕರಣಗಳು 14 ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುತ್ತಿದೆ 876 ಗಂಡು ಮಕ್ಕಳು, 657 ಹೆಣ್ಣು ಮಕ್ಕಳು ಇದರಲ್ಲಿ ಸೇರ್ಪಡೆಯಾಗಿದೆ. ಮಕ್ಕಳಲ್ಲಿ ಪ್ರಾರಂಭಿಕ ಹಂತದಲ್ಲೇ ಅರಿವು ಮೂಡಿಸುವ ಕೆಲಸವಾಗಬೇಕು. ಕೇವಲ ಸರ್ಕಾರದಿಂದ ಮಾತ್ರವಲ್ಲದೆ ಸಂಘಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು, ಸಾರ್ವಜನಿಕರು ಕೈಜೋಡಿಸುವ ಮೂಲಕ ತಡೆಗಟ್ಟಬಹುದೆಂದು ಸಚಿವ ಶರಣಪ್ರಕಾಶ್ ಪಾಟೀಲ್ ಸಲಹೆ ಮಾಡಿದರು.

ಮೊದಲ ಪುಟದಿಂದ

## ಪ್ರತಿಧ್ವನಿಸಿದ ರನ್ಯಾ ಕೇಸ್

ಭಾಗಿಯಾಗಿರುವ ಸಚಿವರು ಯಾರು ಎಂಬುದನ್ನು ಬಹಿರಂಗಪಡಿಸಬೇಕು. ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ, ಬಂಧಿಸಬೇಕು ಎಂದು ಆಗ್ರಹಿಸಿದರು. ಇದಕ್ಕೆ ಬಹುತೇಕ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಧನಿಗೂಡಿಸಿದರು.ಈ ವಿಷಯವಾಗಿ ವಿಧಾನಸಸೌಧದಲ್ಲಿ ಮಾತನಾಡಿದ ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಸಚಿವರು ಭಾಗಿಯಾಗಿದ್ದಾರೆ ಎಂಬ ಸುದ್ದಿಯನ್ನು ನಾನು ಕೂಡ ಓದಿದ್ದೇನೆ, ಪ್ರಕರಣದಲ್ಲಿ ಸಚಿವರಾಗಲೀ, ಅಧಿಕಾರಿಗಳಾಗಲೀ ಯಾರೇ ಭಾಗಿಯಾಗಿದ್ದರು, ಸಹಕಾರ ನೀಡಿದ್ದರೂ ಅಂತಹವರ ವಿರುದ್ಧ ಕ್ರಮ ಜರುಗಿಸಬೇಕಾಗುತ್ತದೆ ಎಂದರು.

## ಅಂಗೀಕಾರ

ಇದೀಗ ಮೈಕ್ರೋ ಫೈನಾನ್ಸ್ ವಿಧೇಯಕವನ್ನು ಸ್ಪೀಕರ್ ಯುಟಿ ಖಾದರ್ ಸೋಮವಾರ ಅಂಗೀಕರಿಸಿದ್ದಾರೆ. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಬೇಸತ್ತು ಸಾಕಷ್ಟು ಜನ ಆತ್ಮಹತ್ಯೆಗೆ ಶರಣಾದ ಘಟನೆಗಳು ನಡೆದಿದ್ದವು. ಈ ಹಿನ್ನೆಲೆಯಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳ ತಡೆಗೆ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಜಾರಿಗೊಳಿಸಿತ್ತು. ನಂತರ ಸುಗ್ರೀವಾಜ್ಞೆಗೆ ರಾಜ್ಯಪಾಲರು ಒಪ್ಪಿಗೆ ನೀಡಿದ್ದರು. ಇದೀಗ ವಿಧಾನಸಭೆಯಲ್ಲಿ ಮೈಕ್ರೋ ಫೈನಾನ್ಸ್ ವಿಧೇಯಕ ಅಂಗೀಕಾರ ವಾಗಿದೆ.

## ಅಮೆರಿಕ ಸುಂಕ ಪ್ರಸ್ತಾಪ

ತೃಣಮೂಲ ಕಾಂಗ್ರೆಸ್ ನಾಯಕರು ಸೋಮವಾರ ಚುನಾವಣಾ ಆಯೋಗದೊಂದಿಗೆ ಮಾತುಕತೆ ನಡೆಸಿ, ಬಜೆಟ್ ಅಧಿವೇಶನದ ಎರಡನೇ ಭಾಗದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಲಿದ್ದಾರೆ. ಇದಕ್ಕಾಗಿ ಟಿಎಂಸಿ, ಕಾಂಗ್ರೆಸ್, ಡಿಎಂಕೆ, ಶಿವಸೇನೆ–ಯುಬಿಟಿ ಸೇರಿದಂತೆ ಇತರೆ ವಿಪಕ್ಷಗಳನ್ನು ಒಟ್ಟುಗೂಡಿಸಿದೆ.

ಸರ್ಕಾರಕ್ಕೆ ವಕ್ಫ್ ತಿದ್ದುಪಡಿ ಮಸೂದೆ ಅಂಗೀಕರಿಸುವುದು ಮೊದಲ ಆದ್ಯತೆಯಾಗಿದೆ. ಈ ಬಗ್ಗೆ ಮಾತನಾಡಿರುವ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜಿಜು, ವಕ್ಫ್ ತಿದ್ದುಪಡಿ ಮಸೂದೆಯನ್ನು ಆದಷ್ಟು ಬೇಗ ಅಂಗೀಕರಿಸಲು ಸರ್ಕಾರ ಉತ್ಸುಕವಾಗಿದೆ ಎಂದಿದ್ದಾರೆ.

ಮಣಿಪುರದಲ್ಲಿ ಮತ್ತೆ ಭುಗಿಲೆದ್ದಿರುವ ಹಿಂಸಾಚಾರ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸುಂಕದ ಬೆದರಿಕೆ, ಸಂಸದೀಯ ಕ್ಷೇತ್ರಗಳ ಗಡಿ ನಿರ್ಣಯ ವಿಚಾರಗಳ ಕುರಿತಾಗಿ ಅಧಿವೇಶನದಲ್ಲಿ ವಿಪಕ್ಷಗಳು ಧ್ವನಿ ಎತ್ತುವ ನಿರೀಕ್ಷೆ ಇದೆ.

ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ಭಾಗ ಜನವರಿ 31ರಿಂದ ಫೆಬ್ರವರಿ 13ರವರೆಗೆ ನಡೆದಿತ್ತು. ಎರಡನೇ ಭಾಗ ಇಂದಿನಿಂದ, ಮಾರ್ಚ್ 10 ರಂದು ಪ್ರಾರಂಭವಾಗಿ ಏಪ್ರಿಲ್ 4ರವರೆಗೆ ನಡೆಯಲಿದೆ.

## ಕೈಗಾರಿಕಾ ಭೂಮಿ ಮಂಜೂರು

ಭೂ ಹಂಚಿಕೆಯನ್ನು 137 ನೇ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮತಿ ಸಮಿತಿ ಅನುಮೋದಿಸಿದೆ ಎಂದಿರುವ ಅವರು, ನಟಿ ರನ್ಯರಾವ್ ಅವರ ಕಂಪನಿಯು ಸ್ಟೀಲ್ ಟಿಎಂಟಿ ಬಾರ್ ಗಳು, ರಾಡ್ ಗಳು ಮತ್ತು ಸಂಬಂಧಿತ ಉತ್ಪನ್ನಗಳ ಉತ್ಪಾದನಾ ಘಟಕವನ್ನು 138 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲು ಪ್ರಸ್ತಾಪಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆದರೆ, ಇದುವರೆಗೂ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ ಎಂದು ಸಹ ಸ್ಪಷ್ಟಪಡಿಸಿದ್ದಾರೆ.

## ಗ್ರಾಮ ಮಟ್ಟದಲ್ಲಿ ಸಮಿತಿ ರಚನೆ

ನಮ್ಮ ಏಕೈಕ ಗುರಿ. ಇದಕ್ಕೆ ಒತ್ತಡ ಬರುವುದು ಸಹಜ. ಜನಪ್ರತಿನಿಧಿಗಳು ಇದಕ್ಕೆ ಸಹಕಾರ ಕೊಡಬೇಕೆಂದು ಮನವಿ ಮಾಡಿದರು.

ಸರ್ವ ಪಕ್ಷಗಳ ಸದಸ್ಯರು ಸಹಕಾರವಿಲ್ಲದೆ ಇದನ್ನು ಅನುಷ್ಠಾನ ಮಾಡಲು ಸಾಧ್ಯವಿಲ್ಲ. ನಮ್ಮ ಮುಖ್ಯಮಂತ್ರಿಯವರು ಯಾವುದೇ ಕಾರಣಕ್ಕೂ ನಿಜವಾದ ಫಲಾನುಭವಿಗಳಿಗೆ ಅನ್ಯಾಯವಾಗದಂತೆ ಕ್ರಮವಹಿಸಿ ಎಂದು ಸೂಚನೆ ಕೊಟ್ಟಿದ್ದಾರೆ. ಏಕಕಾಲದಲ್ಲಿ ಈ ಪ್ರಕ್ರಿಯೆ ನಡೆಯುವುದರಿಂದ ತಾಂತ್ರಿಕ ಸಮಸ್ಯೆಗಳು ಎದುರಾಗುತ್ತವೆ. ಸರ್ವರ್, ಕಂಪ್ಯೂಟರ್ ಸೇರಿದಂತೆ ಹಲವು ತಾಂತ್ರಿಕ ಕಾರಣಗಳು ಎದುರಾಗುತ್ತವೆ. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ಮನವಿ ಮಾಡಿಕೊಂಡರು.

ಇದಕ್ಕೂ ಮುನ್ನ ಮಾತನಾಡಿದ ಸದಸ್ಯ ಸಿ.ಟಿ.ರವಿ ಮಾತನಾಡಿ, ಬಿಪಿಎಲ್ ಕಾರ್ಡ್ ಪರಿಷ್ಕರಣೆಯಿಂದಾಗಿ ಸಾಕಷ್ಟು ಗೊಂದಲ ಉಂಟಾಗಿದೆ. ನಿಜವಾದ ಫಲಾನುಭವಿಗಳು ನಮ್ಮನು ಸರ್ಕಾರ ಯಾವ ತೆಗೆದುಹಾಕುತ್ತಾರೆಂಬ ಆತಂಕದಿಂದ ಕಾಲ ನೂಕುತ್ತಿದ್ದಾರೆ. ನಿಜವಾದ ಫಲಾನುಭವಿಗಳಿಗೆ ಅನ್ಯಾಯಗವಾಗದಂತೆ ಸರ್ಕಾರ ಕ್ರಮ ವಹಿಸಬೇಕೆಂದು ಹೇಳಿದರು

## ಹಲವೆಡೆ ಇಡಿ ದಾಳಿ

ಚೈತನ್ಯ ಬಘೇಲ್ ನಿವಾಸ ಮತ್ತು ರಾಜ್ಯದ ಇತರ ಕಡೆಗಳಲ್ಲಿ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ದಾಳಿ ನಡೆಸಲಾಯಿತು. ಈ ವಿಚಾರವಾಗಿ ಭೂಪೇಶ್ ಬಘೇಲ್ ಅಧಿಕೃತ ಟ್ವಿಟರ್ ಖಾತೆಯಲ್ಲಿ ಸಂದೇಶ ಪ್ರಕಟಿಸಲಾಗಿದ್ದು, ಪರೋಕ್ಷವಾಗಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲಾಗಿದೆ.

## ಶಾಸಕಾಂಗ ಪಕ್ಷದ ಸಭೆ

ಅನುಮೋದನೆ . ವಿಧೇಯಕಗಳ ಅಂಗೀಕಾರ ಸದನದಲ್ಲಿ ವಿಪಕ್ಷಗಳ ಆರೋಪಗಳನ್ನ ಸಮರ್ಥವಾಗಿ ಎದುರಿಸುವ ಬಗ್ಗೆ ಚರ್ಚೆ ನಡೆಯುವ ಸಾಧ್ಯತೆ ಇದೆ.ಹಾಗೆಯೇ ಗ್ಯಾರಂಟಿಗಳ ಜೊತೆಗೆ ರಾಜ್ಯದ ಅಭಿವೃದ್ಧಿ ಮಂತ್ರ ಪಠಿಸಿರುವ ಬಜೆಟ್ ಅನ್ನು ಅಧಿವೇಶನದಲ್ಲಿ ಸಮರ್ಥಿಸಿಕೊಳ್ಳಲು ಸಭೆಯಲ್ಲಿ ಸೂಚನೆ ನೀಡುವ ಸಾಧ್ಯತೆ ಇದೆ.

## ಪ್ರವಾಹ: 16 ಜನ ಸಾವು

ಪ್ರವಾಹಕ್ಕೆ ಸಿಲುಕಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾಣೆಯಾಗಿರುವ ಜನರನ್ನು ರಕ್ಷಣಾ ತಂಡಗಳು ಹುಡುಕುತ್ತಿವೆ. ಕಳೆದ ಶುಕ್ರವಾರ ಬಹಿಯಾ ಬ್ಲಾಂಕಾ ನಗರದಲ್ಲಿ ಸುರಿಯುತ್ತಿರುವ ಮಳೆಯಿಂದ ಉಂಟಾದ ಪ್ರವಾಹದಲ್ಲಿ ಹಲವರು ಕೊಚ್ಚಿ ಹೋಗಿದ್ದಾರೆ ಎಂದು ತಿಳಿಸಿದ್ದಾರೆ. ಬ್ಯೂನಸ್ ಐರಿಸ್‌ನಿಂದದಕ್ಷಿಣದಲ್ಲಿರುವ ನಗರದಿಂದ ಸುಮಾರು 1,450 ಕ್ಕೂ ಹೆಚ್ಚು ಜನರನ್ನು ಸಿಬ್ಬಂದಿ ಸ್ಥಳಾಂತರಿಸಿದ್ದಾರೆ. ಸ್ಥಳಾಂತರಿಸಿದವರಲ್ಲಿ ಸ್ಥಳೀಯ ಆಸ್ಪತ್ರೆಯ ರೋಗಿಗಳು ಸೇರಿದ್ದಾರೆ. ಇತ್ತೀಚಿನ ದಿನಗಳಲ್ಲಿ ದಾಖಲೆಯ 300 ಮಿಲಿಮೀಟರ್ ಮಳೆಯಾಗಿದೆ.

# ಮಹಿಳೆ ಇಡೀ ಜಗತ್ತನ್ನೇ ಗೆಲ್ಲಬಲ್ಲಳು



ಮುಳಬಾಗಿಲು: ಮಹಿಳೆ ಮನಸ್ಸು ಮಾಡಿದರೆ ಇಡೀ ಜಗತ್ತನ್ನೇ ಗೆಲ್ಲಬಲ್ಲಳು ಎಂದು ತಾಲೂಕಿನ ದಂಡಾಧಿಕಾರಿ ವಿ ಗೀತಾ ತಿಳಿಸಿದ್ದಾರೆ.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಕುರಿತು ಮಾತನಾಡಿದ ಅವರು, ಸ್ತ್ರೀ ಶಕ್ತಿವಂತಳು, ನಿಸ್ವಾರ್ಥಿ ಹಾಗೂ ತಾಳ್ಮೆಯ ಮೂರ್ತಿಯಾಗಿದ್ದಾಳೆ ಆಕೆ ತಮ್ಮಲ್ಲಿ ಉತ್ತಮ ಆತ್ಮ ವಿಶ್ವಾಸವನ್ನು ತುಂಬಿಕೊಂಡು ಮುನ್ನುಗ್ಗಿದರೆ ಏನು ಬೇಕಾದರೂ ಸಾಧನೆ ಮಾಡಬಹುದು. ನಮ್ಮ ದೇಶದ ಹಲವು ಕ್ಷೇತ್ರಗಳಲ್ಲಿ ಮಹಿಳೆಯರು ಸಾಧನೆ ಮಾಡಿದ್ದಾರೆ. ಅಷ್ಟೇ ಅಲ್ಲದೆ ವಿದೇಶಿ ನೆಲದಲ್ಲಿ ಆಡಳಿತ ಮಾಡುವ ಉನ್ನತ ಸ್ಥಾನಕ್ಕೆ ಮಹಿಳೆಯರು ಏರಿದ್ದಾರೆ. ಅವರೆಲ್ಲರೂ ಇಂದಿನ ಮಹಿಳೆಯರಿಗೆ ಪ್ರೇರಣೆ ಮತ್ತು ಸ್ಫೂರ್ತಿಯಾಗಬೇಕಾಗಿದ್ದಾರೆ. ಪ್ರತಿಯೊಬ್ಬ ಪುರುಷನ ಯಶಸ್ಸಿನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ ಹಾಗೆಯೇ ಪ್ರತಿಯೊಬ್ಬ ಮಹಿಳೆಯ ಯಶಸ್ಸಿನ ಹಿಂದೆ ಪುರುಷರು ದುಡಿಯಬೇಕು,ತಮ್ಮಲ್ಲಿನ ನಕಾರಾತ್ಮಕ ದೋರಣೆ ಬಿಟ್ಟು ಪುರುಷನಿಗೆ ಸರಿಸಮನಾಗಿ ನಿಲ್ಲಬಲ್ಲೆ ಎಂಬ ವಿಶ್ವಾಸ ಮೈಗೂಡಿಸಿಕೊಳ್ಳಬೇಕು ಎಂದರು.

ಪ್ರಾಂಶುಪಾಲರಾದ ಡಾ ಜಿ ಮುನಿವೆಂಕಟಪ್ಪ ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಮಹಿಳೆ ಎಲ್ಲರಂಗದಲ್ಲಿಯೂ ಮುಂದೆ ಬರುತ್ತಿದ್ದಾರೆ ಅಭಿವೃದ್ಧಿಯತ್ತ ಸಾಗುತ್ತಿದ್ದಾರೆ, ಮಹಿಳಾಸಬಲೀಕರಣ ಮಾಡುವ ನಿಟ್ಟಿನಲ್ಲಿ ಸಮಾಜ ಮುಂದಾಗಬೇಕು ಅವರ ಅಭಿವೃದ್ಧಿ ಆದರೇ ಅದುವೇ ದೇಶದ ಅಭಿವೃದ್ಧಿ ಎಂದರು.

ಪ್ರಾಧ್ಯಾಪಕರಾದ ಡಾ ಶಿವರಾಮೇಗೌಡ ಮಾತನಾಡಿ, ಸ್ತ್ರೀ ಶಕ್ತಿಯ ರೂಪ, ಆಕೆಗೆ ಇರುವಷ್ಟು ತಾಳ್ಮೆ ಬೇರೊಬ್ಬರಿಗಿಲ್ಲ, ಮನೆಯಲ್ಲಿ ಹೆಣ್ಣು ತಾಯಿಯಾಗಿ, ಮಗಳಾಗಿ ,ಪತ್ನಿಯಾಗಿ, ನಿಸ್ವಾರ್ಥವಾಗಿ ದುಡಿಯುತ್ತಾಳೆ. ನಮ್ಮ ದೇಶದಲ್ಲಿ ವೇದಗಳ ಕಾಲದಿಂದಲೂ ಮಹಿಳೆಯರಿಗೆ ಸಮಾನತೆ ಇತ್ತು ಹಾಗಾಗಿ ಮುಂದೆಯೂ ಅವರಿಗೆ ಸಮಾನತೆಯನ್ನು ಎಲ್ಲಾ ಕ್ಷೇತ್ರಗಳಲ್ಲಿಯೂ ನೀಡಬೇಕಾಗಿದೆ ಎಂದರು.

ಪ್ರಾಸ್ತಾವಿಕ ಭಾಷಣವನ್ನು ಮಾಡಿದ ಪ್ರಾಧ್ಯಾಪಕೀಯದ ಶಶಿಕಲಾ ಪ್ರಾಚೀನ ಕಾಲದಿಂದಲೂ ನಮ್ಮ ದೇಶದಲ್ಲಿ ಮಹಿಳೆಯರಿಗೆ ಸಮಾನತೆ ಇತ್ತು ಅವರಲ್ಲಿ ಗಾರ್ಗಿ, ಮೈತೆಯಿ ಇನ್ನು ಮುಂತಾದ ಮಹಿಳೆಯರು ಪುರುಷರಿಗೆ ಸಮಾನರಾಗಿ ಇದ್ದರು, ಆಧುನಿಕ ಜಗತ್ತಿನಲ್ಲಿ ರಾಜಕೀಯ ಕ್ಷೇತ್ರದಲ್ಲಿ, ಆರ್ಥಿಕ,ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಹಾಗೂ ವೈಜ್ಞಾನಿಕ ಕ್ಷೇತ್ರದಲ್ಲಿಯೂ ನಾನಾ ರೀತಿಯ ಸಾಧನೆಗಳನ್ನು ಮಾಡಿದ್ದಾರೆ ಆದ್ದರಿಂದ ಇಂದಿನ ಮಹಿಳೆಯರು ಅವರನ್ನು ಸ್ಫೂರ್ತಿಯಾಗಿ ತೆಗೆದುಕೊಂಡು ತಾವು ಅತಿ ಉನ್ನತವಾಗಿರುವ ಸ್ಥಾನಕ್ಕೆ ಏರುವ ನಿಟ್ಟಿನಲ್ಲಿ ಮುನ್ನಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಧ್ಯಾಪಕರಾದ ಡಾ ಎ ಎನ್ ಮೂರ್ತಿ, ಡಾ ಕೃಷ್ಣಪ್ಪ, ಡಾ ಟಿ ಎಸ್ ಶ್ರೀನಿವಾಸ್, ಡಾ ಸೀನಪ್ಪ, ಡಾ ವಿ ಶ್ರೀಧರ್, ಡಾ ವಸುಂದರ, ಡಾ ಉಮಾ,ಎಲ್ಲಾ ಬೋಧಕ ಮತ್ತು ಬೋಧಕೇತರ ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಸುಬ್ಬಾರೆಡ್ಡಿ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ



**ಶಿಡ್ಲಘಟ್ಟ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಕೆ.ಎನ್.ಸುಬ್ಬಾರೆಡ್ಡಿ ಅವರನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿಯನ್ನಾಗಿ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ಅವರು ನಾಮನಿರ್ದೇಶನ ಮಾಡಿ ನೇಮಕ ಆದೇಶವನ್ನು ನೀಡಿದ್ದು, ತಾಲ್ಲೂಕಿನ ಸರ್ಕಾರಿ ನೌಕರರಲ್ಲಿ ಸಂತಸ ಮನೆಮಾಡಿದೆ.

ಬೆಂಗಳೂರಿನ ಕಬ್ಬನ್ ಉದ್ಯಾನವನದ ಸರ್ಕಾರಿ ನೌಕರರ ಸಂಘದ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನೇಮಕ ಆದೇಶಗಳನ್ನು ವಿತರಿಸಿ, ಸುಬ್ಬಾರೆಡ್ಡಿ ಅವರನ್ನು ಸನ್ಮಾನಿಸಿದ ಸಿ.ಎಸ್.ಷಡಕ್ಷರಿ ಅವರು ಮಾತನಾಡಿ, ಸಂಘದ ಬೈಲಾ ನಿಯಮ ಮತ್ತು ರಾಜ್ಯ ಕಾರ್ಯಕಾರಿ ಸಮಿತಿಯ ನಿರ್ಣಯದಂತೆ ಕಾರ್ಯದರ್ಶಿ ಸ್ಥಾನಕ್ಕೆ ನಾಮನಿರ್ದೇಶನ ಮಾಡಿದ್ದು ಉತ್ತಮ ಸೇವೆಸಲ್ಲಿಸುವಂತೆ ತಿಳಿಸಿದರು.

ಸರ್ಕಾರಿ ನೌಕರರ ಸಂಘದ ನೂತನ ಕಾರ್ಯದರ್ಶಿ ಕೆ.ಎನ್.ಸುಬ್ಬಾರೆಡ್ಡಿ ಅವರು ಮಾತನಾಡಿ, ಮೊದಲು ಒಂದು ಅವಧಿಯಲ್ಲಿ ಕಾರ್ಯಕಾರಿ ಮಂಡಳಿಯಲ್ಲಿದ್ದು, ನಂತರದ ಎರಡು ಅವಧಿಯಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಸರ್ಕಾರಿ ಎಲ್ಲಾ ಇಲಾಖೆಗಳ ನೌಕರರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು ತಾಲ್ಲೂಕಿನಲ್ಲಿ ಯಾವುದೇ ಸಮಸ್ಯೆಯಿಲ್ಲ ಎಂದು ಹೇಳಿದರು.

ಹಿಂದಿನ ಅವಧಿಯಲ್ಲಿ ಉತ್ತಮ ಕಾರ್ಯಗಳಾಗಲು ಎಲ್ಲಾ ನೌಕರರು ಉತ್ತಮ ಸಹಕಾರ ನೀಡಿದ್ದಾರೆ ತಾಲ್ಲೂಕು ಸಂಘಕ್ಕೆ ಎರಡನೇ ಅವಧಿಗೂ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು, ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಎಲ್ಲಾ ನೌಕರರ ಸಹಕಾರದಿಂದ ತಾಲ್ಲೂಕಿನಲ್ಲಿ ನೌಕರರ ಭವನ, ಗುರುಭವನ, ಮತ್ತಿತರ ಭವನಗಳ ನಿರ್ಮಾಣವಾಗಬೇಕಿದ್ದು ಹೆಚ್ಚು ಪ್ರಯತ್ನ ಮಾಡಲಾಗುವುದು ಎಂದರು.

ಧನ್ಯವಾದ ಸಮರ್ಪಣೆ: ರಾಜ್ಯಮಟ್ಟದಲ್ಲಿ ತಾಲ್ಲೂಕಿಗೆ ಆದ್ಯತೆ ನೀಡಿ ರಾಜ್ಯ ಕಾರ್ಯದರ್ಶಿ ಸ್ಥಾನಕ್ಕೆ ನೇಮಕ ಮಾಡಿದ್ದಕ್ಕಾಗಿ ಕೆ.ಎನ್.ಸುಬ್ಬಾರೆಡ್ಡಿ, ತಾಲ್ಲೂಕು ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅಧ್ಯಕ್ಷ ಎಲ್.ವಿ.ವೆಂಕಟರೆಡ್ಡಿ, ಕಾರ್ಯದರ್ಶಿ ಎಚ್.ಎಸ್.ರುದ್ರೇಶಮೂರ್ತಿ, ತಾಲ್ಲೂಕು ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಗಜೇಂದ್ರ, ಕಾರ್ಯದರ್ಶಿ ನರಸಿಂಹರಾಜು, ತಾಲ್ಲೂಕಿನ ಸರ್ಕಾರಿ ನೌಕರರುರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ಅವರನ್ನುಅಭಿನಂದಿಸಿದ್ದಾರೆ. ಇದೇಸಂದರ್ಭದಲ್ಲಿ ರಾಜ್ಯ ಪದಾಧಿಕಾರಿಗಳು, ತಾಲ್ಲೂಕು ಘಟಕದ ಪದಾಧಿಕಾರಿಗಳು ಮತ್ತು ವೃಂದಸಂಘಗಳ ಅಧ್ಯಕ್ಷರು, ಕಾರ್ಯದರ್ಶಿ, ಮತ್ತಿತರರು ಶುಭ ಹಾರೈಸಿದರು.

# ಜಿಲ್ಲೆಯ ಸಮಗ್ರ ಅಭಿವೃದ್ಧಿ ನನ್ನ ಗುರಿ: ಸಚಿವ ಮುನಿಯಪ್ಪ




**ದೇವನಹಳ್ಳಿ:** ತಾಲ್ಲೂಕಿನ ವಿಜಯಪುರ ಹೋಬಳಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಸುಮಾರು 3.63 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ರವರು ಚಾಲನೆ ನೀಡಿದರು.

ನಂತರ ಮಾತನಾಡಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹಾಗೂ ತಾಲ್ಲೂಕು ಅಭಿವೃದ್ಧಿಗೆ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ, ಬಡವರ, ಹಿಂದುಳಿದವರ, ಮಹಿಳೆಯರ ಮಕ್ಕಳ ಅಭಿವೃದ್ಧಿಗೆ, ಉದ್ಯೋಗ, ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಮುಂತಾದ ಇನ್ನಷ್ಟು ಯೋಜನೆಗಳನ್ನು ಕಾರ್ಯರೂಪಕ್ಕೆ ತಂದು ಜಿಲ್ಲೆಯನ್ನು ಸಮಗ್ರ ಅಭಿವೃದ್ಧಿಯತ್ತ ಕೊಂಡೊಯ್ಯುವುದು ನನ್ನ ಗುರಿ ಎಂದರು.

ವಿಜಯಪುರ ಹೋಬಳಿಯ ವೆಂಕಟಗಿರಿ ಕೋಟೆ ಗ್ರಾಪಂ ವ್ಯಾಪ್ತಿಯಲ್ಲಿ 111 ಲಕ್ಷಗಳ ಕಾಮಗಾರಿ, ಜಿಜ್ಜವಾರ ಗ್ರಾಪಂ ವ್ಯಾಪ್ತಿಯಲ್ಲಿ 54 ಲಕ್ಷ ರೂಗಳ ಕಾಮಗಾರಿ, ಹಾರೋಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ 64 ಲಕ್ಷಗಳ ಕಾಮಗಾರಿ, ಕೋರಮಂಗಲ ಗ್ರಾಪಂ ವ್ಯಾಪ್ತಿಯಲ್ಲಿ. 54 ಲಕ್ಷಗಳ ಕಾಮಗಾರಿ, ಮಂಡಿಬೆಲೆ ಗ್ರಾಪಂ ವ್ಯಾಪ್ತಿಯಲ್ಲಿ 77 ಲಕ್ಷಗಳ ಕಾಮಗಾರಿ ಸೇರಿ ಒಟ್ಟು 3.63 ಕೋಟಿ ಮೊತ್ತದಲ್ಲಿ ವಿವಿಧ ರಸ್ತೆ-ಚರಂಡಿ ಅಭಿವೃದ್ಧಿ, ಹೈ ಮಾಸ್ಕ್ ಅಳವಡಿಸುವ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ರಾಜಣ್ಣ, ಬಯಪ ಅಧ್ಯಕ್ಷರಾದ ವಿ. ಶಾಂತಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆ ಅಧ್ಯಕ್ಷರಾದ ಜಗನ್ನಾಥ, ದೇವನಹಳ್ಳಿ ತಹಸೀಲ್ದಾರ್ ಬಾಲಕೃಷ್ಣ, ಇಒ ಶ್ರೀನಾಥ್ ಗೌಡ ,ವೆಂಕಟಗಿರಿ ಕೋಟೆ ಅಮರ್ ನಾಥ್,ಮೂರ್ತಿ, ತತ್ತಮಂಗಲ ರಮೇಶ್ ಸೇರಿದಂತೆ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾದ್ಯಾಕ್ಷರು, ಸದಸ್ಯರು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಮಹಿಳಾ ದಿನಾಚರಣೆ

ಆನೇಕಲ್: ಸರ್ಜಾಪುರ ದ ಡಾ. ಆರ್.ಅಂಬೇಡ್ಕರ್ ಆಟದ ಮೈದಾನದಲ್ಲಿ ಮಹಿಳೆಯರ ಸೋಲ್ ಸ್ಪಿರಿಟ್ ತಂಡದ ವತಿಯಿಂದ ಅಂತರ್ ರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಯಿತು.

ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಡಾ. ಬಿ.ಆರ್ ಅಂಬೇಡ್ಕರ್ ರವರ ಕಂಚಿನ ಪತಳಿಗೆ ಪುಷ್ಪ ನಮನ ಸಲ್ಲಿಸಿ ನಂತರ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದಂತಹ ಸಾಧಕೀಯರಿಗೆ ಮಹಿಳಾ ರತ್ನ ಆವಾರ್ಡ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು ಮತ್ತು ವಿಶೇಷವಾಗಿ ಮಹಿಳೆಯರಿಗೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಮಹಿಳೆಯರಿಂದ ಕೋಲಾಟ ಪ್ರದರ್ಶನ ಮತ್ತು ಮಕ್ಕಳಿಂದ ಭರತನಾಟ್ಯ ನೃತ್ಯ ಪ್ರದರ್ಶನವು ನಡೆಯಿತು. ಕಾರ್ಯಕ್ರಮದಲ್ಲಿ ಸರ್ಜಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಮತಾ ರಮೇಶ್, ಮಹಿಳಾ ಮುಖಂಡರಾದ ಮಮತಾ ಎಸ್.ವೈ ಶಂಭಯ್ಯ, ಶೈಲಾ ಶ್ರೀನಿವಾಸ್, ವೈದ್ಯರಾದ ಡಾ.ರೂಪ, ಯೋಗ ಗುರುಗಳಾದ ಸ್ವಾತಿ ಶಕ್ತಿ ರೂಪ, ನಿವೃತ್ತ ಶಿಕ್ಷಕಿ ಮುನಿರತ್ನಮ್ಮ, ಸಭಿಯಾ, ಪೂಜಾ ಚಂದ್ರ, ನಸೀಬಾ, ಚಂದ್ರಕಲಾ, ಡಾ.ಎನ್ ಕಲಾವತಿ ಮೂರ್ತಿಕುಮಾರ್, ಎ.ಸತೀಶ್ ಕುಮಾರ್, ಮಂಜೇಗೌಡ, ಹಾಗೂ ಸರ್ಜಾಪುರ ಅಭಿವೃದ್ದೀ ಸಂಜಿವಿನಿ ಒಕ್ಕೂಟದ ಪಧಾಧಿಕಾರಿರಿಗಳು, ಮೃತ್ಯುಂಜಯ ಫೌಂಡೇಷನ್, ನವ ಎಕ್ಸಪೆರ್ಷನ್ ಸಂಸ್ಥೆಯ ಮಕ್ಕಳು ಸೇರಿದಂತೆ ಮಹಿಳೆಯರು ಹಾಜರಿದ್ದರು.



# ನೃತ್ಯ ಕಲಾವಿದೆ ಉಷಾ ಬಸಪ್ಪಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪ್ರದಾನ





**ಬೆಂಗಳೂರು:** ಕರ್ನಾಟಕ ಸರ್ಕಾರದ ವತಿಯಿಂದ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆಯಂದು (ಮಾರ್ಚ್ 8) ನಗರದ ಜೆ.ಸಿ. ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಕ್ಕಳ ಮತ್ತು ಮಹಿಳೆಯರ ಕಲ್ಯಾಣ ಅಭಿವೃದ್ಧಿ ಸಚಿವೆ ಶ್ರೀಮತಿ ಲಕ್ಷ್ಮೀ ಆರ್. ಹೆಬ್ಬಾಳ್ಕರ್ ಅವರು ನೃತ್ಯ ಕಲಾವಿದರೂ ಹಾಗೂ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಸದಸ್ಯರೂ ಆದ ವಿದುಷಿ ಶ್ರೀಮತಿ ಉಷಾ ಬಸಪ್ಪ ಅವರಿಗೆ "ಕಿತ್ತೂರು ರಾಣಿ ಚೆನ್ನಮ್ಮ"ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಿದರು.

ಪ್ರಶಸ್ತಿ ಪುರಸ್ಕೃತರ ಕಿರುಪರಿಚಯ : ಬೆಂಗಳೂರಿನ ಉಷಾ ಬಸಪ್ಪ ವ್ಯಾಸಂಗದಲ್ಲಿ ಬಿ.ಎ. ಪೂರೈಸಿ , ಭರತನಾಟ್ಯದಲ್ಲಿ ವಿದ್ವತ್ ಮಾಡಿದ್ದಾರೆ. ಪ್ರಶಸ್ತಿ-ಗೌರವಗಳು : ನಾಟ್ಯರತ್ನ ಪ್ರಶಸ್ತಿ, ಕಾಯಕಶ್ರೀ ಪ್ರಶಸ್ತಿ, "ಸಿದ್ಧಗಂಗಾ ಪ್ರಶಸ್ತಿ, ಕೆಂಗಲ್ ಹನುಮಂತರಾಯ ಪ್ರಶಸ್ತಿ, ಆರ್ಯಭಟ ಪ್ರಶಸ್ತಿ, ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಹೀಗೆ ಇನ್ನೂ ಹಲವಾರು ಪ್ರಶಸ್ತಿಗಳನ್ನು ಪಡೆದಿರುವ ಉಷಾ ಈಗ ಕರ್ನಾಟಕ ಸರ್ಕಾರದಿಂದ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಯನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ.

ಉಷಾ ಬಸಪ್ಪ ಅವರು ಭರತನಾಟ್ಯ ಕಲಾವಿದೆ ಅಷ್ಟೇ ಅಲ್ಲದೆ ರಂಗಭೂಮಿ ಕಲಾವಿದರು ಸಹ ಆಗಿದ್ದಾರೆ.

ಪದ್ಮಿನಿಪ್ರಿಯ ನೃತ್ಯ ಅಕಾಡೆಮಿಯನ್ನು 2011ರಲ್ಲಿ ಸ್ಥಾಪಿಸಿ, ಪ್ರತಿವರ್ಷ ಹೊಸ ಹೊಸ ಪ್ರತಿಭೆಗಳಿಗೆ ವೇದಿಕೆಯನ್ನು ಒದಗಿಸಿಕೊಟ್ಟು ಪ್ರೋತ್ಸಾಹಿಸುತ್ತಿದ್ದಾರೆ. ಉಷಾ ಬಸಪ್ಪ ಅವರು ಈವರೆಗೆ ಸುಮಾರು ಮುನ್ನೂರಕ್ಕೂ ಹೆಚ್ಚು ವೇದಿಕೆಗಳಲ್ಲಿ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮವನ್ನು ನೀಡಿದ್ದಾರೆ. ಪ್ರಸ್ತುತ "ಕಿತ್ತೂರು ರಾಣಿ ಚೆನ್ನಮ್ಮ" ಪ್ರಶಸ್ತಿ ಪಡೆದಿರುವ ಉಷಾ ಬಸಪ್ಪ ಅವರಿಗೆ ಶುಭ ಹಾರೈಸೋಣ.

# ನಮ್ಮೂರ ಶಾಲೆ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಿ

**ಮುಳಬಾಗಿಲು:** ಗುಣಮಟ್ಟದ ಶಿಕ್ಷಣದೊಂದಿಗೆ ಗುಣಾತ್ಮಕ ಶಿಕ್ಷಣ ಸಿಗುವ ಸರ್ಕಾರಿ ಶಾಲೆಗಳ ಬಗ್ಗೆ ಕೀಳರಿಮೆ ತೊರೆದು ಮಕ್ಕಳನ್ನು ದಾಖಲಿಸಿ ನಮ್ಮೂರ ಶಾಲೆ ಅಭಿವೃದ್ಧಿಗೆ ಗ್ರಾಮದ ಪ್ರತಿಯೊಬ್ಬರೂ ಕೈಜೋಡಿಸಿ ಎಂದು ಶಾಸಕ ಸಮೃದ್ಧಿ ವಿ.ಮಂಜುನಾಥ್ ತಿಳಿಸಿದರು.

ತಾಲ್ಲೂಕಿನ ಮಲ್ಲನಾಯಕನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಏರ್ಪಡಿಸಿದ್ದ ಹಳೆ ವಿದ್ಯಾರ್ಥಿಗಳ ಸಂಘದ ಉದ್ಘಾಟನೆ ಹಾಗೂ ಮಹಿಳಾ ದಿನಾಚರಣೆಗೆ ಕಾರ್ಯಕ್ರಮಗಳಿಗೆ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದ ಅವರು, ಸಾಧಕ ಮಕ್ಕಳಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳೆಂಬ ಕೀಳರಿಮೆ ತೋರದಿರಿ, ಗುಣಾತ್ಮಕ ಶಿಕ್ಷಣ ಹಾಗೂ ಸಂಸ್ಕಾರ ಕಲಿಸುವ ಸಾಧಕ ಶಿಕ್ಷಕರು ಇಲ್ಲಿ ಕೆಲಸ ಮಾಡುತ್ತಿದ್ದು, ಪೋಷಕರು ಮಕ್ಕಳನ್ನು ಯಾವುದೇ ಅನುಮಾನವಿಲ್ಲದೇ ದಾಖಲಿಸಬಹುದು ಎಂದರು.

ಪ್ರತಿ ಮಗುವಿನ ಆಸಕ್ತಿಗೆ ಅನುಗುಣವಾಗಿ ಕಲಿಕೆಗೆ ವಿಷಯ ಆಯ್ಕೆಗೆ ಅವಕಾಶ ಸಿಗಬೇಕು ಎಂದ ಅವರು, ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಸಮುದಾಯದ ಸಹಕಾರ ಅಗತ್ಯವಿದೆ ಎಂದು ತಿಳಿಸಿ. ಶಾಲೆಯ ಅಭಿವೃದ್ಧಿಗೆ ಅಗತ್ಯವಾದ ಎಲ್ಲಾ ನೆರವು ಒದಗಿಸುವ ಭರವಸೆ ನೀಡಿ, ಮುಖ್ಯಶಿಕ್ಷಕ ಮುನಿರಾಮಯ್ಯ ಅವರು ಶಾಲೆಯ ಅಭಿವೃದ್ಧಿಗೆ ಕೈಗೊಂಡಿರುವ ಕಾರ್ಯಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು

ತಹಸೀಲ್ದಾರ್ ವಿ. ಗೀತಾ ಮಾತನಾಡಿ, ಮಕ್ಕಳು ಕಲಿಕೆ ಸಂದರ್ಭದಲ್ಲಿ ದುಶ್ಚಟಗಳಿಗೆ ಬಲಿಯಾಗದೇ ಉತ್ತಮ ಪ್ರಜೆಗಳಾಗಿ ದೇಶ.ಸಮಾಜಕ್ಕೆ ಕೊಡುಗೆ ನೀಡುವ ಮಹಾನ್ ಸಾಧಕರಾಗಿ ಹೊರಹೊಮ್ಮುವ ಮೂಲಕ ಶಾಲೆ ಗ್ರಾಮ, ಪೋಷಕರಿಗೆ ಕೀರ್ತಿ ತನ್ನಿ ಎಂದು ಕಿವಿಮಾತು ಹೇಳಿದರು. ಟಿವಿ.ಮೊಬೈಲ್ ವ್ಯಾಮೋಹಕ್ಕೆ ಒಳಗಾಗದಿರಿ. ಪೋಷಕರು ಮನೆಯಲ್ಲಿ ಮಕ್ಕಳಿಗೆ ಸಂಸ್ಕಾರ ಕಲಿಸಬೇಕು, ನಂತರ ಶಾಲೆಯಲ್ಲಿ ಅದು ಮುಂದುವರೆಯಬೇಕು ಎಂದ ಅವರು, ವಿದ್ಯೆಗಿಂತ ವ್ಯಕ್ತಿತ್ವ ನಿರ್ಮಾಣ ಅಗತ್ಯವೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎನ್.ರಾಮಚಂದ್ರ ಮಾತನಾಡಿ, ಮಕ್ಕಳಲ್ಲಿನ ಸುಪ್ತ ಪ್ರತಿಭೆ ಹೊರತರಲು ಇದೊಂದು ಉತ್ತಮ ವೇದಿಕೆಯಾಗಿದ್ದು, ನಿಮ್ಮ ಗುರಿ ಶೈಕ್ಷಣಿಕ ಸಾಧನೆಯಾಗಿರಲಿ ಎಂದು ಸಲಹೆ ನೀಡಿದರು.ಪಠ್ಯದಷ್ಟೇ ಪಠ್ಯೇತರ ಪ್ರತಿಭೆ, ಕೌಶಲ್ಯ ಅಭಿವೃದ್ಧಿಗೂ ಆದ್ಯತೆ ನೀಡಬೇಕಾಗುತ್ತದೆ. ಈ ನಿಟ್ಟಿನಲ್ಲಿ ಪ್ರೌಢಶಾಲೆಯಲ್ಲಿ ಖಾಸಗಿ ಶಾಲೆಗಳಿಗಿಂತ ಉತ್ತಮ ಸೌಲಭ್ಯ.ಶಿಕ್ಷಣ ನೀಡಲಾಗುತ್ತಿದೆ. ಈ ಸುತ್ತಮುತ್ತಲ ಗ್ರಾಮಗಳ ಮಕ್ಕಳು ಇದರ ಸದುಪಯೋಗ ಪಡೆಯಬೇಕು ಎಂದರು.

ಶಾಲೆಯ ಮುಖ್ಯಶಿಕ್ಷಕ ಬಿ.ಎಂ. ಮುನಿರಾಮಯ್ಯ ಮಾತನಾಡಿ, ಗ್ರಾಮೀಣ ಶಾಲೆ ಎಂಬ ಕೀಳರಿಮೆ ತೊರೆದು ಸಾಧನೆಗಾಗಿ ಮುನ್ನುಗ್ಗಿ ಎಂದು ಸಲಹೆ ನೀಡಿ, ಅಬ್ದುಲ್ ಕಲಾಂ ಅವರ ಆಶಯದಂತೆ ಕನಸು ಕಾಣಿ, ಯೋಚಿಸಿ, ಕೆಲಸ ಮಾಡಿ ಜೀವನದಲ್ಲಿ ಸಾಧಕರಾಗಿ ಹೊರಹೊಮ್ಮಿ ಎಂದು ಕಿವಿಮಾತು ಹೇಳಿ. ನಮ್ಮ ಪ್ರೌಢಶಾಲೆಯಲ್ಲಿ ಟೀಂ ವರ್ಕ್‌ನಿಂದಾಗಿ ಇಂದು ಸುಸಜ್ಜಿತ ಎಲ್ಲಾ ಸೌಲಭ್ಯಗಳು ಇಲ್ಲಿವೆ ಎಲ್ಲಾ ಶಿಕ್ಷಕರ ಸಹಕಾರಿದಿಂದ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲೂ ನಾವು ಸಾಧನೆ ಮಾಡಲಿದ್ದೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯರನ್ನು ಪೂರ್ಣಕುಂಭದೊಂದಿಗೆ ಹೆಣ್ಣು ಮಕ್ಕಳು ಸೀರೆಯುಟ್ಟು ಸಂಭ್ರಮದಿಂದ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮಕ್ಕಳಿಂದ ನಡೆದ ನೃತ್ಯ ಪ್ರದರ್ಶನಗಳನ್ನೊಳಗೊಂಡ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದಿದ್ದು, ಮನಮೋಹಕವಾಗಿತ್ತು. ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಸಂಘದ ಉದ್ಘಾಟನೆ ಅಂಗವಾಗಿ ಮಕ್ಕಳಿಗೆ ಹಬ್ಬದೂಟ ಬಡಿಸಲಾಯಿತು. ಹಾಗೂ ಶಾಲೆಯ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು.

ಐದು ಚಿನ್ನದ ಪದಕ ಪಡೆದ ಚಂದನಾ.ರಾಜ್ಯ ಶಾಲಾ ಶಿಕ್ಷಣ ಬೋಧಕ.ಬೋಧಕೇತರ ನೌಕರರ ಸಂಘದ ಅಧ್ಯಕ್ಷ ಎಸ್.ಚೌಡಪ್ಪ, ಉಪಾಧ್ಯಕ್ಷೆ ಬಿ.ಎ.ಕವಿತಾ,ಕಾರ್ಯಾಧ್ಯಕ್ಷ ಗಿರೀಶ್ ಕುಮಾರ್, ಮಂಜುಳಾ, ಪುಷ್ಪಾ ನೌಕರರ ಸಂಘದ ಖಜಾಂಚಿ ವಿ.ಮುರಳಿ ಮೋಹನ್ ಮತ್ತಿತರರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮುರಳೀಧರ್, ತಾಪಂ ಮಾಜಿ ಅಧ್ಯಕ್ಷ ಎಂಎಸ್ ಶ್ರೀನಿವಾಸರೆಡ್ಡಿ,ಜೆಡಿಎಸ್ ಪ್ರಧಾನ ಕಾರ್ಯದರ್ಶಿ ರಘುಪತಿರೆಡ್ಡಿ, ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷಜಗನ್ನಾಥ್, ಶಿಕ್ಷಕ ಸಂಘದ ಮುಖಂಡರಾದವೆಂಕಟಗಿರಿಯಪ್ಪ. ಓಬಳರೆಡ್ಡಿ, ವೈದ್ಯಾಧಿಕಾರಿ ಡಾ.ಸುನಿತಾ, ಪ್ರಾಂಶುಪಾಲ ನಾರಾಯಣ ಸ್ವಾಮಿ, ಗ್ರಾ.ಪಂ ಅಧ್ಯಕ್ಷೆ ಪುಷ್ಪಾ, ಪಿಡಿಒ ರಮೇಶ್.ಎಸ್‌ಡಿಎಂಸಿ ಸದಸ್ಯ ಅನಂತಪದ್ಮನಾಭಯ್ಯ, ರಮೇಶ್ ಮತ್ತಿತರರನ್ನು ಸನ್ಮಾನಿಸಲಾಯಿತು.



# ಭಾರತದ ಪ್ರಸಿದ್ಧ ದ್ವಾದಶ ಜ್ಯೋತಿರ್ಲಿಂಗಗಳ ದರ್ಶನ



**ನಾಗಮಂಗಲ:** ಶ್ರೀ ಕ್ಷೇತ್ರದ ಆದಿಶಕ್ತಿ ಭವನ, ಆದಿಚುಂಚನಗಿರಿ ಆವರಣದಲ್ಲಿ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ, ನಾಗಮಂಗಲ, ಮೈಸೂರು ಉಪವಲಯ ವತಿಯಿಂದ ಆಯೋಜಿಸಲಾಗಿರುವ ಭಾರತದ ಪ್ರಸಿದ್ಧ ದ್ವಾದಶ ಜ್ಯೋತಿರ್ಲಿಂಗಗಳ ದರ್ಶನ ಹಾಗೂ 21 ಅಡಿ ಎತ್ತರದ ಐಇಆ ಪ್ರಕಾಶಮಯ ಶಿವಲಿಂಗ ದರ್ಶನ ಉದ್ಘಾಟನೆ ಮಾಡಲಾಯಿತು


ತಾಲ್ಲೂಕಿನ ಆದಿಚುಂಚನಗಿರಿಯಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆ ವತಿಯಿಂದ 21ಅಡಿ ಎತ್ತರದ ಶಿವಲಿಂಗ ದರ್ಶನ ಉದ್ಘಾಟನೆಯನ್ನು ಪರಮಪೂಜ್ಯ ಮಹಾಸ್ವಾಮೀಜಿಗಳವರು ನೆರವೇರಿಸಿ ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು ಶ್ರೀ ಕ್ಷೇತ್ರ ಆದಿಚುಂಚನಗಿರಿ ಹಾಗೂ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

# ಸಚಿವರಿಗೆ ಶಾಸಕರಿಗೆ ಧನ್ಯವಾದ ಅರ್ಪಿಸಿದ ವೈದ್ಯಾಧಿಕಾರಿ

**ಮಾಲೂರು:** 2025-26 ನೇ ಸಾಲಿನ ಬಜೆಟ್‌ನಲ್ಲಿ ಶಾಸಕರ ಅವಿರತ ಪ್ರಯತ್ನದ ಫಲವಾಗಿ ನಮ್ಮ ಮಾಲೂರು ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ಅನುದಾನ ನೀಡಿರುವ ಘನ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಜಿಲ್ಲಾ ಉಸ್ತುವಾರಿ ಬೈರತಿ ಸುರೇಶ್ ರವರಿಗೆ ತಾಲ್ಲೂಕಿನ ಶಾಸಕರಾದ ಕೆ ವೈ ನಂಜೇಗೌಡ ರವರಿಗೆ ತುಂಬು ಹೃದಯದಿಂದ ಧನ್ಯವಾದಗಳನ್ನು ತಿಳಿಸುವುದಾಗಿ ವೈಧ್ಯಾಧಿಕಾರಿ ಡಾ.ವಸಂತ್ ತಿಳಿಸಿದರು.

ಪಟ್ಟಣದಲ್ಲಿ ದಿನೇದಿನೇ ಜನಸಂಖ್ಯೆ ಹೆಚ್ಚಾದಂತೆ ಸರಕಾರಿ ಸಾರ್ವಜನಿಕರ ಆಸ್ಪತ್ರೆಗೆ ಮೂಲ ಭೂತ ಸೌಕರ್ಯಗಳು ಸೇರಿದಂತೆ ವಿಶಾಲವಾದ ಕಟ್ಟಡ ಅವಶ್ಯಕತೆ ಇದೆ. ಪ್ರಸ್ತುತ ಇರುವ ಕಟ್ಟಡ ಸುಮಾರು ವರ್ಷ ಗಳಾಗಿದ್ದು, ಈಗಾಗಲೇ ಶಾಸಕ ಕೆ.ವೈ.ನಂಜೇಗೌಡ ರು ಮಾಲೂರು- ಟೇಕಲ್ ಮುಖ್ಯ ರಸ್ತೆಯಲ್ಲಿ 10 ಎಕರೆ ಭೂಮಿಯನ್ನು ಗುರುತಿಸಿದ್ದು, ತಹಶಿಲ್ದಾರ್ ಅವರ ಮುಖಾಂತರ ಪರಿಶೀಲನೆ ನಡೆಯುತ್ತಿದೆ. ,ಇನ್ನೂ ನೂತನ ಕಟ್ಟಡ ನಿರ್ಮಾಣವಾದರೆ ಹಲವಾರು ರೀತಿಯ ಸೇವೆಗಳು ತಾಲ್ಲೂಕಿನ ಬಡ ಜನತೆಗೆ ಹಾಗೂ ಸಾರ್ವಜನಿಕರಿಗೆ ದೊರೆಯಲಿದೆ. ಇದಕ್ಕೆ ಶ್ರಮವಹಿಸಿದ ನಮ್ಮ ಶಾಸಕ ಕೆ ವೈ ನಂಜೇಗೌಡ ರವರಿಗೆ ಮತ್ತೊಮ್ಮೆ ಹೃದಯಪೂರ್ವಕ ಧನ್ಯವಾದಗಳನ್ನು ಸಲ್ಲಿಸುವುದಾಗಿ ಹೇಳಿದರು.



ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ.ಶ್ರೀನಿವಾಸ್, ಡಾ.ಮಂಜುನಾಥ್, ಡಾ.ಸುಹಾಸ್, ಪ್ರವೀಣ್, ಸರಸ್ವತಮ್ಮ, ನಳಿನಿ, ರೇಣುಕಾ, ಸೌಮ್ಯ, ಕೃಷ್ಣಪ್ಪ, ಅರುಣಾ, ಗಿರಿಜಾ, ರೂಪ, ಮುರುಳಿ, ಮಂಜುನಾಥ್, ರಘು, ಮಹೇಶ್ ಹಾಗೂ ಸಿಬ್ಬಂದಿ ವರ್ಗದವರು, ಹಾಜರಿದ್ದರು.

# ನಶೆ ಮುಕ್ತ ಕರ್ನಾಟಕ ಜಾಗೃತಿ ಮ್ಯಾರಥಾನ್ ಓಟ ಆಯೋಜನೆ

**ರಾಮನಗರ:** ನಶೆ ಮುಕ್ತ ಕರ್ನಾಟಕ, ಫಿಟ್‌ನೆಸ್ ಫಾರ್ ಆಲ್ ಹಾಗೂ ನಮ್ಮ ಪೊಲೀಸ್ ನಮ್ಮ ಹೆಮ್ಮೆ ಘೋಷ ವಾಕ್ಯದಡಿ ಮಾದಕವಸ್ತು ಮುಕ್ತ ಕರ್ನಾಟಕ ಜಾಗೃತಿ ಮ್ಯಾರಥಾನ್ ಓಟವನ್ನು ಹಮ್ಮಿಕೊಂಡಿದ್ದ ರಾಮನಗರ ಜಿಲ್ಲಾ ಪೊಲೀಸರೊಂದಿಗೆ ಮಹಿಳೆಯರು ಸೇರಿದಂತೆ ನೂರಾರು ನಾಗರಿಕರು ಹೆಜ್ಜೆ ಹಾಕಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 5 ಹಾಗೂ 10 ಕಿಲೋಮೀಟರ್ ವಿಭಾಗದ ಮ್ಯಾರಥಾನ್ ಓಟಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಮಾದಕ ವಸ್ತುಗಳ ದುಷ್ಪರಿಣಾಮ, ಸಂಚಾರ ನಿಯಮಗಳ ಜಾಗೃತಿ ಸೇರಿದಂತೆ ಪೊಲೀಸರ ಮೇಲೆ ನಂಬಿಕೆ ಇರಲಿ ಎಂದು ಮ್ಯಾರಥಾನ್ ಮೂಲಕ ಅರಿವು ಮೂಡಿಸಲಾಯಿತು.

ಮ್ಯಾರಥಾನ್ ಓಟಕ್ಕೆ ಚಾಲನೆ ನೀಡಿ ಮಾತನಾಡಿದ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಮಾತನಾಡಿ ಸರ್ವರಿಗೂ ಆರೋಗ್ಯದ ಬಗ್ಗೆ ಕಾಳಜಿ ಇರಲಿ, ದೈಹಿಕ ಆರೋಗ್ಯಕ್ಕೆ ನಿಯಮಿತ ಓಟ, ವ್ಯಾಯಾಮ ಅಗತ್ಯ ಹಾಗೂ ಡ್ರಗ್ಸ್ ಫ್ರೀ ಕರ್ನಾಟಕ ಎಂಬ ಧ್ಯೇಯದೊಡನೆ ಮ್ಯಾರಥಾನ್ ಓಟವನ್ನು ಇಂದು ಪೊಲೀಸ್ ಇಲಾಖೆಯಿಂದ ಆಯೋಜಿಸಲಾಗಿದೆ ಎಂದು ಹೇಳಿದರು.

ಸಮಾಜದಲ್ಲಿ ಪ್ರತಿಯೊಂದಕ್ಕೂ ಪೊಲೀಸರು ಬೇಕು. ಆದರೆ ಪೊಲೀಸರ ಬಗ್ಗೆ ಹಲವು ರೀತಿಯ ಅಭಿಪ್ರಾಯ ಜನಸಾಮಾನ್ಯರಲ್ಲಿ ಇರುತ್ತದೆ. ಪೊಲೀಸ್ ಸ್ಟೇಷನ್ ಮೆಟ್ಟಿಲು ಹತ್ತಲು ಇಂದಿಗೂ ಎಷ್ಟೋ ಮಂದಿ ಭಯಪಡುತ್ತಾರಲ್ಲದೇ, ಕಸಿವಿಸಿ ಇರುತ್ತದೆ. ಇಂತಹ ಮನೋಭಾವನೆಯನ್ನ ಹೋಗಲಾಡಿಸುವ ಜೊತೆಗೆ ನಮ್ಮ ಪೊಲೀಸರು ನಮ್ಮ ಹೆಮ್ಮೆ ಎಂಬ ಭಾವನೆ ಮೂಡಿಸಲು ಈ ಮ್ಯಾರಥಾನ್ ಓಟ ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕ್ರೀಡೆಗಳು ಯಾವಾಗಲೂ ಮಾನವ ಜೀವನದ ಅತ್ಯಗತ್ಯ ಭಾಗವಾಗಿದೆ. ನಾನು ಸಹ ಕ್ರೀಡಾಪಟುವಾಗಿದ್ದು ವಾರಾಂತ್ಯದಲ್ಲಿ ಕ್ರಿಕೆಟ್ ಆಟವನ್ನು ಅಭ್ಯಾಸಿಸುತ್ತೇನೆ. ಪ್ರತಿಯೊಬ್ಬ ವ್ಯಕ್ತಿಯೂ ಯಾವುದಾದರೂ ಕ್ರೀಡೆಯನ್ನು ರೂಢಿಸಿಕೊಳ್ಳಬೇಕು. ಕ್ರೀಡೆ ಮನುಷ್ಯನ ದೈಹಿಕ ಸಾಮರ್ಥ್ಯದ ಜೊತೆಗೆ ಮಾನಸಿಕವಾಗಿ ಬಲಶಾಲಿಗೊಳಿಸುತ್ತದೆ. ಇಂದು ಯುವಸಮೂಹ ಮಾದಕವಸ್ತುಗಳ ದುಶ್ಚಟಕ್ಕೆ ಬಲಿಯಾಗುತ್ತಿದ್ದಾರೆ. ಅವರು ಕೆಟ್ಟವರಲ್ಲ, ಅಪರಾಧಿಗಳು ಸಹ ಅಲ್ಲ ಮಾದಕ ವ್ಯಸನಕ್ಕೆ ಬಲಿಯಾದವರನ್ನ ಸರಿದಾರಿಗೆ ತರಲು ಸ್ನೇಹಿತರು ಮತ್ತು ಪೋಷಕರು ಮುತುವರ್ಜಿವಹಿಸಬೇಕಿದೆ ಎಂದು ತಿಳಿಸಿದರು.




ಮಾದಕ ವಸ್ತು ಮಾರಾಟ ಜಾಲವನ್ನು ಮಟ್ಟಹಾಕಲು ಪೊಲೀಸರು ಬದ್ಧರಾಗಿದ್ದು, ಇಂದು ಮಾದಕದ್ರವ್ಯ ವ್ಯಸನಿಗಳ ಮೇಲೆ ಹೆಚ್ಚಾಗಿ ಪ್ರಕರಣ ದಾಖಲು ಮಾಡಿಕೊಳ್ಳುತ್ತಿಲ್ಲ. ಬದಲಾಗಿ ಅವರನ್ನು ರೋಗಿಗಳನ್ನಾಗಿ ಗುರುತಿಸಿ ದುಶ್ಚಟದಿಂದ ಮುಕ್ತರಾಗಲು ಪೊಲೀಸ್ ಇಲಾಖೆ ಸಹ ನೆರವು ನೀಡುತ್ತಿದೆ. ನಶೆ ಮುಕ್ತ ಕರ್ನಾಟಕ ಮಾಡಲು ಎಲ್ಲಾ ರೀತಿಯ ಪ್ಲೆಡ್ಲರ್ ಗಳನ್ನು ಮಟ್ಟ ಹಾಕುತ್ತೇವೆ. ಡ್ರಗ್ಸ್ ದಂಧೆಗೆ ಬ್ರೇಕ್ ಹಾಕಲು ಈ ವರ್ಷ ಅತ್ಯಧಿಕ ಪ್ರಕರಣ ದಾಖಲಿಸಲು ಚಿಂತಿಸಲಾಗಿದ್ದು, ಮಾದಕವಸ್ತು ಮಾರಾಟದ ಜಾಲವನ್ನು ಪೊಲೀಸ್ ಇಲಾಖೆ ಮಟ್ಟ ಹಾಕಲಿದೆ ಎಂದು ಹೇಳಿದರು.

ಜಿಲ್ಲಾ ಕ್ರೀಡಾಂಗಣದಿಂದ ಆರಂಭವಾದ 5 ಕಿಲೋಮೀಟರ್ ಮ್ಯಾರಥಾನ್ ಓಟ ಹಳೆ ಬೆಂಗಳೂರು ಮೈಸೂರು ರಸ್ತೆ, ಐಜೂರು ವೃತ್ತ, ಕೆಂಗಲ್ ಹನುಮಂತಯ್ಯ ವೃತ್ತದ ರೈಲ್ವೆ ಸೇಷನ್ ರಸ್ತೆಯಲ್ಲಿ ಸಾಗಿ ಎಂಜಿ ರಸ್ತೆ, ಕಾಮಣ್ಣನಗುಡಿ ಸರ್ಕಲ್, ವಾಟರ್ ಟ್ಯಾಂಕ್ ಸರ್ಕಲ್ ಮೂಲಕ ಜಿಲ್ಲಾ ಕ್ರೀಡಾಂಗಣ ತಲುಪಿದರೆ, ಜಿಲ್ಲಾ ಕ್ರೀಡಾಂಗಣದಿಂದ ಪ್ರಾರಂಭಗೊಂಡ 10 ಕಿಲೋಮೀಟರ್ ಮ್ಯಾರಥಾನ್ ಓಟ ಹಳೆ ಬೆಂಗಳೂರು ಮೈಸೂರು ಹೆದ್ದಾರಿಯಲ್ಲಿ ಸಾಗಿ ಜಿಲ್ಲಾಧಿಕಾರಿಗಳ ಮನೆ ತಲುಪಿ ಬಳಿಕ ಹಳೆ ಹೆದ್ದಾರಿ ಮೂಲಕ ಕ್ರೀಡಾಂಗಣಕ್ಕೆ ಮರಳಿತು. ಮ್ಯಾರಥಾನ್ ಸಾಗುವ ಮಾರ್ಗಗಳಲ್ಲಿ ಪೊಲೀಸರು ಮಾರ್ಗದರ್ಶನ ಮಾಡುವ ಜೊತೆಗೆ ಕುಡಿಯುವ ನೀರು, ಗ್ಲುಕೋಸ್ ವ್ಯವಸ್ಥೆ ಕಲ್ಪಿಸಿದ್ದರು. ಜಿಲ್ಲಾ ಕ್ರೀಡಾಂಗಣದಲ್ಲಿ ಮ್ಯಾರಥಾನ್ ಓಟಗಾರರಿಗೆ ಉಪಾಹಾರದ ವ್ಯವಸ್ಥೆ ಸಹ ಮಾಡಲಾಗಿತ್ತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಸಹ 5 ಕಿಲೋಮೀಟರ್ ಮ್ಯಾರಥಾನ್ ಪಾಲ್ಗೊಂಡು ಓಟಗಾರರಿಗೆ ಉತ್ತೇಜನ ನೀಡಿದರು. ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧಿಕ್ಷಕರಾದ ಟಿ.ವಿ.ಸುರೇಶ್, ರಾಮಚಂದ್ರಯ್ಯ ಡಿವೈಎಸ್‌ಪಿ, ದಿನಕರ್ ಶೆಟ್ಟಿ, ಕೆ.ಸಿ.ಗಿರಿ, ಪ್ರವೀಣ್, ರಘು, ಪೊಲೀಸ್ ವೃತ್ತ ನಿರೀಕ್ಷಕರಾದ ಕೃಷ್ಣ, ರಮೇಶ್, ವಸಂತ್, ಶೋಭಾ ಪೊಲೀಸ್ ಉಪ ನಿರೀಕ್ಷಕರಾದ ಅರ್ಜುನ್, ವೆಂಕಟೇಶ್, ಟಿ.ಟಿ.ಕೃಷ್ಣ, ಆಕಾಶ್, ಮಂಜುನಾಥ್ ಹೂಗಾರ್, ಮೋಹನ್ ಸೇರಿದಂತೆ ಕೆಂಗಲ್ ಹನುಮಂತಯ್ಯ ಸ್ಪೋರ್ಟ್ಸ್ ಕ್ಲಬ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಜೀ ಸಂಧಾನದಿಂದ ಬಾಂಧವ್ಯ ಬೆಳೆಯುತ್ತದೆ

ಶಿಡ್ಲಘಟ್ಟ: ನೆಮ್ಮದಿಯ ಹಾಗೂ ಶಾಂತಿಯುತ ಬದುಕಿಗೆ ನ್ಯಾಯಾಲಯದಲ್ಲಿ ಕಕ್ಷಿದಾರರು, ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪ್ರಕರಣಗಳನ್ನು ರಾಜೀ ಮಾಡಿಕೊಳ್ಳುವುದರಿಂದ ಪರಸ್ಪರ ವೈಷಮ್ಯ ದೂರವಾಗಿ ಬಾಂಧವ್ಯ ಬೆಳೆಯುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರಾದ ಮೊಹಮ್ಮದ್ ರೋಷನ್ ಷಾ ಅವರು ಹೇಳಿದರು.




ನಗರದ ದಿಬ್ಬೂರಹಳ್ಳಿ ರಸ್ತೆಯಲ್ಲಿರುವ ಹಿರಿಯ ಸಿವಿಲ್ ನ್ಯಾಯಾಲಯ, ಪ್ರಧಾನ ಸಿವಿಲ್ ನ್ಯಾಯಾಲಯ ಮತ್ತು ಅಪರ ಸಿವಿಲ್ ನ್ಯಾಯಾಲಯಗಳಲ್ಲಿ "ಲೋಕ ಅದಾಲತ್" ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಹಳಷ್ಟು ಮಂದಿ ನ್ಯಾಯ ಸಿಗುತ್ತದೆ ಎಂದು ವರ್ಷಗಟ್ಟಲೇ ಕೆಲಸ ಕಾರ್ಯಗಳನ್ನು ಬಿಟ್ಟು, ಹಣ ಖರ್ಚು ಮಾಡಿ ನ್ಯಾಯಾಲಯಕ್ಕೆ ಅಲೆದಾಡುತ್ತಾರೆ ಇದರಿಂದ ಕುಟುಂಬದಲ್ಲೂ ಹಣದ ಮುಗ್ಗಟ್ಟು ಹೆಚ್ಚಾಗಲಿದೆ ದಿನನಿತ್ಯದ ಕೆಲಸಗಳು ನಷ್ಟವಾಗುತ್ತವೆ, ನ್ಯಾಯದ ತೀರ್ಪು ಸಿಗುವುದು ವಿಳಂಬವಾಗುತ್ತದೆ ಜತೆಗೆ ಸಿಗುವ ತೀರ್ಪು ನಿಮ್ಮ ಪರವಾಗಿ ಇರಬೇಕೇಂದೇನಿಲ್ಲ ಆಗ ಮಾನಸಿಕವಾಗಿ ಜರ್ಜರಿತರಾಗಿ ಬದುಕಲ್ಲಿ ನಿರಾಶೆಯ ಕಾರ್ಮೋಡ ಹೆಚ್ಚುತ್ತದೆ ಎಂದು ಹೇಳಿದರು.

ನೆಮ್ಮದಿಯ ಜೀವನಕ್ಕೆ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಿ.

ಬಹಳಷ್ಟು ಪ್ರಕರಣಗಳಲ್ಲಿ ಆಸ್ತಿ ಕುರಿತಾಗಿ ಕುಟುಂಬದವರ ರಾಜಿ ಮಾಡಿಸಿದ್ದಾಗಿದೆ ಪರಸ್ಪರ ವೈಮನಸ್ಯ ಇರದೆ, ವಿಶ್ವಾಸ ಮುಂದುವರಿಕೆ, ಹಣದ ಉಳಿತಾಯ ಮೂಲಕ ನ್ಯಾಯ ಪಡೆಯುತ್ತಿರುವುದು ಸಂತೋಷದ ಸಂಗತಿ,ರಾಜಿ ಮೂಲಕ ನೆಮ್ಮದಿ, ಸಂತೋಷ, ಪರಿಹಾರ ಪಡೆಯಲು ಸಾಧ್ಯ ಎನ್ನುವುದಕ್ಕೆ ಈ ದಿನ ಹಾಗೂ ಈ ಹಿಂದಿನ ಅದಾಲತ್‌ನಲ್ಲಿ ಇತ್ಯರ್ಥಪಡಿಸಿದ ಕೇಸುಗಳು ಸಾಕ್ಷಿಯಾಗಿವೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಮೊಹಮ್ಮದ್ ರೋಷನ್ ಷಾ ಅವರು ಹೇಳಿದರು.

ಲೋಕ ಅದಾಲತ್‌ನಲ್ಲಿ 406 ಪ್ರಕರಣಗಳು ಇತ್ಯರ್ಥಗೊಂಡು, 1.56 ಕೋಟಿ ರೂ.ಗಳು ಸಂದಾಯವಾಗಿದೆ. ಇದೇ ವೇಳೆ 92 ಮಂದಿಗೆ ಜನನ ಪ್ರಮಾಣಪತ್ರ ವಿತರಿಸಲಾಯಿತು. 2 ವಿಚ್ಛೇದನ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಯಿತು.

ಪ್ರಧಾನ ಸಿವಿಲ್ ನ್ಯಾಯಾಧೀಶೆ ಜೆ.ಪೂಜಾ ಅವರು ಹಲವು ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿದರು. ಸಂಧಾನಕಾರರಾಗಿ ವಕೀಲ ಎಸ್.ಕೆ.ನಾಗರಾಜ್, ಬಿ.ಕೆ.ವೆಂಕಟೇಶ್ ಕಾರ್ಯನಿರ್ವಹಿಸಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ಕಾರ್ಯದರ್ಶಿ ಭಾಸ್ಕರ್ ಮತ್ತಿತರರು ಹಾಜರಿದ್ದರು.

## ಅಧಿಕಾರಿಗಳ ಪ್ರಾಮಾಣಿಕತೆಯಿಂದ ಅಭಿವೃದ್ಧಿ ಸಾಧ್ಯ

**ಮುಳಬಾಗಿಲು:** ನಮ್ಮ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಿದಾಗ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಅರಿತು ಎಲ್ಲಾ ಒಳ್ಳೆಯ ಅಧಿಕಾರಿಗಳನ್ನು ತಂದು ಈಗ ತಾಲ್ಲೂಕು ಉನ್ನತ ಅಭಿ ವೃದ್ಧಿಗೆ ಒತ್ತು ನೀಡುತ್ತಾ, ಅದೇರೀತಿ ಶಿಕ್ಷಣ ಇಲಾಖೆಯಲ್ಲಿ ಒಳ್ಳೆಯ ಅಧಿಕಾರಿಗಳೊಂದಿಗೆ ಎಲ್ಲಾ ಶಿಕ್ಷಕರ ಸಹಕಾರ ದಿಂದ ಈ ವರ್ಷ ಜಿಲ್ಲೆಯಲ್ಲಿ ನಮ್ಮ ತಾಲ್ಲೂಕು ಪರೀಕ್ಷೆ ಫಲಿತಾಂಶ ದಲ್ಲಿ ಪ್ರಥಮ ತರುವುದೇ ನಮ್ಮೆಲರ ಆದ್ಯ ಕರ್ತವ್ಯ ಎಂದು ಶಾಸಕರಾದ ಸಮೃದ್ಧಿ ವಿ ಮಂಜುನಾಥ್ ತಿಳಿಸಿದರು.




ತಾಲೂಕಿನ ತಿಮ್ಮರಾವುತ್ತನಹಳ್ಳಿ ಸರ್ಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಹಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮ ದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಸಮಾಜಕ್ಕೆ ದಾರಿ ದೀಪವಾದ ಗುರುಗಳನ್ನು ಈವತ್ತು ಗುರುವಂದನಾ ಕಾರ್ಯ ಕ್ರಮದ ಮೂಲಕ ಸನ್ಮಾನ ಮಾಡಿ ಗೌರವಿಸುವುದು ಒಳ್ಳೆಯ ಬೆಳವಣಿಗೆ ಇದನ್ನು ಈಗೆ ಮುಂದುವರುಸಿ ಶಿಕ್ಷಕರಿಗೆ ಒಳ್ಳೆಯ ಕೊಡುಗೆ ನೀಡಿದ ಹಾಗೆ ಎಂದು ಅಭಿಪ್ರಾಯಪಟ್ಟರು.

ತಾಲೂಕಿನ ಸರ್ಕಾರಿ ಶಾಲಾ ಶಿಕ್ಷಕರು ತಮ್ಮ ತಮ್ಮ ಪ್ರತಿಷ್ಠೆ ಬಿಟ್ಟು ಎಲ್ಲರೂ ಒಂದಾಗಿ ತಾಲೂಕಿನ ಶಿಕ್ಷಣ ಗುಣಮಟ್ಟ ಹೆಚ್ಚಿಸುವ ಹಾಗೂ ಒಳ್ಳೆಯ ಫಲಿತಾಂಶ ತರುವ ಕಡೆ ಕೆಲಸ ಮಾಡಿ ನಮ್ಮ ತಾಲೂಕಿಗೆ ಕೀರ್ತಿ ತರಬೇಕೆಂದು ಸಲಹೆ ನೀಡಿದರು.


ಈ ಗುರುವಂದನಾ ಕಾರ್ಯಕ್ರಮವನ್ನು ಆಯೋಜಿಸಿರುವ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ರಾದ ಜಯರಾಮರೆಡ್ಡಿ ಇನ್ನು ಹೆಚ್ಚಿನ ರೀತಿ ಸರ್ಕಾರಿ ಶಾಲೆಗಳ ಅಭಿರುದ್ದಿಗೆ ಸಹಕಾರ ನೀಡಲಿ, ಅವರಿಗೆ ಒಳ್ಳೆಯ ದಾಗಲಿ ಎಂದು ಶುಭ ಹಾರೈಸಿ ಧನ್ಯವಾದಗಳು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸೊನ್ನವಾಡಿ, ಮಲ್ಲನಾಯಕನಹಳ್ಳಿ, ತಿಮ್ಮರಾವುತ್ತನಹಳ್ಳಿ ಗ್ರಾಮ ಪಂಚಾಯಿತಿಗಳಿಗೆ ಸೇರಿದ ಎಲ್ಲಾ ಸರ್ಕಾರಿ ಶಾಲಾ ಶಿಕ್ಷಕರನ್ನು ಗುರುವಂದನಾ ಕಾರ್ಯಕ್ರಮದಲ್ಲಿ ಉಡುಗೊರೆ ನೀಡಿ ಸನ್ಮಾನ ಮಾಡಿ ಗೌರವಿಸಲಾಯಿತು.

ಬಿ. ಇ. ಓ, ರಾಮಚಂದ್ರಪ್ಪ, ಎಂ. ಎಸ್. ಶ್ರೀನಿವಾಸ್ ರೆಡ್ಡಿ, ರಘುಪತಿರೆಡ್ಡಿ, ಮಾಜಿ ಝೆಡ್. ಪಿ. ಶಂಕರಪ್ಪ, ಅಕ್ಷರ ದಾಸೋಹ ಆನಂದ, ಜಯರಾಮರೆಡ್ಡಿ, ವೆಂಕಟಗಿರಿಯಪ್ಪ , ಬಿ. ಎಡ್. ನಾರಾಯಣಸ್ವಾಮಿ, ಜಗನ್ನಾಥ್, ಓಬಳ ರೆಡ್ಡಿ, ಮೋಹನ್ ರೆಡ್ಡಿ, ಪಿ. ವಿ. ಶಂಕರಪ್ಪ, ಎಸ್ ಡಿ. ಎಂ. ಸಿ. ಅಧ್ಯಕ್ಷ ಸೋಮಪ್ಪ, ಶಾಲೆಯ ಭೂದಾನಿ ಗೋವಿಂದಪ್ಪ, ಮುಖ್ಯ ಶಿಕ್ಷಕ ಮಂಜುನಾಥ್, ಸುಬ್ಬರೆಡ್ಡಿ, ಸನ್ಯಾಸನಹಳ್ಳಿ ಶಿಕ್ಷಕ ಚಂದ್ರ ಶೇಖರ್, ಅನೇಕ ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು, ಹಳೆ ವಿದ್ಯಾರ್ಥಿಗಳು,

## ರಸಪ್ರಶ್ನೆ ಸ್ಪರ್ಧೆ: ಧನುಷ್ ರಾಜ್ಯಮಟ್ಟಕ್ಕೆ ಆಯ್ಕೆ

**ಶಿಡ್ಲಘಟ್ಟ:** ರಾಷ್ಟ್ರೀಯ ಆವಿಷ್ಕಾರ ಅಭಿಯಾನ ಯೋಜನೆಯಡಿ ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿದ ವಿಭಾಗ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ತಾಲ್ಲೂಕಿನ ಜಂಗಮಕೋಟೆ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ 8ನೇ ತರಗತಿಯ ವಿದ್ಯಾರ್ಥಿ ಧನುಷ್ ಶ್ರೇಷ್ಠ ಸಾಧನೆ ತೋರಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.



ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡ ವಿದ್ಯಾರ್ಥಿಗಳಿಗೆ ತಾಲ್ಲೂಕು, ಜಿಲ್ಲಾ ಮತ್ತು ವಿಭಾಗ ಮಟ್ಟದಲ್ಲಿ ಸ್ಪರ್ಧೆ ನಡೆಸಲಾಗಿದ್ದು, ಎಲ್ಲಾ ಹಂತಗಳಲ್ಲಿ ಧನುಷ್ ಅತ್ಯುತ್ತಮ ಪ್ರದರ್ಶನ ನೀಡಿದ್ದರು,ಅಂತಿಮವಾಗಿ ವಿಭಾಗ ಮಟ್ಟದಲ್ಲಿ ಶ್ರೇಷ್ಠ ಅಂಕ ಗಳಿಸಿ ರಾಜ್ಯಮಟ್ಟದ ಸ್ಪರ್ಧೆಗೆ ಪ್ರವೇಶ ಪಡೆದಿದ್ದಾರೆ.

ಈ ಯಶಸ್ಸಿಗೆ ಖುಷಿಯಾಗಿರುವ ಧನುಷ್ ಅವರನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿ.ಎ.ನರೇಂದ್ರಕುಮಾರ್, ಬಿ.ಆರ್.ಪಿ ಕೆ.ಮಂಜುನಾಥ್, ಆರ್.ವೇಣುಮಾಧವಿ, ಸಿ.ಆರ್.ಪಿ ರಮೇಶ್‌ಕುಮಾರ್, ಮುಖ್ಯಶಿಕ್ಷಕಿ ಮಂಜುಳಮ್ಮ ಮಾರ್ಗದರ್ಶಿ ಶಿಕ್ಷಕ ಮುರಳಿಮೋಹನ್ ಹಾಗೂ ತಾಲ್ಲೂಕು ಪ್ರೌಢಶಾಲಾ ಸಹಶಿಕ್ಷಕರ ಸಂಘದ ಕಾರ್ಯದರ್ಶಿ ಎಚ್.ಎಸ್. ರುದ್ರೇಶಮೂರ್ತಿ ಸೇರಿದಂತೆ ಹಲವಾರು ಶಿಕ್ಷಕರು ಅಭಿನಂದಿಸಿದರು.

## ಆಮೆಗತಿಯಲ್ಲಿ ರಸ್ತೆ ಕಾಮಗಾರಿ: ಸಾರ್ವಜನಿಕರಿಂದ ಪ್ರತಿಭಟನೆ

**ಮುಳಬಾಗಿಲು:** ತಾಲ್ಲೂಕಿನ ಎನ್. ವಡ್ಡಹಳ್ಳಿ ಗ್ರಾಮದ ಬಳಿ ನಡೆಯುತ್ತಿರುವ ರಸ್ತೆ ಕಾಮಗಾರಿ ಆಮೆಗತಿಯಲ್ಲಿ ನಡೆಯುತ್ತಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ವಡ್ಡಹಳ್ಳಿ, ಪದ್ಮಘಟ್ಟ, ಚಿಕ್ಕಪದ್ಮಘಟ್ಟ ಗ್ರಾಮಸ್ಥರು ಹಾಗೂ ಸಾರ್ವಜನಿಕರು ರಸ್ತೆಗಿಳಿದು ಪ್ರತಿಭಟನೆ ನಡೆಸಿರುವುದು.

ಸರ್ವೀಸ್ ರಸ್ತೆ, ಪಾದಚಾರಿ ರಸ್ತೆ, ಚರಂಡಿ ವ್ಯವಸ್ಥೆಯಿಲ್ಲದೆ ಹೆಚ್ಚು ವಾಹನಗಳು ಸಂಚರಿಸುವುದರಿಂದ ರಸ್ತೆಬದಿಯಲ್ಲಿರುವ ನಿವಾಸಿಗಳಿಗೆ ಗಂಟಲು ಸಂಭಂದಿತ ಕಾಯಿಲೆ ಹಾಗೂ ಶಾಲಾ, ಕಾಲೇಜು ಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿರುವುದರಿಂದ



.ಗುತ್ತಿಗೆದಾರರನ್ನು ಸ್ಥಳಕ್ಕೆ ಕರೆಯಿಸಿ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗಳನ್ನು ವಿವರಿಸಲಾಯಿತು. ಗುತ್ತಿಗೆದಾರರು ಮಂಗಳವಾರದೊಳಗೆ ಸರ್ವೀಸ್ ರಸ್ತೆ ಕಾಮಗಾರಿ ಮಾಡುವುದಾಗಿ ತಿಳಿಸಿ ಬ್ರಿಡ್ಜನ್ನು ಅತಿಶೀಘ್ರವಾಗಿ ಮುಗಿಸುವುದಾಗಿ ನಂಗಲಿ ಪೋಲೀಸ್ ಆರಕ್ಷಕ ಉಪನಿರೀಕ್ಷಕರು ಅರ್ಜುನ್ ಗೌಡ ರವರ ಸಮಕ್ಷಮದಲ್ಲಿ ಗುತ್ತಿಗೆದಾರರು ಮಾತು ನೀಡಿದ ನಂತರ ಪ್ರತಿಭಟನೆ ಹಿಂಪಡೆದು ಮನವಿ ಪತ್ರ ನೀಡಿ ನಿಗದಿತ ಸಮಯದಲ್ಲಿ ಕಾಮಗಾರಿ ಪೂರ್ಣ ಗೊಳಿಸದಿದ್ದಲ್ಲಿ ಹೆದ್ದಾರಿ ಬಂದ್ ಮಾಡಿ ಪ್ರತಿಭಟಿಸುವುದಾಗಿ ಗ್ರಾಮಸ್ಥರು, ಸಾರ್ವಜನಿಕರು ಎಚ್ಚರಿಕೆ ನೀಡಿರುತ್ತಾರೆ.

ವಡ್ಡಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರು ವೆಂಕಟೇಶಪ್ಪ, ನಂಗಲಿ ಕಿಶೋರ್. ಪದ್ಮಘಟ್ಟ ಗ್ರಾಮ ಪಂಚಾಯಿತಿ ಸದಸ್ಯರು ಧರ್ಮ, ಎಂ.ಜಿ.ಗೋಪಾಲ್, ಚಂದ್ರ, ಗೌಡ, ಶಿವಣ್ಣ ಲಕ್ಷ್ಮೀನಾರಾಯಣ, ಹೋಟೆಲ್ ಬಾಬು, ಚಂದ್ರಣ್ಣ ಹಾಗೂ ಗ್ರಾಮಸ್ಥರಿದ್ದರು

## ಮಹಿಳೆಯರು ಕೀಳರಿಮೆ ಮನಸ್ಥಿತಿ ಬದಲಿಸಿಕೊಳ್ಳಬೇಕು

**ಶಿಡ್ಲಘಟ್ಟ:** ಮಹಿಳೆ ಅಡುಗೆ ಕೋಣೆಗೆ ಮಾತ್ರ ಸೀಮಿತವೆಂಬ ಭಾವನೆ ಪ್ರಸ್ತುತ ಬದಲಾಗಿದ್ದು, ಸಮಾನ ಅವಕಾಶ ಕಲ್ಪಿಸಿದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ತಮ್ಮದೇ ಆದ ಮೈಲಿಗಲ್ಲು ಸಾದಿಸುವರು ಈಗಾಗಲೇ ಹಲವು ಕ್ಷೇತ್ರಗಳಲ್ಲಿ ಮಹಿಳೆಯರು ಸಾಧನೆ ಮಾಡಿದ್ದು, ಅಂತಹ ಮಹಿಳೆಯರ ಸ್ಫೂರ್ತಿಯಂತೆ ಮುನ್ನಡೆದರೆ ಯಶಸ್ಸು ಸಾಧ್ಯವಾಗಲಿದೆ ಎಂದು ಶ್ರೀಸಾಯಿ ಇಂಟರ್‌ನ್ಯಾಷನಲ್ ವಸತಿ ಶಾಲೆಯ ಅಧ್ಯಕ್ಷೆ ದೀಪಾಮಂಜುನಾಥ್ ತಿಳಿಸಿದರು.

ತಾಲ್ಲೂಕಿನ ಬಶೆಟ್ಟಿಹಳ್ಳಿಯಲ್ಲಿನ ಶ್ರೀಸಾಯಿ ಇಂಟರ್ ನ್ಯಾಷನಲ್ ವಸತಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಹಾಗೂ 'ತಾಯಂದಿರ ಕ್ಲಬ್' ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಪುರುಷರಂತೆ ಸಮಾನ ಹಕ್ಕುಳ್ಳವರಾಗಿದ್ದು, ಮಹಿಳೆಯರು ಕೀಳರಿಮೆ ಮನಸ್ಥಿತಿ ಬದಲಿಸಿಕೊಳ್ಳಬೇಕು ಈ ನಿಟ್ಟಿನಲ್ಲಿ ತಾಂತ್ರಿಕ ಯುಗದ ಮಹಿಳೆಗೂ ಹೊಂದಿಕೊಳ್ಳಬೇಕು. ಮಹಿಳೆಯರು ತನ್ನ ಮನೆಯ ಜೊತೆಗೆ ಗ್ರಾಮಗಳಿಗೆ ಬೆಳಕಾಗಬೇಕಾಗಬೇಕು ಎಂದರು.

ಶ್ರೀಸಾಯಿ ಇಂಟರ್‌ನ್ಯಾಷನಲ್ ವಸತಿ ಶಾಲೆಯ ಕಾರ್ಯದರ್ಶಿ ಎಂ. ಮಂಜುನಾಥ್ ಮಾತನಾಡಿ, ಹೆಣ್ಣೆಂದರೆ ಪ್ರಕೃತಿ, ಸಂಸ್ಕೃತಿ, ಜಗತ್ತಿನ ಮಹಾನ್ ಶಕ್ತಿಯಾಗಿದ್ದು, ಮನೆ ಹಾಗೂ ಸಮಾಜದ ಬೆಳಕು ಎಲ್ಲಿ ಹೆಣ್ಣನ್ನು ಪೂಜಿಸಿಗೌರವಿಸಲಾಗುತ್ತೋ ಅಲ್ಲಿ ದೇವತೆಗಳು ನೆಲೆಸಿರುತ್ತಾರೆ ಪ್ರತಿ ಮನೆ, ಹೃದಯ ಭಾವನೆ, ಸಂತೋಷದ ಪ್ರತಿಯೊಂದು ಕ್ಷಣವು ಮಹಿಳೆಯರಿಲ್ಲದೇ ಅಪೂರ್ಣ ಎಂದು ಹೇಳಿದರು.

ಸಮಾಜದ ಎಲ್ಲಾ ರಂಗಗಳಲ್ಲೂ ಮಹಿಳೆಯ ಕೊಡುಗೆ ಅಪಾರವಾಗಿದ್ದು,




ಸಮಾಜದಲ್ಲಿ ಎದುರಾಗುವ ಯಾವುದೇ ಸವಾಲುಗಳಿಗೆ ಅಂಜದೆ ಮುನ್ನಡೆದಾಗ ಮಾತ್ರ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತದೆ ಹಾಗಾಗಿ ಮಹಿಳೆಯರು ಸಂಕಷ್ಟಗಳಿಗೆ ಧೃತಿಗೆಡದೆ ಸಾಧನೆಯ ಮೆಟ್ಟಿಲತ್ತ ಹೆಜ್ಜೆ ಹಾಕಬೇಕು ಎಂದರು.

ವಿಶ್ವ ಮಹಿಳಾ ದಿನವು ಮಹಿಳೆಯರ ಸಾಧನೆಯ ಸಂಕೇತವಾಗಿದೆ ನ್ಯೂಯಾರ್ಕ್‌ನಲ್ಲಿ ಕ್ಲಾರಾ ಜಟ್ಕಿನ್ ಸಿದ್ದ ಉಡುಪು ತಯಾರಿಕಾ ಕಾರ್ಖಾನೆಯಲ್ಲಿ ಮಹಿಳಾ ಕಾರ್ಮಿಕರು ನಡೆಸಿದ ಚಳುವಳಿಯಿಂದಾಗಿ ಮಹಿಳಾ ದಿನಾಚರಣೆ ಕಲ್ಪನೆ ಮೂಡಿತು,ಶಾಂತಿ ಮತ್ತು ಸಮಾನತೆ ಧ್ವನಿ ಎತ್ತಿದ ಮಹಿಳೆಯರಿಗೆ ಗೌರವ ಸೂಚಿಸಲು ಈ ದಿನವನ್ನು ಅಂತಾರಾಷ್ಟ್ರೀಯ ಮಹಿಳಾ ದಿನವನ್ನಾಗಿ ಘೋಷಿಸಲಾಯಿತು ಎಂದು ವಿವರಿಸಿದರು.

ಈ ವೇಳೆ ಮಹಿಳೆಯ ಸಬಲೀಕರಣ, ಆರೋಗ್ಯ ಸೇರಿದಂತೆ ಅವರ ಸರ್ವಾಂಗೀಣ ಅಭಿವೃದ್ಧಿಯ ದೃಷ್ಟಿಂಯೊಂದಿಗೆ ಸಂಸ್ಥೆಯಿಂದ 'ತಾಯಂದಿರ ಕ್ಲಬ್' ಉದ್ಘಾಟಿಸಲಾಯಿತು. ಈ ಸಂದರ್ಭದಲ್ಲಿ ಸೋ.ಸು.ನಾಗೇಂದ್ರನಾಥ್, ಪ್ರಾಂಶುಪಾಲರಾದ ಶಿವಕುಮಾರ್, ರಾಮಚಂದ್ರನ್, ಶಿಕ್ಷಕರಾದ ಕಲಾವತಿ ಪ್ರೀತಿ, ಪ್ರಿಯಾಂಕ, ಭೂಮಿಕಾ, ಅಮರಾವತಿ, ಸುಷ್ಮಾ, ರೂತ್, ಮುಬಾರಕ್ ಅಂಜುಮ, ಕೃಷ್ಣಾ, ಅಕೋನಾ,ಗೌತಮ್, ಶ್ರೀನಿವಾಸ್, ನಾಗೇದ್ರ, ಮಂಜೇಶ್ ಮುಂತಾದವರು ಹಾಜರಿದ್ದರು.

## ವಿವಿಧ ಕಾಮಗಾರಿಗೆ ಚಾಲನೆ; ತಿಂಗಳಾಂತ್ಯಕ್ಕೆ ನಿವೇಶನ ಹಂಚಿಕೆ

ದೇವನಹಳ್ಳಿ:ತಾಲ್ಲೂಕಿನ ವ್ಯಾಪ್ತಿಯಲ್ಲಿ ತಿಂಗಳಾಂತ್ಯದಲ್ಲಿ ಏಕಕಾಲಕ್ಕೆ ನಿವೇಶನ ಹಂಚಿಕೆ ಮಾಡಲು ಸಿದ್ಧತೆ ನಡೆಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಹೇಳಿದರು.



ದೇವನಹಳ್ಳಿ ವಿಧಾನ ಸಭಾ ಕ್ಷೇತ್ರದ ಕುಂದಾಣ ಹೋಬಳಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿ ಜಿಲ್ಲೆಯ ಅಭಿವೃದ್ಧಿಗೆ ಹಲವು ಅಭಿವೃದ್ಧಿ ಕಾರ್ಯಕ್ರಮಗಳನ್ನ ಕೈಗೆತ್ತಿಕೊಳ್ಳಲಾಗಿದೆ. ಬಡವರಿಗೆ, ಹಿಂದುಳಿದವರಗೆ ನಿವೇಶನ ಹಾಗೂ ಮನೆ ನೀಡಲು ಈಗಾಗಲೇ ಸಿದ್ಧತೆ ನಡೆಸಲಾಗಿದ್ದು, ತಿಂಗಳಾಂತ್ಯಕ್ಕೆ ದೇವನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಬಡವರಿಗೆ ನಿವೇಶನ ನೀಡಲಾಗುವುದು ಎಂದರು.

ಜನಪರವಾದ, ರೈತರ ಪರವಾದ, ಬಡವರ ಪರವಾದ, ಎಲ್ಲಾ ವರ್ಗದ ಪರವಾದ, ಎಲ್ಲಾ ಜಿಲ್ಲೆಗಳಿಗೂ ಸಮಾನ ಅವಕಾಶ ನೀಡಿರುವ ಒಳ್ಳೆಯ ಬಜೆಟ್ ಅನ್ನು ಮಾನ್ಯ ಸಿದ್ದರಾಮಯ್ಯ ಅವರು ನೀಡಿದ್ದಾರೆ. ದೇವನಹಳ್ಳಿಗೆ ಮೆಟ್ರೋ ವಿಸ್ತರಣೆ, ಜಿಲ್ಲಾ ಕ್ರೀಡಾಂಗಣ, ಕೆರೆಗೆ ನೀರು ತುಂಬಿಸುವುದು, ರಸ್ತೆಗಳ ಅಭಿವೃದ್ಧಿಗೆ ಸೇರಿದಂತೆ ಹಲವು ಯೋಜನೆಗಳನ್ನು ಜಿಲ್ಲೆಗೆ ನೀಡಿದ್ದಾರೆ. ಸರ್ಕಾರ ಡಿಸಿಸಿ ಬ್ಯಾಂಕ್ ಗಳಲ್ಲಿ ಬಡ್ಡಿ ರಹಿತ ಸಾಲ ನೀಡುವ ಯೋಜನೆ ಜಾರಿಗೆ ತಂದಿದ್ದು ರೈತರು, ಸ್ವಸಹಾಯ, ಸ್ತ್ರೀ ಶಕ್ತಿ ಸಂಘಗಳು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ದೇವನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಕಾರಹಳ್ಳಿ, ಕೊಯಿರಾ, ವಿಶ್ವನಾಥಪುರ, ಕುಂದಾಣ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಶಾಲೆಗಳ ಅಭಿವೃದ್ಧಿ, ಶಿಕ್ಷಣ, ರಸ್ತೆ ಸೌಕರ್ಯ, ಸ್ವಚ್ಛತೆ ಮತ್ತು ಸಾಮಾಜಿಕ ಅಭಿವೃದ್ಧಿಗೆ ಸಂಬಂಧಿಸಿದ ಹಲವಾರು ಯೋಜನೆಗಳಿಗೆ ಗುದ್ದಲಿಪೂಜೆ ಹಾಗೂ ಗ್ರಾಮ ಪಂಚಾಯಿತಿಗಳ ಹೈ-ಮಾಸ್ಕ್ ಲೈಟ್, ಅಂಗಡಿ ಮಳಿಗೆಗಳು, ಮಲ ತ್ಯಾಜ್ಯ ಘಟಕ, ಅರಿವು ಕೇಂದ್ರವನ್ನು ಉದ್ಘಾಟಿಸಿದರು.

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ.ಶಾಂತಕುಮಾರ್ ಮಾತನಾಡಿ ಸಚಿವರು ಗ್ರಾಮಗಳ ಅಭಿವೃದ್ಧಿಗಾಗಿ ಹಲವಾರು ಕಾಮಗಾರಿಗಳಿಗೆ ಚಾಲನೆ ನೀಡಿದ್ದಾರೆ ಹಾಗೂ ಸಹಕಾರಿ ಸಂಘಗಳಲ್ಲಿ ಸರ್ಕಾರವು ಸ್ವಯಂ ಉದ್ಯೋಗ ಕಲ್ಪಿಸಿಕೊಂಡು ಸಾಕಷ್ಟು ಆರ್ಥಿಕ ಅಭಿವೃದ್ಧಿ ಹೊಂದಲು ಸೂಕ್ತ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕುಂದಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗರ್ಭಿಣಿಯರಿಗೆ, ಅಂಗನವಾಡಿ, ಆಶಾ ಕಾರ್ಯಕರ್ತೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಬಯಪ ಅಧ್ಯಕ್ಷ ವಿ.ಶಾಂತಕುಮಾರ್,ತಾಲ್ಲೂಕು ಗ್ಯಾರಂಟಿ ಯೋಜನೆ ಅಧ್ಯಕ್ಷರಾದ ಸಿ.ಜಗನ್ನಾಥ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಸನ್ನ ಕುಮಾರ್ ,ಬಿದಲೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಪಿ.ಮುನಿರಾಜು, ಪ್ರಧಾನ ಕಾರ್ಯದರ್ಶಿ ನಾಗೇಗೌಡ, ದೇವನಹಳ್ಳಿ ತಹಸೀಲ್ದಾರ್ ಬಾಲಕೃಷ್ಣ, ಇಒ ಶ್ರೀನಾಥ್ ಗೌಡ ಸೇರಿದಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಾಕ್ಷರು, ಸದಸ್ಯರು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಮಾಧವ್ ರಾಷ್ಟ್ರೀಯ ಉದ್ಯಾನವನ 58ನೇ ಹುಲಿ ಸಂರಕ್ಷಿತ ಪ್ರದೇಶ ಘೋಷಣೆ: ಮೋದಿ ಹರ್ಷ

ಭೋಪಾಲ್: ಮಧ್ಯ ಪ್ರದೇಶದ ಮಾಧವ್ ರಾಷ್ಟ್ರೀಯ ಉದ್ಯಾನವನವನ್ನು ರಾಜ್ಯದ ಒಂಬತ್ತನೇ ಹುಲಿ ಮೀಸಲು ಪ್ರದೇಶವೆಂದು ಗುರುತಿಸಿರುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ವನ್ಯಜೀವಿ ಪ್ರಿಯರಿಗೆ ಇದೊಂದು ಅದ್ಭುತ ಸುದ್ದಿ ಭಾರತವು ವನ್ಯಜೀವಿ ವೈವಿಧ್ಯತೆ ಮತ್ತು ವನ್ಯಜೀವಿಗಳನ್ನು ಗೌರವಿಸುವ ಸಂಸ್ಕೃತಿಯನ್ನು ಹೊಂದಿದೆ. ಪ್ರಾಣಿಗಳನ್ನು ರಕ್ಷಿಸುವಲ್ಲಿ ಮತ್ತು ಸುಸ್ಥಿರ ಗ್ರಹಕ್ಕೆ ಕೊಡುಗೆ ನೀಡುವಲ್ಲಿ ನಾವು ಯಾವಾಗಲೂ ಮುಂಚೂಣಿಯಲ್ಲಿದ್ದೇವೆ" ಎಂದು ಹೇಳಿದ್ದಾರೆ.

ಪ್ರಧಾನಿಯ ಪೋಸ್ಟ್‌ಗೆ ಪ್ರತಿಕ್ರಿಯೆ ನೀಡಿದ ರಾಜ್ಯದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್, "ಮಾಧವ್ ರಾಷ್ಟ್ರೀಯ ಉದ್ಯಾನವನ್ನು ಭಾರತದ 58ನೇ ಮತ್ತು ಮಧ್ಯ ಪ್ರದೇಶದ 9ನೇ ಹುಲಿ ಮೀಸಲು ಪ್ರದೇಶವೆಂದು ಹೆಸರಿ ಸುವಲ್ಲಿ ದೂರದೃಷ್ಟಿಯನಾಯಕತ್ವಕ್ಕಾಗಿ ಗೌರವಾನ್ವಿತ ಪ್ರಧಾನಿಗೆ ಹೃತ್ಪೂರ್ವಕ ಧನ್ಯವಾದಗಳು ವನ್ಯಜೀವಿಗಳನ್ನು ಸಂರಕ್ಷಿಸಲು ಮತ್ತು ನಮ್ಮ ಜೀವವೈವಿಧ್ಯತೆಯನ್ನು ರಕ್ಷಿಸಲು ಮಧ್ಯಪ್ರದೇಶ ಹೆಮ್ಮೆಪಡುತ್ತದೆ. ಎಂದು ಹೇಳಿದ್ದಾರೆ.




ಶಿವಪುರಿ ಜಿಲ್ಲೆಯ ಮಾಧವ್ ರಾಷ್ಟ್ರೀಯ ಉದ್ಯಾನವನಕ್ಕೆ ಶೀಘ್ರದಲ್ಲೇ ಹುಲಿ ಮೀಸಲು ಸ್ಥಾನಮಾನ ನೀಡಲಾಗುವುದು ಎಂದು ಮುಖ್ಯಮಂತ್ರಿ ಯಾದವ್ ಕೆಲ ದಿನಗಳ ಹಿಂದೆ ಘೋಷಿಸಿದ್ದರು. ಉದ್ಯಾನವನಕ್ಕೆ ಒಂದು ಜೋಡಿ ಹುಲಿಗಳನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ಬಗ್ಗೆಯೂ ಅವರು ತಿಳಿಸಿದ್ದರು.

ಮಧ್ಯಪ್ರದೇಶವು ಈಗಾಗಲೇ "ಹುಲಿ ರಾಜ್ಯ" ಪಟ್ಟ ಪಡೆದುಕೊಂಡಿದೆ. ರಾಜ್ಯವು ವನ್ಯಜೀವಿ ಪ್ರಿಯರಿಗೆ ಮೆಚ್ಚಿನ ತಾಣವಾಗಿದೆ ಮತ್ತು ಪ್ರಮುಖ ವನ್ಯಜೀವಿ ಪ್ರವಾಸೋದ್ಯಮ ತಾಣವಾಗಿ ಹೊರಹೊಮ್ಮಿದೆ. ಚಂಬಲ್ ಪ್ರದೇಶಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುವುದರಿಂದ ಸ್ಥಳೀಯ ಯುವಕರಿಗೆ ಹೆಚ್ಚಿನ ಉದ್ಯೋಗ ಮತ್ತು ಸ್ವಯಂ ಉದ್ಯೋಗಾವಕಾಶಗಳನ್ನು ಒದಗಿಸುತ್ತದೆ ಎಂದು ಮುಖ್ಯಮಂತ್ರಿ ಹೇಳಿದರು.

ಆಫ್ರಿಕನ್ ಚಿರತೆಗಳಿಗೆ ನೆಲೆಯಾಗಿರುವ ಚಂಬಲ್ ಪ್ರದೇಶದ ಭಾಗವಾದ ಶಿವಪುರಿ ಜಿಲ್ಲೆಯ ಕುನೊ ರಾಷ್ಟ್ರೀಯ ಉದ್ಯಾನವನದಲ್ಲಿ ಚಿರತೆಗಳು ಸಹ ಕಾಣಿಸಿಕೊಂಡಿರುವುದು ರೋಮಾಂಚನ ಮೂಡಿಸಿದೆ. ಇದಲ್ಲದೆ, ಚಂಬಲ್ ನದಿಯಲ್ಲಿ ಮೊಸಳೆ ಮತ್ತು ಡಾಲ್ಫಿನ್ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಶಿವಪುರಿ ಜಿಲ್ಲೆಯಲ್ಲಿರುವ ಮಾಧವ್ ರಾಷ್ಟ್ರೀಯ ಉದ್ಯಾನವನ್ನು ಆರಂಭದಲ್ಲಿ 1956 ರಲ್ಲಿ ಶಿವಪುರಿ ರಾಷ್ಟ್ರೀಯ ಉದ್ಯಾನವನವೆಂದು ಹೆಸರಿಸಲಾಗಿತ್ತು. ಇದು 167 ಚದರ ಕಿಲೋಮೀಟರ್ ವ್ಯಾಪಿಸಿದೆ. 1958 ರಲ್ಲಿ, ಇದನ್ನು ಸಿಂಧಿಯಾ ರಾಜವಂಶದ ಮಹಾರಾಜ ಮಾಧವ ರಾವ್ ಸಿಂಧಿಯಾ ಅವರ ಹೆಸರಿನಿಂದ ಮರುನಾಮಕರಣ ಮಾಡಲಾಯಿತು. ಈ ಉದ್ಯಾನವನವು ಸಾಖ್ಯ ಸಾಗರ್ ಎಂಬ ಮಾನವ ನಿರ್ಮಿತ ಜಲಾಶಯವನ್ನು ಒಳಗೊಂಡಿದೆ. ಇದನ್ನು ರಾಮಸರ್ ತಾಣವೆಂದು ಕರೆಯಲಾಗುತ್ತದೆ.

# ಒಂದು ಕೊಲೆಗೆ ಶಿಕ್ಷೆಯಿಂದ ವಿನಾಯಿತಿ ಕೊಡಿ ರಾಷ್ಟ್ರಪತಿಗೆ ಪತ್ರ ಬರೆದ ರೋಹಿಣಿ ಖಡ್ಸೆ

**ಮಹಾರಾಷ್ಟ್ರ:** ದಬ್ಬಾಳಿಕೆಯ ಮನಸ್ಥಿತಿ ಮತ್ತು "ಅತ್ಯಾಚಾರಿ ಮನಸ್ಥಿತಿ"ಯನ್ನು ಕೊಲ್ಲಲು ಬಯಸುವ ಮಹಿಳೆಯರಿಗೆ ಒಂದು ಕೊಲೆಯ ವಿರುದ್ಧ ಶಿಕ್ಷೆಯಿಂದ ವಿನಾಯಿತಿ ನೀಡಬೇಕು ಎಂದು ಎನ್‌ಸಿಪಿ (ಎಸ್‌ಪಿ) ಮಹಿಳಾ ವಿಭಾಗದ ಮುಖ್ಯಸ್ಥೆ ರೋಹಿಣಿ ಖಡ್ಸೆ ಒತ್ತಾಯಿಸಿದ್ದಾರೆ.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರ ಬರೆದಿರುವ ಶರದ್ ಪವಾರ್ ನೇತೃತ್ವದ ಪಕ್ಷದ ಮಹಿಳಾ ವಿಭಾಗದ ಅಧ್ಯಕ್ಷೆ ಖಡ್ಸೆ, "ಮುಂಬೈನಲ್ಲಿ ಇತ್ತೀಚೆಗೆ ನಡೆದ 12 ವರ್ಷದ ಬಾಲಕಿಯ ಮೇಲಿನ ಸಾಮೂಹಿಕ ಅತ್ಯಾಚಾರವನ್ನು ಉಲ್ಲೇಖಿಸುತ್ತಾ, ಮಹಿಳೆಯರ ವಿರುದ್ಧ ಹೆಚ್ಚುತ್ತಿರುವ ಅಪರಾಧಗಳಿಗೆ ಇದುವೇ ನಿದರ್ಶನ. ಇದನ್ನು ಗಮನದಲ್ಲಿಟ್ಟುಕೊಂಡು ನಮ್ಮ ಬೇಡಿಕೆಯ ಬಗ್ಗೆ ಗಮನಹರಿಸಬೇಕು" ಎಂದು ಒತ್ತಿ ಹೇಳಿದ್ದಾರೆ.

"ನಾವು ಎಲ್ಲಾ ಮಹಿಳೆಯರ ಪರವಾಗಿ ಒಂದು ಕೊಲೆ ಮಾಡಲು ಶಿಕ್ಷೆಯಿಂದ ವಿನಾಯಿತಿ ಕೋರುತ್ತಿದ್ದೇವೆ" ಎಂದು ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಯ ಪರಿಸ್ಥಿತಿಯ ಬಗ್ಗೆ ರಾಜ್ಯ ಸರ್ಕಾರವನ್ನು ಗುರಿಯಾಗಿಸಿಕೊಂಡು ಆಕ್ರೋಶ ಹೊರಹಾಕಿದ್ದಾರೆ.

ಅಪಹರಣ ಮತ್ತು ಕೌಟುಂಬಿಕ ಹಿಂಸೆ ಸೇರಿದಂತೆ ಮಹಿಳೆಯರ ವಿರುದ್ಧ ಅಪರಾಧಗಳು ಹೆಚ್ಚುತ್ತಿರುವುದರಿಂದ ಭಾರತ ಮಹಿಳೆಯರಿಗೆ ಅತ್ಯಂತ ಅಸುರಕ್ಷಿತ ದೇಶ ಎಂದು ಹೇಳುವ ಸಮೀಕ್ಷಾ ವರದಿಯನ್ನೂ ಅವರು ಪತ್ರದಲ್ಲಿ ಸೇರಿಸಿದ್ದಾರೆ.



ನಾವು ದಬ್ಬಾಳಿಕೆಯ ಮನಸ್ಥಿತಿ, ಅತ್ಯಾಚಾರ ಪ್ರವೃತ್ತಿ, ಕಾನೂನು ಮತ್ತು ಸುವ್ಯವಸ್ಥೆಯ ಅದಕ್ಷತೆಯನ್ನು ಕೊಲ್ಲ ಬಯಸುತ್ತೇವೆ. ಈ ಬಗ್ಗೆ ಗಂಭೀರವಾಗಿ ಯೋಚಿಸಿದ ನಂತರ ನಮ್ಮ ಬೇಡಿಕೆಯನ್ನು ಈಡೇರಿಸಲಾಗುತ್ತದೆ ಎಂದೇ ನಾವು ಭಾವಿಸುತ್ತೇವೆ" ಎಂದು ಖಡ್ಸೆ ತಿಳಿಸಿದ್ದಾರೆ.

ಈ ಪತ್ರಕ್ಕೆ ಪ್ರತಿಕ್ರಿಯಿಸಿದ ಶಿವಸೇನಾ ಸಚಿವ ಗುಲಾಬ್ರಾವ್ ಪಾಟೀಲ್, ಖಡ್ಸೆ ಅವರು ಯಾರನ್ನು ಕೊಲ್ಲುತ್ತಾರೆಂದು ಹೇಳಬೇಕು ಎಂದಿದ್ದಾರೆ.


ಖಡ್ಸೆ ಪತ್ರಕ್ಕೆ ಸ್ವಪಕ್ಷದವರೇ ಆದ ಮನೀಷಾ ಕಾಯಂಡೆ ಪ್ರತಿಕ್ರಿಯಿಸಿ, ಖಡ್ಸೆ ಬಹುಶಃ ಕೆಲವು ಜನರಲ್ಲಿರುವ ಕೆಲವು ಪ್ರವೃತ್ತಿಗಳನ್ನು ಕೊಲ್ಲುವ ಬಗ್ಗೆ ಮಾತನಾಡುತ್ತಿದ್ದಾರೆ. ಇತ್ತೀಚಿನ ಘಟನೆಗಳಿಂದಾಗಿ ಈ ಭಾವನೆ ಹುಟ್ಟಿಕೊಂಡಿರಬೇಕು" ಎಂದು ಹೇಳಿದ್ದಾರೆ.

# ರೋಹಿತ್‌ಗೆ ಹ್ಯಾಟ್ಸ್ ಆಫ್ ಎಂದ ಕಾಂಗ್ರೆಸ್ ನಾಯಕಿ

**ನವದೆಹಲಿ:** ಭಾರತ ಕ್ರಿಕೆಟ್ ತಂಡದ ನಾಯಕ ರೋಹಿತ್ ಶರ್ಮಾ ದಢೂತಿ ದೇಹ ಹೊಂದಿದ್ದಾರೆ ಎಂದು ಇತ್ತೀಚೆಗೆ ಆನ್‌ಲೈನ್‌ನಲ್ಲಿ ಪೋಸ್ಟ್ ಮಾಡಿ ವ್ಯಂಗ್ಯವಾಡಿದ್ದ ಕಾಂಗ್ರೆಸ್ ನಾಯಕಿ ಶಮಾ ಮೊಹಮ್ಮದ್, ಇದೀಗ ಚಾಂಪಿಯನ್ಸ್ ಟ್ರೋಫಿ ಗೆಲುವಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಟೀಂ ಇಂಡಿಯಾಗೆ ಅಭಿನಂದನೆ ತಿಳಿಸಿರುವ ಅವರು, ರೋಹಿತ್ ಶರ್ಮಾ ನಾಯಕತ್ವವನ್ನು ಕೊಂಡಾಡಿದ್ದಾರೆ.

ರೋಹಿತ್ ಶರ್ಮಾ ನಿನ್ನೆ ದುಬೈನಲ್ಲಿ ನ್ಯೂಜಿಲೆಂಡ್ ವಿರುದ್ಧ ನಡೆದ ಫೈನಲ್ ಪಂದ್ಯದಲ್ಲಿ ಅದ್ಭುತ ಅರ್ಧ ಶತಕದಾಟವಾಡಿದ್ದು, ಭಾರತ ನಾಲ್ಕು ವಿಕೆಟ್‌ಗಳಿಂದ ಪಂದ್ಯ ಗೆದ್ದು ಪ್ರತಿಷ್ಠಿತ ಚಾಂಪಿಯನ್ಸ್ ಟ್ರೋಫಿಗೆ ಮುತ್ತಿಕ್ಕಿತು.

ಈ ಕುರಿತು 'ಎಕ್ಸ್' ಪೋಸ್ಟ್ ಮಾಡಿರುವ ಶಮಾ ಮೊಹಮ್ಮದ್, "ಚಾಂಪಿಯನ್ಸ್ ಟ್ರೋಫಿಯಲ್ಲಿ ಅದ್ಭುತ ಪ್ರದರ್ಶನ ನೀಡಿ ಟ್ರೋಫಿ ಗೆದ್ದ ಟೀಂ ಇಂಡಿಯಾಗೆ ಅಭಿನಂದನೆಗಳು. ಕ್ಯಾಪ್ಟನ್‌ಗೆ ಹ್ಯಾಟ್ಸ್ ಆಫ್. 76 ರನ್ ಗಳಿಸಿದ ಅವರು ಮುಂದೆ ನಿಂತು ತಂಡವನ್ನು ಮುನ್ನಡೆಸಿ ವಿಜಯಕ್ಕೆ ಮುನ್ನುಡಿ ಬರೆದರು. ಅದೇ ರೀತಿ ಶ್ರೇಯಸ್ ಅಯ್ಯರ್, ಕೆ.ಎಲ್.ರಾಹುಲ್ ಅವರ ನಿರ್ಣಾಯಕ ಪ್ರದರ್ಶನವೂ ಗಮನಾರ್ಹ. ಇದೊಂದು ಸ್ಮರಣಾರ್ಹ ಗೆಲುವು" ಎಂದು ಬಣ್ಣಿಸಿದ್ದಾರೆ.




ನಿನ್ನೆಯ ಪಂದ್ಯದಲ್ಲಿ ರೋಹಿತ್ ಶರ್ಮಾ ಸತತ 12ನೇ ಬಾರಿಗೆ ಟಾಸ್ ಸೋತರು. ಹೀಗಿದ್ದರೂ ತಂಡ ಅದ್ಭುತ ಬೌಲಿಂಗ್ ಮಾಡಿತು. ಸ್ಪಿನ್ನರ್‌ಗಳ ಕರಾರುವಾಕ್ ದಾಳಿಯ ಪರಿಣಾಮ 50 ಓವರ್‌ಗಳಿಗೆ ನ್ಯೂಜಿಲೆಂಡ್ 251 ರನ್ ಗಳಿಸಲಷ್ಟೇ ಸಾಧ್ಯವಾಯಿತು. ಕುಲ್ದೀಪ್ ಯಾದವ್ (2/40), ವರುಣ್ ಚಕ್ರವರ್ತಿ (2/45) ಬೌಲಿಂಗ್‌ನಲ್ಲಿ ಮಹತ್ವದ ಪಾತ್ರ ನಿರ್ವಹಿಸಿದರು. ಇದಕ್ಕುತ್ತರವಾಗಿ ಭಾರತ 6 ಎಸೆತಗಳು ಬಾಕಿ ಇರುವಂತೆಯೇ 252 ಗಳಿಸಿ ಗೆಲುವಿನ ನಗಾರಿ ಬಾರಿಸಿತು. ರೋಹಿತ್ ಶರ್ಮಾ 83 ಎಸೆತಗಳಲ್ಲಿ 76 ರನ್ ಮತ್ತು ಶ್ರೇಯಸ್ ಅಯ್ಯರ್ 62 ಎಸೆತಗಳನ್ನು ಎದುರಿಸಿ 48 ರನ್ ಕೊಡುಗೆ ನೀಡಿದರು.

ಇತ್ತೀಚೆಗೆ ಶಮಾ ಮೊಹಮ್ಮದ್ ರೋಹಿತ್ ಶರ್ಮಾ 'ಡುಮ್ಮ' ಎಂದು ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡು ವಿವಾದ ಎಬ್ಬಿಸಿದ್ದರು. ಲಕ್ಷಾಂತರ ಕ್ರಿಕೆಟ್ ಅಭಿಮಾನಿಗಳು ಶಮಾ ಟೀಕೆಗೆ ಆಕ್ರೋಶ ಹೊರಹಾಕಿದ್ದರು. ನಂತರ ಪಕ್ಷದ ಹಿರಿಯ ನಾಯಕರು ಶಮಾ ಅವರಿಗೆ ವಿವಾದಿತ ಪೋಸ್ಟ್ ತೆಗೆದುಹಾಕುವಂತೆ ತಾಕೀತು ಮಾಡಿದ್ದರು. ಅದೇ ರೀತಿ ಕೇಂದ್ರ ಕ್ರೀಡಾ ಸಚಿವ ಮಾನ್ಸುಖ್ ಮಾಂಡವಿಯಾ "ನಾಚಿಕೆಗೇಡು" ಎಂದು ವಾಗ್ದಾಳಿ ನಡೆಸಿದ್ದರು. ಕಾಂಗ್ರೆಸ್ ಪಕ್ಷವು ಶಮಾ ಹೇಳಿಕೆಯಿಂದ ಅಂತರ ಕಾಯ್ದುಕೊಂಡಿತ್ತು. ಈ ಎಲ್ಲ ಬೆಳವಣಿಗೆಯ ನಂತರ ಶಮಾ ತಮ್ಮ ಎಕ್ಸ್ ಖಾತೆಯಿಂದ ವಿವಾದಿತ ಪೋಸ್ಟ್ ಡಿಲೀಟ್ ಮಾಡಿದ್ದರು.

# ಲಲಿತ್ ಮೋದಿ ಪೌರತ್ವ ಮನವಿ ರದ್ದುಗೊಳಿಸಲು ಆದೇಶ

**ವನವಾಟು:** ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್)ನ ಮಾಜಿ ಮುಖ್ಯಸ್ಥ ಲಲಿತ್ ಮೋದಿ ಇತ್ತೀಚೆಗಷ್ಟೇ ವನವಾಟು ದೇಶದ ಪೌರತ್ವವನ್ನು ಪಡೆದಿದ್ದಾರೆ ಎಂಬ ಸುದ್ದಿಯಾಗಿತ್ತು. ಈ ಬೆನ್ನಲ್ಲೇ ಇದೀಗ ಅವರಿಗೆ ವಿಘ್ನ ಎದುರಾಗಿದೆ. ಲಲಿತ್ ಮೋದಿಗೆ ನೀಡಿರುವ ಪಾಸ್‌ಪೋರ್ಟ್ ಅರ್ಜಿಯನ್ನು ರದ್ದು ಮಾಡುವಂತೆ ವನವಾಟು ಪ್ರಧಾನಿ ಜೊಥಮ್ ನಪಟ್ ಅವರು ದೇಶದ ಪೌರತ್ವ ಆಯುಕ್ತರಿಗೆ ಆದೇಶಿಸಿದ್ದಾರೆ.

ಭಾರತಕ್ಕೆ ಹಸ್ತಾಂತರವಾಗುವುದನ್ನು ತಪ್ಪಿಸಿಕೊಳ್ಳುವ ಉದ್ದೇಶದಿಂದ ಲಲಿತ್ ಮೋದಿ ವನವಾಟುಗೆ ತೆರಳಿದ್ದಾರೆ ಎಂಬ ಸುದ್ದಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಹರಡಿತ್ತು. ಈ ಹಿನ್ನೆಲೆಯಲ್ಲಿ ಅವರ ಪಾಸ್‌ಪೋರ್ಟ್ ಮನವಿಯನ್ನು ರದ್ದುಗೊಳಿಸಲು ವನವಾಟು ಪ್ರಧಾನಿ ನಿರ್ಧರಿಸಿದ್ದಾರೆ. ಈ ಕುರಿತು ಪ್ರಧಾನಿ ಕಚೇರಿಯಿಂದ ಹೊರಬಿದ್ದಿರುವ ಹೇಳಿಕೆ ಪ್ರಕಾರ, ಮೋದಿಗೆ ಎಚ್ಚರಿಕೆ ನೋಟಿಸ್ ಹೊರಡಿಸಬೇಕೆಂಬ ಮನವಿಯನ್ನು ಇಂಟರ್‌ಪೋಲ್ ಎರಡು ಬಾರಿ ತಿರಸ್ಕರಿಸಿದೆ. ಅಲ್ಲದೇ, ಅವರ ಹಿನ್ನಲೆ ಪರಿಶೀಲಿಸಿದಾಗಲೂ ಯಾವುದೇ ಅಪರಾಧ ಶಿಕ್ಷೆ ಕಂಡುಬಂದಿಲ್ಲ ಎಂದಿದ್ದು, ಅವರ ಅರ್ಜಿಯನ್ನು ರದ್ದು ಮಾಡುವಂತೆ ಸೂಚಿಸಿದ್ದಾರೆ.



ಬಿಸಿಸಿಐನ ಉಪ ಅಧ್ಯಕ್ಷರಾಗಿ ಈ ಹಿಂದೆ ಕಾರ್ಯನಿರ್ವಹಿಸಿದ್ದ ಲಲಿತ್ ಮೋದಿ, ಮನಿ ಲಾಂಡರಿಂಗ್, ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ-1999ರ ಪ್ರಕಾರ ಆರೋಪಿಯಾಗಿದ್ದಾರೆ. ಆರ್ಥಿಕ ಅವ್ಯವಹಾರ ಮತ್ತು ಅನಧಿಕೃತ ಹಣ ವರ್ಗಾವಣೆ ಸೇರಿದಂತೆ ವಿವಿಧ ಆರೋಪಗಳ ತನಿಖೆಯ ಬೆನ್ನಲ್ಲೇ 2010ರಲ್ಲಿ ಲಲಿತ್ ಮೋದಿ ಭಾರತ ತೊರೆದಿದ್ದರು.

ಮಾರ್ಚ್ 7ರಂದು ಲಲಿತ್ ಮೋದಿ ವನವಾಟು ಪೌರತ್ವ ಪಡೆದಿದ್ದಾರೆ ಎಂಬ ವರದಿಗಳ ಕುರಿತ ಪ್ರಶ್ನೆಗೆ ಉತ್ತರಿಸುತ್ತಾ, ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಲಂಡನ್‌ನಲ್ಲಿರುವ ಭಾರತೀಯ ಹೈಕಮಿಷನ್‌ನಲ್ಲಿ ತಮ್ಮ ಪಾಸ್‌ಪೋರ್ಟ್ ಅನ್ನು ಅವರು ಮರಳಿಸಿರುವುದು ತಿಳಿದು ಬಂದಿದೆ. ಕಾನೂನಿನ ಪ್ರಕಾರ ಅವರ ವಿರುದ್ಧದ ಎಲ್ಲಾ ಪ್ರಕರಣಗಳನ್ನು ಮುಂದುವರಿಸುತ್ತಿದ್ದೇವೆ ಎಂದಿದ್ದರು.

ಮಾರ್ಚ್ 8ರಂದು ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದ ಲಲಿತ್ ಮೋದಿ, ಭಾರತದ ನ್ಯಾಯಾಲಯದಲ್ಲಿ ನನ್ನ ವಿರುದ್ಧ ಯಾವುದೇ ಪ್ರಕರಣ ಬಾಕಿ ಉಳಿದಿಲ್ಲ. ಇದು ಕೇವಲ ಮಾಧ್ಯಮಗಳ ಊಹಾಪೋಹ. 15 ವರ್ಷ ಕಳೆದು ಹೋದರೂ ಈ ಕುರಿತು ಮಾತನಾಡುತ್ತಿದ್ದಾರೆ. ಮೊದಲಿಗೆ ನಾನು ಏನು ತಪ್ಪು ಮಾಡಿದ್ದೇನೆ ಎಂದು ಅರ್ಜಿ ಸಲ್ಲಿಸಲಿ. ಅದರ ಬದಲಾಗಿ ಕೇವಲ ಸುಳ್ಳು ಪ್ರಕರಣಗಳ ಕುರಿತು ಆಪಾದನೆ ಮಾಡುತ್ತಿದ್ದಾರೆ. ಇದು ಕೇವಲ ಸುಳ್ಳು ಸುದ್ದಿ. ನಾನು ಒಬ್ಬನೇ ಮಾಡಿರುವ ಜಾಗತಿಕ ಪ್ರೀತಿಯ ಉತ್ಪನ್ನ ಎಂದರೆ ಅದು ಐಪಿಎಲ್ ಎಂದು ಹೇಳಿದ್ದಾರೆ.

ಸದ್ಯ ಲಂಡನ್‌ನಲ್ಲಿ ನೆಲೆಸಿರುವ ಲಲಿತ್ ಮೋದಿ, ವನವಾಟು ಪೌರತ್ವಕ್ಕಾಗಿ ಭಾರತೀಯ ಪಾಸ್‌ಪೋರ್ಟ್ ಮರಳಿಸಲು ಅರ್ಜಿ ಸಲ್ಲಿಸಿದ್ದಾರೆ.

# ಮೊಬೈಲ್‌ನಲ್ಲಿ ಮಾತನಾಡುತ್ತಾ ಬಾವಿಗೆ ಬಿದ್ದು ವಿದ್ಯಾರ್ಥಿ ಸಾವು

ಹತ್ರಾಸ್: ವಿದ್ಯಾರ್ಥಿಯೊಬ್ಬ ಮೊಬೈಲ್‌ನಲ್ಲಿ ಮಾತನಾಡುತ್ತಾ ಬಾವಿಗೆ ಬಿದ್ದು ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಹತ್ರಾಸ್‌ನಲ್ಲಿ ನಡೆದಿದೆ. ರಾತ್ರಿಯಿಡೀ ರಕ್ಷಣಾ ಕಾರ್ಯಾಚರಣೆಯ ನಂತರ ಶನಿವಾರ ಪೊಲೀಸರು ಮತ್ತು ಅಗ್ನಿಶಾಮಕ ದಳದ ಅಧಿಕಾರಿಗಳು ವಿದ್ಯಾರ್ಥಿ ರಾಹುಲ್ ಕುಮಾರ್ ಅವರನ್ನು ಪತ್ತೆ ಮಾಡಿದ್ದರು. ಆತ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದ.

ಕೂಡಲೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ಅವರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು. ಟ್ರಾಕ್ಟರ್ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಸಂಬಂಧಿಕರೊಂದಿಗೆ ಮಾತನಾಡುತ್ತಿದ್ದಾಗ ವಿದ್ಯಾರ್ಥಿ ಬಾವಿಗೆ ಬಿದ್ದಿದ್ದಾನೆ. ರಾತ್ರಿ 11 ಗಂಟೆ ಸುಮಾರಿಗೆ, ಸ್ಥಳವು ಸಂಪೂರ್ಣವಾಗಿ ಕತ್ತಲೆಯಾಗಿತ್ತು. ಬಾವಿ ಪೊದೆಗಳಿಂದ ಆವೃತವಾಗಿತ್ತು.

ಬಾವಿ ತುಂಬಾ ಆಳವಾಗಿದ್ದರಿಂದ ಶೋಧ ಕಾರ್ಯಾಚರಣೆಗಾಗಿ ಪ್ರದೇಶದಲ್ಲಿ ತಾತ್ಕಾಲಿಕ ಬೆಳಕಿನ ವ್ಯವಸ್ಥೆ ಮಾಡಲಾಗಿತ್ತು ಎಂದು ಹತ್ರಾಸ್‌ನ ಠಾಣಾ ಅಧಿಕಾರಿ ಯೋಗೇಶ್ ಕುಮಾರ್ ಸಿಂಗ್ ತಿಳಿಸಿದ್ದಾರೆ.


ಹತ್ರಾಸ್‌ನ ನಾಗ್ಲಾ ಪ್ರದೇಶದ ಈ ಯುವಕ ರಾತ್ರಿ ವೇಳೆ ತನ್ನ ಜಮೀನಿಗೆ ಟ್ರ್ಯಾಕ್ಟರ್ ಟ್ರಾಲಿಯಲ್ಲಿ ತುಂಬಿಸಲಾಗುತ್ತಿದ್ದ ಆಲೂಗಡ್ಡೆಯನ್ನು ನೋಡಿಕೊಳ್ಳಲು ಹೋಗಿದ್ದ. ಟ್ರ್ಯಾಕ್ಟರ್ ಕೆಟ್ಟುಹೋದಾಗ, ಅವನು ತನ್ನ ಚಿಕ್ಕಪ್ಪನಿಗೆ ಕರೆ ಮಾಡಲು ಹೋಗಿ ಕಾಲು ಜಾರಿ ಹಳೆಯ ಬಾವಿಗೆ ಬಿದ್ದಿದ್ದ. ರಾಹುಲ್ ಒಬ್ಬ ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದ ರವೀಂದರ್ ಸಿಂಗ್ ಎಂಬ ಸಹ ಗ್ರಾಮಸ್ಥರು ಹೇಳಿದ್ದಾರೆ. ಇನ್ನು ಕೆಲವರು ವಿದ್ಯಾರ್ಥಿ ರಾತ್ರಿ ವೇಳೆ ಕೃಷಿ ಕೆಲಸಕ್ಕೆ ಸಹಾಯ ಮಾಡುತ್ತಿದ್ದ ಎಂದು ಹೇಳಿದ್ದಾರೆ.

# ಪಾಕ್‌ನ ಮುಫ್ತಿ ಶಾ ಮಿರ್‌ಗೆ ಗುಂಡಿಕ್ಕಿ ಹತ್ಯೆ

**ಪೇಶಾವರ:** ಪಾಕಿಸ್ತಾನದ ಖ್ಯಾತ ವಿದ್ವಾಂಸ ಮುಫ್ತಿ ಶಾ ಮಿರ್ ಅವರನ್ನು ಬಲೂಚಿಸ್ತಾನ ಪ್ರಾಂತ್ಯದಲ್ಲಿ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಕೊಂದಿದ್ದಾರೆ ಎಂದು ಮಾಧ್ಯಮ ವರದಿಯೊಂದು ತಿಳಿಸಿದೆ. ಮಿರ್ ಅವರು ಶುಕ್ರವಾರ ರಾತ್ರಿ ಪ್ರಾರ್ಥನೆಯ ನಂತರ ಮಸೀದಿಯಿಂದ ಹೊರಬರುತ್ತಿದ್ದಾಗ ತುರ್ಬತ್ ಪಟ್ಟಣ ಕೆಚ್‌ನಲ್ಲಿ ಅವರ ಮೇಲೆ ಗುಂಡಿನ ದಾಳಿ ನಡೆಸಲಾಗಿದೆ ಎಂದು ಡಾನ್ ಪತ್ರಿಕೆ ವರದಿ ಮಾಡಿದೆ.

ಮೋಟರ್ ಸೈಕಲ್‌ಗಳಲ್ಲಿ ಬಂದ ಶಸ್ತ್ರಸಜ್ಜಿತ ವ್ಯಕ್ತಿಗಳು ಮುಫ್ತಿ ಶಾ ಮಿರ್ ಅವರ ಮೇಲೆ ಗುಂಡು ಹಾರಿಸಿದ್ದು, ಅವರು ಗಂಭೀರವಾಗಿ ಗಾಯಗೊಂಡಿದ್ದರು. ತಕ್ಷಣವೇ ಅವರನ್ನು ತುರ್ಬತ್ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಅವರು ಬದುಕುಳಿಯಲಿಲ್ಲ" ಎಂದು ಪೊಲೀಸರು ತಿಳಿಸಿದ್ದಾರೆ.

ಮುಫ್ತಿ ಶಾ ಮಿರ್ ಅವರು ಜಮಿಯತ್ ಉಲೇಮಾ-ಇ-ಇಸ್ಲಾಂ-ಎಫ್ ನೊಂದಿಗೆ ಗುರುತಿಸಿಕೊಂಡಿದ್ದರು. ಈ ಹಿಂದೆಯೂ ಎರಡು ಬಾರಿ ಅವರ ಮೇಲೆ ದಾಳಿ ನಡೆದಿತ್ತಾದರೂ, ಅವರು ಪಾರಾಗಿದ್ದರು. ಈಗ್ಗೆ ಕೆಲ ದಿನಗಳ ಹಿಂದೆ ಖುಜ್ದಾರ್‌ನಲ್ಲಿ ಜೆಯುಐ-ಎಫ್‌ನ ಇಬ್ಬರು ನಾಯಕರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು ಎಂಬುದು ಗಮನಾರ್ಹ.



ಮುಫ್ತಿ ಶಾ ಮೀರ್ ಹಿನ್ನೆಲೆ: ಭಾರತೀಯ ನೌಕಾಪಡೆ ಅಧಿಕಾರಿ ಕುಲಭೂಷಣ್ ಜಾಧವ್ ಅವರನ್ನು ಇರಾನ್‌ನಿಂದ ಅಪಹರಿಸಲು ಈ ಮುಫ್ತಿ ಶಾ ಮೀರ್ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐಗೆ ಸಹಾಯ ಮಾಡಿದ್ದರು ಎಂದು ಆರೋಪಿಸಲಾಗಿದೆ.


ಮಾನವ ಮತ್ತು ಶಸ್ತ್ರಾಸ್ತ್ರ ಕಳ್ಳಸಾಗಣೆಯಲ್ಲಿ ಭಾಗಿಯಾಗಿದ್ದ ಮಿರ್, ಜಮಿಯತ್ ಉಲೇಮಾ-ಇ-ಇಸ್ಲಾಂನ ಸದಸ್ಯನಾಗಿದ್ದು, ತಾನೊಬ್ಬ ವಿದ್ವಾಂಸನೆಂದು ಕೆಲಸ ಮಾಡುತ್ತಿದ್ದ ಎಂದು ಮಾಧ್ಯಮ ವರದಿಗಳು ಹೇಳಿವೆ. ಈತ ಐಎಸ್‌ಐ ನೇತೃತ್ವದ ಡೆತ್ ಸ್ಕ್ವಾಡ್‌ಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದು, ಹಲವಾರು ಬಲೂಚ್ ಯುವಕರ ಅಪಹರಣ ಮತ್ತು ಕಾನೂನುಬಾಹಿರ ಹತ್ಯೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದಾನೆ ಎಂದು ವರದಿ ಹೇಳಿದೆ.

# ಪೈಲಟ್ ಸಮಯ ಪ್ರಜ್ಞೆಯಿಂದ ತಪ್ಪಿದ ದುರಂತ

**ಹೈದರಾಬಾದ್:** ಶಂಶಾಬಾದ್‌ನಲ್ಲಿರುವ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂದು ಭಾರೀ ದುರಂತವೊಂದು ತಪ್ಪಿದೆ. ಗೋವಾದಿಂದ ಇಲ್ಲಿನ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಇಂಡಿಗೋ ವಿಮಾನ ಮತ್ತೊಂದು ವಿಮಾನದೊಂದಿಗೆ ಡಿಕ್ಕಿಯಾಗುವುದರಿಂದ ಕ್ಷಣಾರ್ಧದಲ್ಲಿ ಪಾರಾಗಿದೆ.

ವಿಮಾನ ನಿಲ್ದಾಣದ ಅಧಿಕಾರಿಗಳ ಪ್ರಕಾರ, ಇಂಡಿಗೋ ವಿಮಾನ 6ಇ-6973 150 ಪ್ರಯಾಣಿಕರೊಂದಿಗೆ ಗೋವಾದಿಂದ ವಿಶಾಖಪಟ್ಟಣಕ್ಕೆ ತೆರಳುತ್ತಿತ್ತು. ಈ ವೇಳೆ ಶಂಶಾಬಾದ್ ವಿಮಾನದಲ್ಲಿ ನಿಗದಿಯಂತೆ ವಿಮಾನ ನಿಲುಗಡೆಗೆ ಮುಂದಾಗಿದೆ. ವಿಮಾನದ ಲ್ಯಾಂಡಿಂಗ್‌ಗೆ ಏರ್ ಟ್ರಾಫಿಕ್ ಕಂಟ್ರೋಲ್‌ನಿಂದಲೂ ಅನುಮತಿ ಸಿಕ್ಕಿದೆ. ಅದರಂತೆ ಪೈಲಟ್ ರನ್‌ವೇಯಲ್ಲಿ ಇಳಿಸಲು ಮುಂದಾಗುತ್ತಿದ್ದಂತೆ ಅದೇ ರನ್‌ವೇಯಲ್ಲಿ ಮತ್ತೊಂದು ವಿಮಾನ ಟೇಕ್ ಆಫ್ ಆಗಲು ಮುಂದಾಗಿದ್ದನ್ನು ಪೈಲಟ್ ಗಮನಿಸಿದ್ದಾರೆ. ತಕ್ಷಣವೇ ಕಾರ್ಯಪ್ರವೃತ್ತರಾದ ಪೈಲಟ್ ವಿಮಾನವನ್ನು ಇಳಿಸದೇ ಹಾರಾಟಕ್ಕೆ ಮುಂದಾಗಿದ್ದು, ಸಂಭಾವ್ಯ ಅನಾಹುತ ತಪ್ಪಿಸಿದ್ದಾರೆ.

ಇದಾದ 10 ನಿಮಿಷದ ಬಳಿಕ ವಿಮಾನ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ. ಸಣ್ಣ ನಿಲುಗಡೆಯ ಬಳಿಕ ವಿಮಾನ ಮತ್ತೆ ವಿಶಾಖಪಟ್ಟಣಂ ಕಡೆ ಪ್ರಯಾಣ ಬೆಳೆಸಿತು. ಪೈಲಟ್ ಸಮಯ ಪ್ರಜ್ಞೆಯಿಂದ ಸಿಬ್ಬಂದಿ ಮತ್ತು ಪ್ರಯಾಣಿಕರು ನಿಟ್ಟುಸಿರುಬಿಟ್ಟರು ಎಂದು ತಿಳಿದು ಬಂದಿದೆ.




# ಯುಪಿ ಜೈಲಿನ 13 ಕೈದಿಗಳಿಗೆ ಹೆಚ್‌ಐವಿ ಸೋಂಕು

**ಉತ್ತರ ಪ್ರದೇಶ:** ಉತ್ತರ ಪ್ರದೇಶದ ಮೌ ಎಂಬ ಜೈಲಿನ ಕೈದಿಗಳಲ್ಲಿ ಹೆಚ್‌ಐವಿ ಪಾಸಿಟಿವ್ ಕಂಡುಬಂದಿದೆ. ಜೈಲಿನಲ್ಲಿ ನಿಯಮಿತ ಆರೋಗ್ಯ ತಪಾಸಣೆ ನಡೆಸಲಾಗಿದ್ದು, ಬಳಿಕ ಬಂದ ವರದಿಯಲ್ಲಿ 13 ಕೈದಿಗಳಿಗೆ ಸೋಂಕು ತಗುಲಿರುವುದು ದೃಢಪಟ್ಟಿದೆ.

ಈ ಪೈಕಿ ಬಲ್ಲಿಯಾದ 10 ಮತ್ತು ಮೌ ಎಂಬಲ್ಲಿಂದ 3 ಕೈದಿಗಳು ಸೇರಿದ್ದಾರೆ. ಇವರಲ್ಲಿ ಒಬ್ಬ ಮಹಿಳಾ ಕೈದಿಯೂ ಇದ್ದಾರೆ. ಪ್ರಸ್ತುತ ಮೌ ಜೈಲಿನಲ್ಲಿ 1,086 ಕೈದಿಗಳಿದ್ದು, 650 ಕೈದಿಗಳು ಬಲ್ಲಿಯಾ ಜಿಲ್ಲಾ ಜೈಲಿನಿಂದ ಬಂದವರಾಗಿದ್ದಾರೆ. ಜುಲೈ 2024ರಿಂದ ಬಲ್ಲಿಯಾ ಜಿಲ್ಲಾ ಜೈಲು ಕಾರ್ಯನಿರ್ವಹಿಸುತ್ತಿಲ್ಲ. ಹೀಗಾಗಿ, ಇಲ್ಲಿನ ಕೈದಿಗಳನ್ನು ಮೌ ಜೈಲಿಗೆ ಸ್ಥಳಾಂತರಿಸಲಾಗಿದೆ.

HIVಗೆ ಕಾರಣ ಹಚ್ಚೇನಾ: ಜೈಲು ಕೈಪಿಡಿ ಪ್ರಕಾರ ಪ್ರತಿಯೊಬ್ಬ ಕೈದಿಯನ್ನೂ ಜೈಲಿನಲ್ಲಿ ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗುತ್ತದೆ. ಈ ತಪಾಸಣೆಯ ಸಮಯದಲ್ಲಿ, 13 ಕೈದಿಗಳಲ್ಲಿ ಹೆಚ್‌ಐವಿ ಪತ್ತೆಯಾಗಿದೆ. ಈ ವಿಚಾರವನ್ನು ಜೈಲು ಸೂಪರಿಂಟೆಂಡೆಂಟ್ ಆನಂದ್ ಶುಕ್ಲಾ ಖಚಿತಪಡಿಸಿದ್ದಾರೆ. ದಾದ್ರಿ ಮೇಳದಲ್ಲಿ ಅಸುರಕ್ಷಿತ ಹಚ್ಚೆ ಹಾಕಿಸಿಕೊಳ್ಳುವ ಮೂಲಕ ಕೈದಿಗಳು ಹೆಚ್‌ಐವಿ ಸೋಂಕಿಗೆ ಒಳಗಾಗಿದ್ದಾರೆ ಎಂದು ತನಿಖಾ ವರದಿಯಲ್ಲಿ ಉಲ್ಲೇಖಿ ಸಲಾಗಿದೆ.


ಸೋಂಕಿತ ರೋಗಿಗಳಿಗೆ ಗೌಪ್ಯ ರೀತಿಯಲ್ಲಿ ಎಆರ್‌ಟಿ ಕೇಂದ್ರದಿಂದ ಕಾರ್ಡ್ ತಯಾರಿಸಲಾಗುತ್ತದೆ ಮತ್ತು ಔಷಧಿ ಪ್ರಾರಂಭಿಸಲಾಗುತ್ತದೆ. ಜೈಲಿನಲ್ಲಿ ಯಾವುದೇ ಭಯವಿಲ್ಲ ಎಂದು ಶುಕ್ಲಾ ಹೇಳಿದರು.

# ಸಿರಿಯಾದಲ್ಲಿ ಸಂಘರ್ಷ: 1 ಸಾವಿರಕ್ಕೂ ಅಧಿಕ ಮಂದಿ ಸಾವು

**ಸಿರಿಯಾ:** ಮಧ್ಯಪ್ರಾಚ್ಯ ದೇಶವಾದ ಸಿರಿಯಾದಲ್ಲಿ ಸಂಘರ್ಷ ಕ್ರೂರಮಟ್ಟ ತಲುಪಿದೆ. ಸಿರಿಯನ್ ಭದ್ರತಾ ಪಡೆಗಳು ಮತ್ತು ಪದಚ್ಯುತ ಅಧ್ಯಕ್ಷ ಬಶರ್ ಅಸದ್ ಬೆಂಬಲಿಗರ ನಡುವೆ ಎರಡು ದಿನಗಳಿಂದ ನಡೆಯುತ್ತಿರುವ ಘರ್ಷಣೆಯಲ್ಲಿ 1 ಸಾವಿರಕ್ಕೂ ಅಧಿಕ ಮಂದಿ ಸಾವಿಗೀಡಾಗಿದ್ದಾರೆ ಎಂಬ ಆಘಾತಕಾರಿ ಅಂಶವನ್ನು ಯುದ್ಧದ ಮೇಲ್ವಿಚಾರಣಾ ತಂಡ ನೀಡಿದೆ.

ಲಟಾಕಿಯಾ, ಟಾರ್ಟಸ್ ಮತ್ತು ಹಮಾ ಪ್ರಾಂತ್ಯಗಳಲ್ಲಿ ಹೆಚ್ಚಿನ ಸಂಘರ್ಷ ನಡೆದಿದೆ. ಶುಕ್ರವಾರ ಎರಡೂ ಕಡೆಗಳಿಂದ ಹಿಂಸಾಚಾರ ಭುಗಿಲೆದ್ದಿದೆ. ಇದು ಶನಿವಾರಕ್ಕೂ ವಿಸ್ತರಣೆಯಾಗಿ ಸಾವಿನ ಸಂಖ್ಯೆ 1 ಸಾವಿರ ದಾಟಿದೆ. ಹಲವರು ಗಾಯಗೊಂಡಿದ್ದಾರೆ ಎಂದು ಬ್ರಿಟನ್ ಮೂಲದ ಸಿರಿಯನ್ ಮಾನವ ಹಕ್ಕುಗಳ ವೀಕ್ಷಣಾಲಯದ ವರದಿ ಹೇಳಿದೆ.

ಸಂಘರ್ಷದಲ್ಲಿ 745 ನಾಗರಿಕರು ಸಾವನ್ನಪ್ಪಿದ್ದರೆ, ತುಂಬಾ ಹತ್ತಿರದಿಂದ ನಡೆದ ಗುಂಡಿನ ದಾಳಿಯಲ್ಲಿ 125 ಸರ್ಕಾರಿ ಭದ್ರತಾ ಪಡೆ ಸಿಬ್ಬಂದಿ, ಅಸ್ಸಾದ್‌ಗೆ ಸಂಬಂಧಿಸಿದ 148 ಉಗ್ರರು ಸಾವನ್ನಪ್ಪಿದ್ದಾರೆ. ಇದು ಸಿರಿಯಾದ 14 ವರ್ಷಗಳ ಸಂಘರ್ಷದಲ್ಲಿ ಅತ್ಯಂತ ಭೀಕರ ಎಂದು ಮೇಲ್ವಿಚಾರಣಾ ತಂಡ ಮಾಹಿತಿ ನೀಡಿದೆ.



ಹತ್ಯೆಗೊಳಗಾದ ನಾಗರಿಕರಲ್ಲಿ ಹೆಚ್ಚಿನವರು ಅಲಾವೈಟ್ ಸಮುದಾಯಕ್ಕೆ ಸೇರಿದ ಧಾರ್ಮಿಕ ಅಲ್ಪಸಂಖ್ಯಾತರಾಗಿದ್ದಾರೆ. ಸಿರಿಯಾದಲ್ಲಿ ಕಳೆದ ಮೂರು ತಿಂಗಳ ಹಿಂದಷ್ಟೇ ರಚನೆಯಾಗಿರುವ ಮಧ್ಯಂತರ ಸರ್ಕಾರವು ಸಂಘರ್ಷಪೀಡಿತ ನಗರಗಳಲ್ಲಿ ಹೆಚ್ಚುವರಿ ಭದ್ರತಾ ಪಡೆಗಳನ್ನು ನಿಯೋಜಿಸಿದೆ. ಆದಾಗ್ಯೂ, ಮಾಜಿ ಆಡಳಿತಗಾರ ಬಶರ್ ಅಲ್ ಅಸ್ಸಾದ್‌ಗೆ ಬೆಂಬಲಿಗರು ಮಾರಣಹೋಮ ನಡೆಸುತ್ತಿದ್ದಾರೆ.

ಉಗ್ರರಿಗೆ ಭದ್ರತಾ ಪಡೆಗಳು ತಿರುಗೇಟು: ಅಸ್ಸಾದ್ ಬೆಂಬಲಿತ ಉಗ್ರರು ನಡೆಸುತ್ತಿರುವ ಗಲಭೆಗೆ ಭದ್ರತಾ ಪಡೆಗಳು ಭಾರೀ ಪ್ರಮಾಣದಲ್ಲಿ ಪ್ರತ್ಯುತ್ತರ ನೀಡುತ್ತಿವೆ. ತಾರ್ಟೌಸ್ ಮತ್ತು ಲಟಾಕಿಯಾ ಪ್ರಾಂತ್ಯಗಳ ಹೆಚ್ಚಿನ ಪ್ರದೇಶಗಳನ್ನು ನಿಯಂತ್ರಣಕ್ಕೆ ಪಡೆಯಲಾಗಿದೆ. ಅಸ್ಸಾದ್ ಬೆಂಬಲಿಗರು ಭದ್ರತಾ ಚೆಕ್‌ಪೋಸ್ಟ್‌ಗಳು, ಬೆಂಗಾವಲುಗಳು ಮತ್ತು ಮಿಲಿಟರಿ ನೆಲೆಗಳ ಮೇಲೆ ಸಂಘಟಿತ ದಾಳಿಗಳನ್ನು ನಡೆಸಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಲಟಾಕಿಯಾ ಮತ್ತು ಇತರ ಕರಾವಳಿ ಪ್ರದೇಶಗಳಲ್ಲಿ ಕರ್ಫ್ಯೂ ಜಾರಿಯಲ್ಲಿದೆ. ಇವುಗಳು ಅಲ್ ಅಸ್ಸಾದ್‌ಗೆ ಬೆಂಬಲ ನೀಡುವ ಅಲಾವೈಟ್ ಸಮುದಾಯ ನೆಲೆಸಿರುವ ಪ್ರದೇಶವಾಗಿದೆ. ಇಲ್ಲಿನ ಜನರು ದೀರ್ಘಕಾಲದಿಂದಲೂ ಅಸ್ಸಾದ್‌ನನ್ನು ಬೆಂಬಲಿಸುತ್ತಿದ್ದಾರೆ. ಸಂಘರ್ಷದ ಮಧ್ಯೆ, ನೂರಾರು ಜನರು ಲಟಾಕಿಯಾ ಗ್ರಾಮಾಂತರದಲ್ಲಿರುವ ರಷ್ಯಾದ ನೆಲೆಯಲ್ಲಿ ಆಶ್ರಯ ಪಡೆದುಕೊಂಡಿದ್ದಾರೆ.

ಶರಣಾಗಲು ಸೂಚನೆ: ಸಿರಿಯಾದಲ್ಲಿ ಗಲಭೆ ಸೃಷ್ಟಿಸಿ, ಸಾವು ನೋವಿಗೆ ಕಾರಣರಾಗಿರುವ ಅಲ್ ಅಸದ್ ಬೆಂಬಲಿಗರು ತಮ್ಮಲ್ಲಿನ ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಶರಣಾಗುವಂತೆ ಸಿರಿಯಾದ ಮಧ್ಯಂತರ ಸರ್ಕಾರದ ಅಧ್ಯಕ್ಷ ಅಹ್ಮದ್ ಅಲ್ ಶರಾ ಕರೆ ನೀಡಿದ್ದಾರೆ.

ಕ್ರೀಡೆ - ಸಿನಿಮಾ
ಮುಸ್ಸಂಜೆ

# ಬೈದವರಿಗೆಲ್ಲರಿಗೂ ಬ್ಯಾಟಲ್ಲೇ ಉತ್ತರ ನೀಡಿದ ರಾಹುಲ್



ನವೆಂಬರ್ 19, 2023 ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆದ ಏಕದಿನ ವಿಶ್ವಕಪ್‌ನ ಫೈನಲ್ ಪಂದ್ಯದಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡದ ನಾಯಕ ಪ್ಯಾಟ್ ಕಮಿನ್ಸ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 83 ರನ್‌ಗಳಿಗೆ 3 ವಿಕೆಟ್ ಕಳೆದುಕೊಂಡಿತು.

ಈ ಹಂತದಲ್ಲಿ 5ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಕೆಎಲ್ ರಾಹುಲ್, ವಿರಾಟ್ ಕೊಹ್ಲಿ ಜೊತೆಗೂಡಿ ಇನಿಂಗ್ಸ್ ಕಟ್ಟಿದರು. ಆದರೆ 54 ರನ್‌ಗಳಿಸಿ ಕೊಹ್ಲಿ ಔಟಾಗುತ್ತಿದ್ದಂತೆ ರಾಹುಲ್ ಎಚ್ಚರಿಕೆಯ ಆಟಕ್ಕೆ ಒತ್ತು ನೀಡಿದರು.

ಏಕೆಂದರೆ ಕೊಹ್ಲಿ ಔಟಾದ ಬಳಿಕ ಬಂದ ರವೀಂದ್ರ ಜಡೇಜಾ 9 ರನ್‌ಗಳಿಸಿ ಪೆವಿಲಿಯನ್‌ಗೆ ಮರಳಿದ್ದರು. ಹೀಗಾಗಿ ರಾಹುಲ್ ರಕ್ಷಣಾತ್ಮಕ ಆಟದೊಂದಿಗೆ ಇನಿಂಗ್ಸ್ ಕಟ್ಟುವ ಕಾಯಕಕ್ಕೆ ಕೈ ಹಾಕಿದ್ದರು. ಆದರೆ ಅದಾಗಲೇ ಪಂದ್ಯದ ವೇಳೆ ಹಿಡಿತ ಸಾಧಿಸಿದ್ದ ಆಸ್ಟ್ರೇಲಿಯಾ ಬೌಲರ್‌ಗಳು ರಾಹುಲ್ ಮೇಲೆ ಒತ್ತಡ ಹೇರುವಲ್ಲಿ ಯಶಸ್ವಿಯಾದರು.

ಪರಿಣಾಮ 107 ಎಸೆತಗಳನ್ನು ಎದುರಿಸಿ ಕೆಎಲ್ ರಾಹುಲ್ ಕಲೆಹಾಕಿದ್ದು ಕೇವಲ 67 ರನ್‌ಗಳು ಮಾತ್ರ. ಇನ್ನು ಈ ಪಂದ್ಯದಲ್ಲಿ ಟೀಮ್ ಇಂಡಿಯಾ 50 ಓವರ್‌ಗಳಲ್ಲಿ 240 ರನ್‌ಗಳಿಸಿ ಇನಿಂಗ್ಸ್ ಅಂತ್ಯಗೊಳಿಸಿತು.

ಈ ಸುಲಭ ಗುರಿಯನ್ನು ಬೆನ್ನತ್ತಿದ ಆಸ್ಟ್ರೇಲಿಯಾ ತಂಡವು 43 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 241 ರನ್ ಬಾರಿಸಿ ಚಾಂಪಿಯನ್ ಪಟ್ಟ ಅಲಂಕರಿಸಿತು. ಟೀಮ್ ಇಂಡಿಯಾದ ಅಂದಿನ ಸೋಲಿಗೆ ಕೆಎಲ್ ರಾಹುಲ್ ಅವರೇ ಕಾರಣ ಎಂದು ಅನೇಕರು ಷರಾ ಬರೆದಿದ್ದರು.


ರಾಹುಲ್ ಅವರನ್ನು ಟೀಕಿಸುವ ಭರದಲ್ಲಿ ಉಳಿದ ಬ್ಯಾಟರ್‌ಗಳ ವೈಫಲ್ಯಗಳು ಕೂಡ ಮರೆಯಾಯಿತು. ಅಷ್ಟೇ ಯಾಕೆ ಟೀಮ್ ಇಂಡಿಯಾದಲ್ಲಿ ಕನ್ನಡಿಗನಿಗೆ ಚಾನ್ಸ್ ನೀಡಬಾರದೆಂಬ ಮಾತುಗಳು ಕೂಡ ಕೇಳಿ ಬಂದಿದ್ದವು. ಇದಾಗ್ಯೂ ಚಾಂಪಿಯನ್ಸ್ ಟ್ರೋಫಿ ತಂಡದಲ್ಲಿ ಸ್ಥಾನ ಪಡೆಯುವಲ್ಲಿ ರಾಹುಲ್ ಯಶಸ್ವಿಯಾದರು.

ಆದರೆ ಈ ಬಾರಿ ಕೆಎಲ್ ರಾಹುಲ್‌ಗೆ ಸಿಕ್ಕಿದ್ದು 6ನೇ ಕ್ರಮಾಂಕ. ಕಳೆದ ನಾಲ್ಕೈದು ವರ್ಷಗಳಿಂದ 5ನೇ ಕ್ರಮಾಂಕದಲ್ಲಿ ಆಡುತ್ತಿದ್ದ ಕನ್ನಡಿಗನಿಗೆ ಹಿಂಬಡ್ತಿ ನೀಡಲಾಗಿತ್ತು. ಆದರೆ ಅದ್ಯಾವುದಕ್ಕೂ ರಾಹುಲ್ ತಲೆ ಕೆಡಿಸಿಕೊಳ್ಳಲಿಲ್ಲ. ಕೊಟ್ಟ ಜವಾಬ್ದಾರಿಯನ್ನು ನಿಭಾಯಿಸಲು ದೃಢ ನಿರ್ಧಾರ ತೆಗೆದುಕೊಂಡರು.

ಬಾಂಗ್ಲಾದೇಶ್ ವಿರುದ್ಧದ ಮೊದಲ ಪಂದ್ಯದಲ್ಲಿ 41 ರನ್‌ಗಳ ಕೊಡುಗೆ ನೀಡಿ ತಂಡ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ನ್ಯೂಝಿಲೆಂಡ್ ವಿರುದ್ಧದ ಪಂದ್ಯದಲ್ಲಿ 23 ರನ್ ಬಾರಿಸಿ ತಂಡದ ಮೊತ್ತವನ್ನು 250ರ ಗಡಿ ತಲುಪಿಸಿದರು. ನಿರ್ಣಾಯಕವಾಗಿದ್ದ ಸೆಮಿಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಅಜೇಯ 42 ರನ್ ಬಾರಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು.

ಇನ್ನು ನ್ಯೂಝಿಲೆಂಡ್ ವಿರುದ್ಧದ ಫೈನಲ್ ಪಂದ್ಯದಲ್ಲಿ ಇಡೀ ತಂಡದ ಜವಾಬ್ದಾರಿಯನ್ನು ಹೆಗಲ ಮೇಲೆ ಹೊತ್ತುಕೊಂಡಂತೆ ಬ್ಯಾಟ್ ಬೀಸಿದರು. ಅಲ್ಲದೆ 33 ಎಸೆತಗಳಲ್ಲಿ ಅಜೇಯ 34 ರನ್ ಬಾರಿಸಿ ಟೀಮ್ ಇಂಡಿಯಾವನ್ನು ಚಾಂಪಿಯನ್ ಪಟ್ಟಕ್ಕೇರಿಸುವಲ್ಲಿ ಪ್ರಮುಖ ಪಾತ್ರವಹಿಸಿದರು.

ಈ ಮೂಲಕ ಕೆಎಲ್ ರಾಹುಲ್ 2023 ರಲ್ಲಿ ತನ್ನ ಬ್ಯಾಟಿಂಗ್ ನೋಡಿ ಬೈದಿದ್ದ ಪ್ರತಿಯೊಬ್ಬರಿಗೂ ಬ್ಯಾಟ್ ಮೂಲಕವೇ ಉತ್ತರ ನೀಡಿದರು. ಅಲ್ಲದೆ ಟೀಮ್ ಇಂಡಿಯಾಗೆ ತನ್ನ ಅವಶ್ಯಕತೆ ಯಾಕಿದೆ ಎಂಬುದನ್ನು ಇಡೀ ವಿಶ್ವಕ್ಕೆ ಸಾರಿ ಹೇಳಿದರು. ಈ ಮೂಲಕ ತನ್ನ ವಿರುದ್ಧ ಕೇಳಿ ಬರುತ್ತಿದ್ದ ಎಲ್ಲಾ ಟೀಕೆ ಟಿಪ್ಪಣಿಗಳಿಗೆ ಕನ್ನಡಿಗ ಫುಲ್ ಸ್ಟಾಪ್ ಇಟ್ಟಿದ್ದಾರೆ.



# ಫಿಲ್ಮ್ ಫೆಸ್ಟಿವಲ್‌ನಲ್ಲಿ ಉರ್ಫಿ

ಜೈಪುರದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಇಂಡಿಯನ್ ಫಿಲ್ಮ್ ಅಕಾಡೆಮಿ ಅವಾರ್ಡ್ ಕಾರ್ಯಕ್ರಮದಲ್ಲಿ ನಟಿ ಕಮ್ ಮಾಡೆಲ್ ಉರ್ಫಿ ಜಾವೇದ್ ಕಾಣಿಸಿಕೊಂಡಿದ್ದಾರೆ. ಉರ್ಫಿ ಜಾವೇದ್ ಶನಿವಾರ ರಾತ್ರಿ ಜೈಪುರದಲ್ಲಿ ಖಖಈಂ 2025ರ ಗ್ರೀನ್ ಕಾರ್ಪೆಟ್ ಮೇಲೆ ಕಾಣಿಸಿಕೊಂಡರು. ಉರ್ಫಿಯ ವಿಶೇಷ ಉಡುಗೆ ಗಮನಸೆಳೆದಿದೆ.

ಉರ್ಫಿ ಜಾವೇದ್ ಖಖಈಂ 2025ರಿಂದ ತಮ್ಮ ಅಪಿಯರೆನ್ಸ್‌ನ ಫೋಟೋಗಳನ್ನ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. ಆದರೆ ಅಷ್ಟೇ ವೇಗದಲ್ಲಿ ಉರ್ಫಿ ಟ್ರೋಲ್ ಆಗಿದ್ದಾರೆ. ಫಿಲ್ಮ್ ಅವಾರ್ಡ್ ಕಾರ್ಯಕ್ರಮದಲ್ಲಿ ಉರ್ಫಿ ವಿಶೇಷ ಥೀಮ್ ಉಡುಪು ಧರಿಸಿ ಹಾಜರಾಗಿದ್ದರು.

ಉರ್ಫಿ ತಮ್ಮ ಫೋಟೋಗಳ ಕ್ಯಾಪ್ಷನ್‌ನಲ್ಲಿ, 'ಕಳೆದ ರಾತ್ರಿ ಖಖಈಂದ 25ನೇ ಆನಿವರ್ಸರಿಯಲ್ಲಿ ನಮ್ಮ ಶೋ ನಾಮಿನೇಟ್ ಆಗಿತ್ತು' ಅಂತ ಬರೆದಿದ್ದಾರೆ. ಖಈಂದಲ್ಲಿ ನಾನು ಹಾಕೊಂಡಿದ್ದ ಬ್ಲ್ಯಾಕ್ ಡ್ರೆಸ್ ಡಿಸೈನರ್ ರಾಹುಲ್ ಮಿಶ್ರಾ ಡಿಸೈನ್ ಮಾಡಿದ್ದು ಅಂತ ಉರ್ಫಿ ಹೇಳಿದ್ದಾರೆ.

ಖಖಈಂದಲ್ಲಿ ಉರ್ಫಿ ಜಾವೇದ್ ಕರೀನಾ ಕಪೂರ್‌ನ ಭೇಟಿಯಾಗಿದ್ದಾರೆ. ಹಲವು ಸೆಲೆಬ್ರೆಟಿಗಳನ್ನು ಉರ್ಫಿ ಭೇಟಿಯಾಗಿದ್ದಾರೆ. ಆರಂಭದಲ್ಲಿ ಉರ್ಫಿ ಫ್ಯಾಶನ್ ಬಗ್ಗೆ ಮಾರುದ್ದ ದೂರ ಹೋಗುತ್ತಿದ್ದ ಸೆಲೆಬ್ರೆಟಿಗಳು ಇದೀಗ ಉರ್ಫಿ ಫ್ಯಾಶನ್ ಸೆನ್ಸ್ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.

ಉರ್ಫಿ ಜಾವೇದ್ ಅವರ ವೈರಲ್ ಫೋಟೋಗಳನ್ನ ನೋಡಿದ ಮೇಲೆ ನೆಟ್ಟಿಗರು ಟ್ರೋಲ್ ಮಾಡ್ತಿದ್ದಾರೆ. ಫಿಲ್ಮ್ ಅಕಾಡೆಮಿ ಅವಾರ್ಡ್ ಕಾರ್ಯಕ್ರಮಕ್ಕೂ ಉರ್ಫಿ ಬಂದಿದ್ದಾರೆ. ಇನ್ನು ಸಿನಿಮಾ ಸೆಲೆಬ್ರೆಟಿಗಳು ಫ್ಯಾಶನ್ ಮರೆತು ಬಿಡುತ್ತಾರೆ ಎಂದು ಟ್ರೋಲ್ ಮಾಡುತ್ತಿದ್ದಾರೆ. ಉರ್ಫಿ ಸೋಶಿಯಲ್ ಮೀಡಿಯಾದಲ್ಲೇ ವಿಡಿಯೋ ಹಾಕಿದರೆ ಚಂದ, ಕಾರ್ಯಕ್ರಮ ಉರ್ಫಿಗೆ ಸೂಟ್ ಆಗಲ್ಲ ಎಂದು ಹಲವರು ಹೇಳಿದ್ದಾರೆ. ಈ ಬಾರಿ ಉರ್ಫಿಯನ್ನು ಉಡುಗೆಯಿಂದ ಟ್ರೋಲ್ ಮಾಡಿಲ್ಲ. ಆದರೆ ಇಲ್ಲಿ ಯಾಕೆ ಅನ್ನೋ ಪ್ರಶ್ನೆ ಮುಂದಿಟ್ಟಿದ್ದಾರೆ.

# ಇದೆಲ್ಲ ನಮಗೆ ಹೊಸದಲ್ಲ

ನಟ ಶಾಹಿದ್ ಕಪೂರ್ ಮತ್ತು ನಟಿ ಕರೀನಾ ಕಪೂರ್ ಅವರ ಲವ್ ಸ್ಟೋರಿ ಎಲ್ಲರಿಗೂ ಗೊತ್ತಿರುವಂಥದ್ದು. ಒಂದು ಕಾಲದಲ್ಲಿ ಅವರು ಪ್ರೀತಿಯಲ್ಲಿ ಮುಳುಗಿದ್ದರು.

ಜೊತೆಯಾಗಿ ನಟಿಸಿದ 'ಜಬ್ ವಿ ಮೆಟ್' ಸಿನಿಮಾ ಸೂಪರ್ ಹಿಟ್ ಆಗಿತ್ತು. ಆದರೆ ನಂತರದ ದಿನಗಳಲ್ಲಿ ಅವರ ನಡುವೆ ಬಿರುಕು ಮೂಡಿತು. ಬಳಿಕ ಅವರಿಬ್ಬರು ಬ್ರೇಕಪ್ ಮಾಡಿಕೊಂಡರು. ಅದೆಲ್ಲ ಹಳೇ ಕಥೆ.

ಹೊಸ ವಿಷಯ ಏನೆಂದರೆ, ಈಗ ಶಾಹಿದ್ ಕಪೂರ್ ಮತ್ತು ಕರೀನಾ ಕಪೂರ್ ಅವರು ಮತ್ತೆ ಭೇಟಿ ಆಗಿದ್ದಾರೆ. ವೇದಿಕೆಯಲ್ಲಿ ಒಬ್ಬರನ್ನೊಬ್ಬರು ತಬ್ಬಿಕೊಂಡಿದ್ದಾರೆ. ಅವರಿಬ್ಬರನ್ನು ಒಟ್ಟಿಗೆ ನೋಡಿದ್ದಕ್ಕೆ ಅಭಿಮಾನಿಗಳಿಗೆ ಖುಷಿ ಆಗಿದೆ. ಬ್ರೇಕಪ್ ಬಳಿಕ ಕರೀನಾ ಕಪೂರ್ ಅವರು ಸೈಫ್ ಅಲಿ ಖಾನ್ ಜೊತೆ ಮದುವೆ ಆದರು. ಹಾಗೆಯೇ, ಶಾಹಿದ್ ಕಪೂರ್ ಅವರು ಮೀರಾ ರಜಪೂರ್ ಜೊತೆ ದಾಂಪತ್ಯ ಜೀವನ ಆರಂಭಿಸಿದರು. ಆ ಮೂಲಕ ಕರೀನಾ ಮತ್ತು ಶಾಹಿದ್ ಕಪೂರ್ ಬದುಕು ಬೇರೆ ಬೇರೆ ದಾರಿಯಲ್ಲಿ ಸಾಗಿತು. ಹಾಗಿದ್ದರೂ ಕೂಡ ಅವರಿಬ್ಬರ ನಡುವೆ ಸ್ನೇಹ ಹಾಗೆಯೇ ಇದೆ. ಅದಕ್ಕೆ ಸಾಕ್ಷಿ ಈ ಹೊಸ ಘಟನೆ.

ಐಫಾ ಸಮಾರಂಭದ ಸುದ್ದಿಗೋಷ್ಠಿಯಲ್ಲಿ ಕರೀನಾ ಕಪೂರ್ ಖಾನ್ ಮತ್ತು ಶಾಹಿದ್ ಕಪೂರ್ ಅವರು ವೇದಿಕೆ ಹಂಚಿಕೊಂಡಿದ್ದಾರೆ. ವೇದಿಕೆಗೆ ಬಂದಾಗ ಇಬ್ಬರೂ ತಬ್ಬಿಕೊಂಡಿದ್ದಾರೆ. ಖುಷಿ ಖುಷಿಯಿಂದ ಮಾತನಾಡುತ್ತಾ ಎಲ್ಲರ ಕಣ್ಣು ಕುಕ್ಕಿದ್ದಾರೆ. ಮಾಜಿ ಪ್ರೇಮಿಗಳು ಹೀಗೆ ಕಾಣಿಸಿಕೊಂಡಿದ್ದನ್ನು ನೋಡಿ ಅಭಿಮಾನಿಗಳಿಗೆ ಅಚ್ಚರಿ ಆಗಿದೆ. ಬ್ರೇಕಪ್ ಬಳಿಕ ಒಬ್ಬರನ್ನೊಬ್ಬರು ಅವಾಯ್ಡ್ ಮಾಡಿಕೊಂಡು ತಿರುಗುತ್ತಿದ್ದ ಅವರು ಈಗ ಸಹಜ ಜೀವನಕ್ಕೆ ಮರಳಿದ್ದಾರೆ.

ಈ ಘಟನೆಯ ಬಗ್ಗೆ ಶಾಹಿದ್ ಕಪೂರ್ ಅವರಿಗೆ ಪ್ರಶ್ನೆ ಕೇಳಲಾಯಿತು. ಬಹಳ ದಿನಗಳ ನಂತರ ಕರೀನಾ ಅವರನ್ನು ಭೇಟಿಯಾಗಿದ್ದು ಹೇಗನಿಸಿತು ಎಂದು ಕೇಳಿದ್ದಕ್ಕೆ ಶಾಹಿದ್ ಉತ್ತರ ನೀಡಿದ್ದಾರೆ. 'ನಮಗೆ ಇದೆಲ್ಲ ಹೊಸದೇನೂ ಅಲ್ಲ. ಇಂದು ವೇದಿಕೆ ಮೇಲೆ ಭೇಟಿ ಆಗಿದ್ದೇವೆ ಅಷ್ಟೇ. ನಾವು ಆಗಾಗ ಅಲ್ಲಿ ಇಲ್ಲಿ ಭೇಟಿ ಆಗುತ್ತಲೇ ಇರುತ್ತೇವೆ. ನಮಗೆ ಅದು ತುಂಬ ಸಹಜ. ಜನರಿಗೆ ಖುಷಿ ಆಗಿದ್ದರೆ ನಮಗೂ ಖುಷಿ' ಎಂದು ಶಾಹಿದ್ ಕಪೂರ್ ಹೇಳಿದ್ದಾರೆ. ಈ ಮೊದಲು ಪರಿಸ್ಥಿತಿ ಹೀಗೆ ಇರಲಿಲ್ಲ. 2024ರಲ್ಲಿ ಕರೀನಾ ಕಪೂರ್ ಮತ್ತು ಶಾಹಿದ್ ಕಪೂರ್ ಅವರು ಒಂದು ಸಮಾರಂಭದಲ್ಲಿ ಮುಖಾಮುಖಿ ಆಗುವ ಸಂದರ್ಭ ಬಂದಿತ್ತು. ಆಗ ಕರೀನಾ ಅವರು ಶಾಹಿದ್ ಕಪೂರ್ ಅವರನ್ನು ಬಿಟ್ಟು ಇನ್ನುಳಿದವರನ್ನು ಮಾತನಾಡಿಸಿ ಮುಂದೆ ಸಾಗಿದ್ದರು. ಈಗ ಆ ಘಟನೆಯನ್ನು ಅಭಿಮಾನಿಗಳು ನೆನಪು ಮಾಡಿಕೊಂಡಿದ್ದಾರೆ. ಒಟ್ಟಿನಲ್ಲಿ ಈಗ ಇಬ್ಬರ ನಡುವಿನ ಮುನಿಸು ಅಂತ್ಯವಾಗಿದೆ ಎಂಬುದೇ ಖುಷಿ.



# ನಿವೃತ್ತಿ ಬಗ್ಗೆ ಕೊನೆಗೂ ಮೌನ ಮುರಿದ ರೋಹಿತ್



ಚಾಂಪಿಯನ್ಸ್ ಟ್ರೋಫಿಯ ಅಂತಿಮ ಪಂದ್ಯದಲ್ಲಿ ನ್ಯೂಝಿಲೆಂಡ್ ತಂಡವನ್ನು ಬಗ್ಗು ಬಡಿದು ಟೀಮ್ ಇಂಡಿಯಾ ಚಾಂಪಿಯನ್ ಪಟ್ಟ ಅಲಂಕರಿಸಿದೆ.

ದುಬೈನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನ್ಯೂಝಿಲೆಂಡ್ 251 ರನ್ ಕಲೆಹಾಕಿದರೆ, ಭಾರತ ತಂಡ ಈ ಗುರಿಯನ್ನು ಕೇವಲ 49 ಓವರ್‌ಗಳಲ್ಲಿ ಚೇಸ್ ಮಾಡಿದೆ. ಈ ಗೆಲುವಿನ ಬಳಿಕ ಸುದ್ದಿಗೋಷ್ಠಿಯಲ್ಲಿ ಕಾಣಿಸಿಕೊಂಡ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ತಮ್ಮ ನಿವೃತ್ತಿ ಬಗ್ಗೆ ಹರಿದಾಡುತ್ತಿರುವ ವದಂತಿಗಳಿಗೆ ತೆರೆ ಎಳೆದಿದ್ದಾರೆ.

ಈ ಹಿಂದೆ ಟಿ20 ವಿಶ್ವಕಪ್ ಗೆದ್ದ ಬಳಿಕ ಟೀಮ್ ಇಂಡಿಯಾ ದಿಗ್ಗಜರಾದ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಗುಡ್ ಬೈ ಹೇಳಿದ್ದರು. ಅದರಂತೆ ಚಾಂಪಿಯನ್ಸ್ ಟ್ರೋಫಿ ಮುಕ್ತಾಯದ ಬೆನ್ನಲ್ಲೇ 37 ವರ್ಷದ ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಲಿದ್ದಾರೆ ಎನ್ನಲಾಗಿತ್ತು. ಆದರೆ ಇವೆಲ್ಲವೂ ಕೇವಲ ವದಂತಿ ಎಂದು ರೋಹಿತ್ ಶರ್ಮಾ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಹಿಟ್‌ಮ್ಯಾನ್ "ನಾನು ಏಕದಿನ ಸ್ವರೂಪದಿಂದ ನಿವೃತ್ತಿ ಹೊಂದುತ್ತಿಲ್ಲ. ದಯವಿಟ್ಟು ಇಂತಹ ವದಂತಿಗಳನ್ನು ಹರಡಬೇಡಿ" ಎಂದು ಮನವಿ ಮಾಡಿದ್ದಾರೆ. ಇದರೊಂದಿಗೆ ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ನಲ್ಲಿ ಮುಂದುವರೆಯುವುದು ಕನ್ಫರ್ಮ್ ಆಗಿದೆ.

ಅಲ್ಲದೆ ಭವಿಷ್ಯದ ಬಗ್ಗೆ ಯಾವುದೇ ಯೋಜನೆಗಳಿಲ್ಲ ಎಂದು ತಿಳಿಸಿರುವ ರೋಹಿತ್ ಶರ್ಮಾ, ಏನು ಆಗುತ್ತಿದೆಯೋ ಅದು ಮುಂದುವರಿಯುತ್ತದೆ ಎಂದಿದ್ದಾರೆ. ಈ ಮೂಲಕ ಟೀಮ್ ಇಂಡಿಯಾ ಪರ ಮತ್ತಷ್ಟು ಕಾಲ ಆಡುವ ಇರಾದೆಯಲ್ಲಿದ್ದಾರೆ. ಸದ್ಯ ನಿವೃತ್ತಿ ನೀಡುತ್ತಿಲ್ಲ ಎಂದಿರುವ ರೋಹಿತ್ ಶರ್ಮಾ 2027ರ ಏಕದಿನ ವಿಶ್ವಕಪ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರಾ ಎಂಬುದೇ ಪ್ರಶ್ನೆ.

ಏಕೆಂದರೆ ಮುಂದಿನ ಎರಡು ವರ್ಷಗಳಲ್ಲಿ ಅವರ ವಯಸ್ಸು 39 ಆಗಿರಲಿದೆ. ಅತ್ತ ಏಕದಿನ ವಿಶ್ವಕಪ್ ಗೆಲ್ಲದಿರುವ ಕೊರಗು ಹೊಂದಿರುವ ಹಿಟ್‌ಮ್ಯಾನ್ ಅವರ ಮುಂದಿನ ಟಾರ್ಗೆಟ್ ಕೂಡ 50 ಓವರ್‌ಗಳ ವಿಶ್ವಕಪ್.

ಹೀಗಾಗಿ ಪ್ರಸ್ತುತ ಫಾರ್ಮ್ ಅನ್ನು ಮುಂದಿನ ಎರಡು ವರ್ಷಗಳ ಕಾಲ ಮುಂದುವರೆಸಿ ಏಕದಿನ ವಿಶ್ವಕಪ್‌ನೊಂದಿಗೆ ವೃತ್ತಿಜೀವನಕ್ಕೆ ವಿದಾಯ ಹೇಳಲು ಪ್ಲ್ಯಾನ್ ರೂಪಿಸಿದ್ದಾರೆ. ಇದಾಗ್ಯೂ 37 ವರ್ಷದ ರೋಹಿತ್ ಶರ್ಮಾ ಮುಂದಿನ ಎರಡು ವರ್ಷಗಳ ಕಾಲ ತಂಡದಲ್ಲಿ ಇರಲಿದ್ದಾರಾ ಎಂಬುದೇ ಪ್ರಶ್ನೆ.



# ತೆಲುಗು ಸಿನಿಮಾದಿಂದ ಹೊರಬಂದ ರುಕ್ಮಿಣಿ ವಸಂತ್

ಕನ್ನಡದ ಖ್ಯಾತ ನಟಿ ರುಕ್ಮಿಣಿ ವಸಂತ್ ಅವರಿಗೆ ಸಾಕಷ್ಟು ಬೇಡಿಕೆ ಸೃಷ್ಟಿ ಆಗಿದೆ. ಚಿತ್ರರಂಗದಲ್ಲಿ ಅವರು ಬ್ಯಾಕ್ ಟು ಬ್ಯಾಕ್ ಆಫರ್ ಪಡೆದುಕೊಳ್ಳುತ್ತಿದ್ದಾರೆ. ಇದಕ್ಕೆ ಕಾರಣ ಆಗಿದ್ದು 'ಸಪ್ತ ಸಾಗರದಾಚೆ ಎಲ್ಲೋ' ಚಿತ್ರ.

ರಕ್ಷಿತ್ ಶೆಟ್ಟಿ ನಟನೆಯ ಈ ಸಿನಿಮಾ ಸೂಪರ್ ಹಿಟ್ ಆದ ಬಳಿಕ ರುಕ್ಮಿಣಿ ವಸಂತ್ ಬೇರೆ ಬೇರೆ ಆಫರ್‌ಗಳನ್ನು ಪಡೆದುಕೊಂಡರು. ಈಗ ಅವರಿಗೆ ಟಾಲಿವುಡ್‌ನಿಂದಲೂ ಆಫರ್ ಬರುತ್ತಿದೆ. ಈ ಪೈಕಿ ಸ್ಟಾರ್ ಹೀರೋನ ಚಿತ್ರದಲ್ಲಿ ನಟಿಸೋಕೆ ರುಕ್ಮಿಣಿ ವಸಂತ್ ನೋ ಎಂದಿದ್ದಾರೆ ಎಂಬ ವರದಿ ಹರಿದಾಡಿದೆ.

ವಿಜಯ್ ದೇವರಕೊಂಡ ಅವರು 'ಕಿಂಗ್‌ಡಮ್' ಸಿನಿಮಾ ಶೂಟ್‌ನಲ್ಲಿ ಬ್ಯುಸಿ ಇದ್ದಾರೆ. ಈ ಚಿತ್ರವನ್ನು ಗೌತಮ್ ತಿನ್ನನುರಿ ಅವರು ನಿರ್ದೇಶನ ಮಾಡಿದ್ದಾರೆ. ಇದರ ಜೊತೆಗೆ ಅವರು 'ರೌಡಿ ಜನಾರ್ಧನ್' ಸಿನಿಮಾ ಕೆಲಸಗಳಲ್ಲೂ ಬ್ಯುಸಿ ಆಗಬೇಕಿದೆ.

ರವಿ ಕಿರಣ್ ಕೋಲಾ ಅವರು ಈ ಚಿತ್ರ ನಿರ್ದೇಶನ ಮಾಡಬೇಕಿದೆ. ದಿಲ್ ರಾಜು ಅವರು ಈ ಚಿತ್ರಕ್ಕೆ ಹಣ ಹೂಡುತ್ತಾ ಇದ್ದಾರೆ. ರುಕ್ಮಿಣಿ ವಸಂತ್ ಅವರು ಈ ಚಿತ್ರದಲ್ಲಿ ನಟಿಸಬೇಕಿತ್ತು.

ರುಕ್ಮಿಣಿ ವಸಂತ್ ಅವರಿಗೆ ಈ ಸಿನಿಮಾದಲ್ಲಿ ನಟಿಸೋ ಆಸಕ್ತಿ ಇತ್ತು. ಆದರೆ, ಡೇಟ್ ಹೊಂದಿಸಲು ಸಾಧ್ಯವಾಗಿಲ್ಲ ಎಂದು ವರದಿ ಆಗಿದೆ.

ರುಕ್ಮಿಣಿ ವಸಂತ್ ಅವರು ನಟ ಜೂನಿಯರ್ ಎನ್‌ಟಿಆರ್ ಹಾಗೂ ನಿರ್ದೇಶಕ ಪ್ರಶಾಂತ್ ನೀಲ್ ಸಿನಿಮಾ 'NTR31'ನಲ್ಲಿ ನಟಿಸಬೇಕಿದೆ. ಇದನ್ನು ಗಮನದಲ್ಲಿ ಇಟ್ಟುಕೊಂಡು ರುಕ್ಮಿಣಿ 'ರೌಡಿ ಜನಾರ್ಧನ್' ಸಿನಿಮಾದಿಂದ ಹೊರ ಹೋಗಿದ್ದಾರಂತೆ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878